ಸಂಪುಟ: 06 ಸಂಚಿಕೆ: 158 ಪುಟಗಳು: 08 ಗುರುವಾರ 20 ಆಗಸ್ಟ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಕಾರಣವೇನಾದರೂ ಇರಲಿ, ಇವತ್ತಿನ ದಿನವನ್ನು ಪ್ರೀತಿಸಿ. ಇಡೀ ದಿನದ ಕೆಲಸಗಳು ಸಲೀಸಾಗಲಿವೆ.

## ಬೆಂಗಳೂರಿನ ಹಲವೆಡೆ ಅಬ್ಬರಿಸಿದ ವರುಣ: ಮುಂದಿನ 6 ದಿನಗಳ ಕಾಲ ರಾಜ್ಯದ ಹಲವೆಡೆ ಮಳೆ ಮುನ್ಸೂಚನೆ

• ಉದಯವಾಹಿನಿ, ಬೆಂಗಳೂರು



ರಾಜಧಾನಿ ಬೆಂಗಳೂರಿನ ಹಲವೆಡೆ ಸಂಜೆ ಧಾರಾಕಾರ ಮಳೆಯಾಗಿದ್ದು, ನಗರದ ದಕ್ಷಿಣ ಭಾಗದಲ್ಲಿ ಭರ್ಜರಿ ವರ್ಷಧಾರೆಯಾಗಿದೆ. ಜಯನಗರ, ಪದ್ಮನಾಭನಗರ, ಜೆಪಿ ನಗರ, ಎಡೆಯೂರು, ಬಸವಗುಡಿ ಸೇರಿ ಹಲವೆಡೆ ವರುಣ ಅಬ್ಬರಿಸಿದ್ದು, ಕೆಲಸ ಮುಗಿಸಿ ಮನೆಗೆ ವಾಪಸ್ ಆಗುತ್ತಿದ್ದ ಸಾರ್ವಜನಿಕರು ಪರದಾಟ ನಡೆಸಿದ್ದಾರೆ. ಸುಮಾರು 20 ನಿಮಿಷಕ್ಕೂ ಹೆಚ್ಚು ಸಮಯ ಮಳೆಯಾಗಿದ್ದು, ವಾಹನಗಳ ಸಂಚಾರಕ್ಕೂ ಅಡಚಣೆ ಉಂಟಾಗಿದೆ. ಹವಾಮಾನ ಇಲಾಖೆ ನೀಡಿರುವ ಮಾಹಿತಿಯ ಪ್ರಕಾರ ಮುಂದಿನ 6 ದಿನಗಳ ಕಾಳ ಕರ್ನಾಟಕ ರಾಜ್ಯದಾದ್ಯಂತ ಅಲ್ಲಲ್ಲಿ ಜೋರಾದ ಗಾಳಿಯೊಂದಿಗೆ ಮಳೆ ಸಾಧ್ಯತೆ ಇದೆ.

ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಅಲ್ಲಲ್ಲಿ ಹಗುರದಿಂದ ಸಾದಾರಣ ಮಳೆಯಾಗಲಿದ್ದು, ಒಳನಾಡು ಜಿಲ್ಲೆಗಳಲ್ಲಿ ಬಿಸಿಲಿನ ವಾತಾವರಣ ಇರಲಿದೆಯಾದರೂ ಅಲ್ಲಲ್ಲಿ ಮೋಡದ ವಾತಾವರಣ ಅಥವಾ ಹಗುರ ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಲಾಗಿದೆ.

ಉಡುಪಿ ಜಿಲ್ಲೆಯ ಬ್ರಹ್ಮಾವರದ ಕುಂಜಾಲುವಿನಲ್ಲಿ ನಿನ್ನೆ (ಆಗಸ್ಟ್ 18) ರಾಜ್ಯದಲ್ಲಿಯೇ ಅತೀ ಹೆಚ್ಚು ಅಂದರೆ 107.5 ಮಿ.ಮೀ. ಮಳೆಯಾಗಿದೆ. ಪುತ್ತೂರು ತಾಲ್ಲೂಕಿನ ಬೆಳಂದೂರಿನಲ್ಲಿ 89.5 ಮಿ.ಮೀ., ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನ ಪಾರವಾಡದಲ್ಲಿ 63.5 ಮಿ.ಮೀ., ತೀರ್ಥಹಳ್ಳಿಯ ಆಗುಂಬೆಯಲ್ಲಿ 53 ಮಿ.ಮೀ., ಚಿಕ್ಕಮಗಳೂರಿನ ಮೂಡಿಗೆರೆಯ ನಿಡುವಾಲೆಯಲ್ಲಿ 43 ಮಿ.ಮೀ., ಮಡಿಕೇರಿಯ ಚೆಂಬುವಿನಲ್ಲಿ 39 ಮಿ.ಮೀ. ಮತ್ತು ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ 37 ಮಿ.ಮೀ. ಮಳೆಯಾಗಿದೆ.

## ಕ್ಯಾಪ್ಟನ್ ಅಭಿಮನ್ಯು ಆನೆಗೆ ರಾಜೋಚಿತ ಬೀಳ್ಕೊಡುಗೆ ನೀಡಿ: ಸಚಿವ ಈಶ್ವರ ಖಂಡ್ರೆ ಪತ್ರ

• ಉದಯವಾಹಿನಿ, ಬೆಂಗಳೂರು

ಆರು ಬಾರಿ ಚಿನ್ನದಂಬಾರಿ ಹೊತ್ತ 60 ವರ್ಷದ ಕ್ಯಾಪ್ಟನ್ ಅರ್ಜುನ ಆನೆಗೆ ಈ ಬಾರಿ ದಸರಾ ಜಂಬೂಸವಾರಿಯಲ್ಲಿ ಪಾಲ್ಗೊಳ್ಳಲು ಅವಕಾಶ ನೀಡಿ ರಾಜೋಚಿತ ಬೀಳ್ಕೊಡುಗೆ ನೀಡುವಂತೆ ಸಚಿವ ಈಶ್ವರ ಬಿ ಖಂಡ್ರೆ ಮನವಿ ಮಾಡಿದ್ದಾರೆ.

ಈ ಸಂಬಂಧ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಪತ್ರ ಬರೆದಿರುವ ಅವರು, ದಸರಾ ಮಹೋತ್ಸವದಲ್ಲಿ ನಾಡದೇವಿ ಚಾಮುಂಡೇಶ್ವರಿ ವಿರಾಜಮಾನಳಾದ 750 ಕೆ.ಜಿ. ತೂಕದ ಚಿನ್ನದಂಬಾರಿ ಹೊತ್ತು ಗಜಗಾಂಭೀರ್ಯದಿಂದ ಹೆಜ್ಜೆ ಹಾಕುತ್ತಿದ್ದ ಅಭಿಮನ್ಯುವಿಗೆ ನಾಡಿನಾದ್ಯಂತ ದೊಡ್ಡ ಅಭಿಮಾನಿ ಬಳಗವೇ ಇದೆ. ಏಕಾಏಕಿ ಅಭಿಮನ್ಯುವನ್ನು ದಸರಾ ಮಹೋತ್ಸವದಿಂದ ಹೊರಗಿಡುವ ಬದಲು ನಿಶಾನೆ ಆನೆಯಾಗಿ ಬಳಸಿ, ಗೌರವಪೂರ್ವಕವಾಗಿ ಹಾಗೂ ರಾಜೋಚಿತವಾಗಿ ಬೀಳ್ಕೊಡುಗೆ ನೀಡಬೇಕು ಎಂದು ಕೋರಿದ್ದಾರೆ.



ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಪ್ರಧಾನ ಆಕರ್ಷಣೆಯೇ ವಿಜಯದಶಮಿ ಜಂಬೂಸವಾರಿ. ದಸರಾದಲ್ಲಿ ಪಾಲ್ಗೊಳ್ಳುವ ಆನೆಗಳ ಬಗ್ಗೆ ರಾಜ್ಯದ ಜನತೆಗೆ ಅವಿನಾಭಾವ ಸಂಬಂಧವಿದೆ. ಚಿನ್ನದಂಬಾರಿ ಹೊರುವ ಆನೆಗಳ ಬಗ್ಗೆಯಂತೂ ವಿಶೇಷ ಪ್ರೀತಿ ಇದೆ. ಈ ಬಾರಿ ದಸರಾ ಮಹೋತ್ಸವದಿಂದ ಕ್ಯಾಪ್ಟನ್ ಅಭಿಮನ್ಯುವನ್ನು ಕೈಬಿಟ್ಟಿರುವುದು ಲಕ್ಷಾಂತರ ಅಭಿಮಾನಿಗಳಿಗೆ ಆಘಾತ ತಂದಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ನಾಗರಹೊಳೆಯ ಮತ್ತಿಗೋಡು ಶಿಬಿರದ 59 ವರ್ಷ ವಯಸ್ಸಿನ ಅಭಿಮನ್ಯು 300ಕ್ಕೂ ಹೆಚ್ಚು ಆನೆ ಸೆರೆ ಕಾರ್ಯಾಚರಣೆ ಹಾಗೂ 80ಕ್ಕೂ ಹೆಚ್ಚು ಹುಲಿ ಸೆರೆ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿರುವುದಲ್ಲದೇ, ಅಂಬಾರಿ ಹೊತ್ತು ರಾಜ್ಯದ ಜನರ ಹೃದಯದಲ್ಲಿ ನೆಲೆಸಿದ್ದಾನೆ ಎಂದೂ ಸಚಿವರು ತಿಳಿಸಿದ್ದಾರೆ. 1968ರಲ್ಲಿ ಕಾಕನಕೋಟೆ ಖೆಡ್ಡಾ ಕಾರ್ಯಾಚರಣೆಯಲ್ಲಿ ಸೆರೆ ಹಿಡಿಯಲಾಗಿದ್ದ ಅರ್ಜುನ 22 ಬಾರಿ ಜಂಬೂಸವಾರಿಯಲ್ಲಿ ಭಾಗಿಯಾಗಿ, 6 ಬಾರಿ ಚಿನ್ನದ ಅಂಬಾರಿಯನ್ನು ಹೊತ್ತಿದ್ದ. 60 ವರ್ಷ ತುಂಬಿದ ಬಳಿಕವೂ ದಸರಾ ಮಹೋತ್ಸವದಲ್ಲಿ ಭಾಗಿಯಾಗಿದ್ದ. ಅದೇ ರೀತಿ ಬಲರಾಮ ಕೂಡ ಪಾಲ್ಗೊಂಡಿದ್ದ. ಈ ಗೌರವವನ್ನು ಅಭಿಮನ್ಯುವಿಗೂ ನೀಡಿ, ಗೌರವಪೂರ್ವಕವಾಗಿ ಬೀಳ್ಕೊಡುಗೆ ನೀಡುವಂತೆ ಕೋರಿದ್ದಾರೆ.

### ಅಭಿಮನ್ಯುವಿಗೆ ವಿರಾಮ

ಈ ಬಾರಿಯ ದಸರಾ ಮಹೋತ್ಸವದ ಅತ್ಯಂತ ಪ್ರಮುಖ ಹಾಗೂ ಭಾವುಕ ವಿಚಾರವೆಂದರೆ, ಕಳೆದ ಸಾಲಿನಲ್ಲಿ ಯಶಸ್ವಿಯಾಗಿ ಅಂಬಾರಿ ಹೊತ್ತಿದ್ದ ಕಾಡಿನ ಕಾವಲುಗಾರ ಎಂದೇ ಖ್ಯಾತನಾದ ಅಭಿಮನ್ಯು ಆನೆಗೆ ಈ ಬಾರಿ ವಿಶ್ರಾಂತಿ ನೀಡಲಾಗಿದೆ. ಸತತ 6 ಬಾರಿ ಚಿನ್ನದ ಅಂಬಾರಿಯನ್ನು ಅತ್ಯಂತ ಗಾಂಭೀರ್ಯದಿಂದ ಹೊತ್ತು ರಾಜಬೀದಿಯಲ್ಲಿ ಹೆಜ್ಜೆ ಹಾಕಿದ್ದ ಅಭಿಮನ್ಯುಗೆ ಈ ವರ್ಷದ ಏಪ್ರಿಲ್ ತಿಂಗಳಿಗೆ 60 ವರ್ಷ ತುಂಬಿದೆ. ಅರಣ್ಯ ಇಲಾಖೆಯ ನಿಯಮಾವಳಿಗಳ ಪ್ರಕಾರ 60 ವರ್ಷ ಮೇಲ್ಪಟ್ಟ ಆನೆಗಳನ್ನು ಭಾರವಾದ ದಸರಾ ಕಾರ್ಯಚಟುವಟಿಕೆಗಳಿಂದ ದೂರವಿಡಬೇಕಾಗಿರುವುದರಿಂದ, ಅಧಿಕಾರಿಗಳು ಅಭಿಮನ್ಯುಗೆ ವಿಶ್ರಾಂತಿ ನೀಡಲು ನಿರ್ಧರಿಸಿದ್ದಾರೆ. ಕಾರ್ಯಾಚರಣೆಗಳಲ್ಲಿ ಕಾಂಬಿಂಗ್ ಸ್ಪೆಷಲಿಸ್ಟ್ ಎಂದೇ ಹೆಸರುವಾಸಿಯಾಗಿದ್ದ ಅಭಿಮನ್ಯುವಿನ ಸೇವೆ ದಸರಾ ಪ್ರಿಯರ ನೆನಪಿನಲ್ಲಿ ಸದಾ ಹಸನಾಗಿರಲಿದೆ.



## ಮಾಜಿ ಸಚಿವ ಬಿ.ಸಿ ನಾಗೇಶ್ ನಿಧನಕ್ಕೆ ವಿಧಾನ ಪರಿಷತ್‌ನಲ್ಲಿ ಸಂತಾಪ

• ಉದಯವಾಹಿನಿ, ಬೆಂಗಳೂರು

ಮಾಜಿ ಸಚಿವ ಬಿ.ಸಿ ನಾಗೇಶ್ ಅವರ ನಿಧನಕ್ಕೆ ವಿಧಾನ ಪರಿಷತ್ ನಲ್ಲಿ ಸಂತಾಪ ಸೂಚಿಸಲಾಯ್ತು. ಕಲಾಪ ಪ್ರಾರಂಭ ಆದ ಕೂಡಲೇ ಸಭಾಪತಿ ಸಲೀಂ ಅಹಮದ್ ಸಂತಾಪ ಸೂಚನೆ ಮಂಡನೆ ಮಾಡಿದ್ರು. ಸಭಾನಾಯಕ ಯತೀಂದ್ರ ಸಿದ್ದರಾಮಯ್ಯ, ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸಂತಾಪ ಸೂಚಿಸಿದರು. ಡಿಸಿಎಂ ಪರಮೇಶ್ವರ್ ಮಾತಾಡಿ, ಬಿ.ಸಿ.ನಾಗೇಶ್ ಅವರು ನನಗೆ ಆತ್ಮೀಯ ಸ್ನೇಹಿತರು. ಶಾಸಕರಾಗಿ, ಸಚಿವರಾಗಿ ಉತ್ತಮ ಕೆಲಸಗಳನ್ನು ಮಾಡಿದ್ದಾರೆ. ಸಚಿವರಾಗಿದ್ದ ವೇಳೆ ಜಿಲ್ಲೆಯ ಅಭಿವೃದ್ಧಿಯ ವಿಚಾರವಾಗಿ ನನಗೆ ಕರೆ ಮಾಡಿ ಸಲಹೆ ಪಡೆಯುತ್ತಿದ್ದರು.

1994ರಲ್ಲಿ ಮಧುಗಿರಿ ವಿಧಾನಸಭಾ ಕ್ಷೇತ್ರದಲ್ಲಿ ನಾನು ಸೋತಾಗ, ಖುದ್ದು ನನ್ನ ಮನೆಗೆ ಬಂದು ಭೇಟಿ ಮಾಡಿದ್ದರು. ತಾವು ಬಿಜೆಪಿ ಸೇರಬೇಕು. ನಿಮ್ಮನ್ನು ಚೆನ್ನಾಗಿ ನೋಡಿಕೊಳ್ಳುತ್ತೇವೆ ಎಂದು ಒತ್ತಾಯಿಸಿದ್ದರು.

## ಬಿಎಂಟಿಸಿ ಬಸ್ ಬಿಡಿ ಭಾಗ ಖರೀದಿಯಲ್ಲಿ ಗೋಲ್ಮಾಲ್ ತನಿಖೆಗೆ ಸಮಿತಿ ರಚನೆ: ಬೈರತಿ ಸುರೇಶ್

• ಉದಯವಾಹಿನಿ, ಬೆಂಗಳೂರು

ಬಿಎಂಟಿಸಿ ಬಸ್‌ನ ಬಿಡಿ ಭಾಗಗಳ ಖರೀದಿಯಲ್ಲಿ ಅಕ್ರಮವಾಗಿದ್ದು ತನಿಖೆಗೆ ಸಮಿತಿ ರಚನೆ ಮಾಡಿರೋದಾಗಿ ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ. ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದ ವೇಳೆ ಕಾಂಗ್ರೆಸ್ ಸದಸ್ಯ ಡಾ.ಗೋವಿಂದ್ ರಾಜ್ ಪ್ರಶ್ನೆ ಕೇಳಿದ್ರು. ಬಿಎಂಟಿಸಿ ಬಸ್ ಬಿಡಿ ಭಾಗ ಖರೀದಿಯಲ್ಲಿ ಅಕ್ರಮ ಆಗಿದೆ. ಎಷ್ಟು ಹಣ ಅಕ್ರಮ ಆಗಿದೆ. ಅಕ್ರಮ ತನಿಖೆಗೆ ಸಮಿತಿ ರಚನೆ ಮಾಡಲಾಗಿದೆಯಾ? ಅಕ್ರಮದಲ್ಲಿ ಭಾಗಿಯಾದವರ ಮೇಲೆ ಕ್ರಮ ಏನು? ನಕಲಿ ಬಿಲ್ ಸೃಷ್ಟಿ ಮಾಡಿ ಅಕ್ರಮ ಮಾಡಿರೋ ಗುತ್ತಿಗೆದಾರರ ಮೇಲೆ ಕ್ರಿಮಿನಲ್ ಕೇಸ್ ಹಾಕಲಾಗಿದೆಯಾ? ಅಂತ ಪ್ರಶ್ನೆ ಮಾಡಿದ್ರು. ಇದಕ್ಕೆ ಸಚಿವ ಬೈರತಿ ಸುರೇಶ್ ಉತ್ತರ ನೀಡಿ, ಅಕ್ರಮದ ಬಗ್ಗೆ ಮಾಹಿತಿ ಸ್ವೀಕಾರ ಬೆನ್ನಲ್ಲೇ ಮಾರ್ಚ್ 27 ರಂದು 5 ಅಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚನೆ ಮಾಡಲಾಗಿದೆ. ಸಮಿತಿ ಕೊಟ್ಟ ಪ್ರಾಥಮಿಕ ವರದಿ ಅನ್ವಯ 8 ಜನ ಅಧಿಕಾರಿ, ಸಿಬ್ಬಂದಿಗಳನ್ನ ಅಮಾನತು ಮಾಡಲಾಗಿದೆ.

## ಪಿಎಂ ಕೇರ್ಸ್ ಅತಿದೊಡ್ಡ ಸಾಂಸ್ಥಿಕ ಹಗರಣ, ಮೋದಿ ಸರ್ಕಾರದಿಂದ ಸಾರ್ವಜನಿಕರ ನಂಬಿಕೆಗೆ ಮಾಡಿರುವ ದ್ರೋಹ

• ಉದಯವಾಹಿನಿ, ಬೆಂಗಳೂರು

ಪಿಎಂ ಕೇರ್ಸ್ ದೇಶದ ಅತಿದೊಡ್ಡ ಸಾಂಸ್ಥಿಕ ಹಗರಣಗಳಲ್ಲಿ ಒಂದು ಹಾಗೂ ಪ್ರಧಾನಿ ಮೋದಿ ಸರ್ಕಾರದಿಂದ ಸಾರ್ವಜನಿಕ ನಂಬಿಕೆಗೆ ಮಾಡಿರುವ ದ್ರೋಹವಾಗಿದೆ ಎಂದು ರಾಜ್ಯ ಗೃಹಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದ್ದಾರೆ. ಕೋವಿಡ್‌ನಂತಹ ತುರ್ತು ಪರಿಸ್ಥಿತಿಗಳನ್ನು ನಿಭಾಯಿಸಲು 2020ರಲ್ಲಿ ಸ್ಥಾಪಿಸಲಾದ ಪಿಎಂ ಕೇರ್ಸ್ ನಿಧಿಯಲ್ಲಿ ಸದ್ಯ ಒಟ್ಟು 8,452 ಕೋಟಿ ರೂ. ಹಣವಿರುವುದು ಇತ್ತೀಚಿನ ಆಡಿಟ್ ವರದಿ ತಿಳಿಸಿದೆ. ಈ ಬಗ್ಗೆ ಎಕ್ಸ್ ಪೋಸ್ಟ್ ಹಂಚಿಕೊಳ್ಳುವ ಮೂಲಕ ಸಚಿವರು ಪ್ರತಿಕ್ರಿಯಿಸಿದ್ದು, ಮೋದಿ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಪಿಎಂ ಕೇರ್ಸ್ ದೇಶದ ಅತಿದೊಡ್ಡ ಸಾಂಸ್ಥಿಕ ಹಗರಣಗಳಲ್ಲಿ ಒಂದು ಹಾಗೂ ಪ್ರಧಾನಿ ಮೋದಿ ಸರ್ಕಾರದಿಂದ ಸಾರ್ವಜನಿಕ ನಂಬಿಕೆಗೆ ಮಾಡಿರುವ ದ್ರೋಹವಾಗಿದೆ.

## ಸಿಎಲ್‌ಪಿ ಸಭೆಗೆ ಸಿದ್ದರಾಮಯ್ಯ ಗೈರು

# ಕೈ ಒಗ್ಗಟ್ಟು ಪ್ರತಿಪಕ್ಷಗಳಿಗೆ ತಿರುಗೇಟು

• ಉದಯವಾಹಿನಿ, ಬೆಂಗಳೂರು

ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಬಳಿಕ ತಮ್ಮ ಮೊದಲ ಕಾಂಗ್ರೆಸ್ ಶಾಸಕಾಂಗ ಸಭೆ ನಡೆಸಿದರು. ಈ ಸಂದರ್ಭದಲ್ಲಿ, ಒಗ್ಗಟ್ಟು ಕಾಯ್ದುಕೊಂಡು ಅಧಿವೇಶನದಲ್ಲಿ ಒಟ್ಟಾಗಿ ಪ್ರತಿಪಕ್ಷಗಳನ್ನು ಎದುರಿಸುವಂತೆ ಅವರು ಶಾಸಕರಿಗೆ ಸೂಚನೆ ನೀಡಿದರು. ಖಾಸಗಿ ಹೋಟೆಲ್‌ನಲ್ಲಿ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಅಧಿವೇಶನದ ಬಗ್ಗೆ ಚರ್ಚಿಸಲಾಯಿತು. ಸದನ ನಡೆಯುತ್ತಿದೆ. ಎಲ್ಲರೂ ಇರಬೇಕು, ಯಾರೂ ಗೈರಾಗಬಾರದು. ಪ್ರತಿಪಕ್ಷಗಳು ಬೇರೆ ಬೇರೆ ವಿಚಾರಗಳನ್ನು ಚರ್ಚೆಗೆ ತರುತ್ತಿವೆ. ನಾವೆಲ್ಲರೂ ಒಗ್ಗಟ್ಟಾಗಿ ಅವರನ್ನು ಎದುರಿಸಬೇಕು. ಸಚಿವರಿಗೆ ನೀವೆಲ್ಲರೂ ಬೆಂಬಲ ನೀಡಬೇಕು. ಸರ್ಕಾರದ ಪರ ಸಮರ್ಥನೆ ಮಾಡಿಕೊಳ್ಳಬೇಕು. ಸಚಿವ ಬಿ.ನಾಗೇಂದ್ರ ವಿಚಾರದಲ್ಲಿ ಒಗ್ಗಟ್ಟು ಪ್ರದರ್ಶಿಸಿ. ಯಾವುದೇ ಕಾರಣಕ್ಕೂ ಬಿ.ನಾಗೇಂದ್ರ ಅವರನ್ನು ಬಿಟ್ಟುಕೊಡಬಾರದು. ಎಲ್ಲರೂ ಅವರ ಪರವಾಗಿ ಧ್ವನಿ ಎತ್ತಬೇಕು.

ಪ್ರತಿಪಕ್ಷಗಳಿಗೆ ಸರಿಯಾಗಿ ತಿರುಗೇಟು ನೀಡಿ. ಬಿಜೆಪಿ ಹಗರಣಗಳನ್ನು ಕೆದಕಿ ಕೌಂಟರ್ ಕೊಡಿ. ಅವರ ಕೈ ಮೇಲಾಗದಂತೆ ನೋಡಿಕೊಳ್ಳಿ ಎಂದು ತಾಕೀತು ಮಾಡಿದರು. ನಾಯಕತ್ವ ಬದಲಾವಣೆ ಹೈಕಮಾಂಡ್ ನಿರ್ಧಾರ. ಎಸ್‌ಐಆರ್ ಬಗ್ಗೆ ಗಮನ ಇರಲಿ, ಪ್ರತಿ ತಿಂಗಳಲ್ಲಿ ಎರಡು ದಿನ ಶಾಸಕರ ಭೇಟಿಗೆ ಸಮಯ ಮೀಸಲಿಡಲಾಗುವುದು.

ಇದೇ ವೇಳೆ ಅನುದಾನ ನೀಡುವ ಬಗ್ಗೆ ಶಾಸಕರಿಗೆ ಸಿಎಂ ಭರವಸೆ ನೀಡಿದರು. ಅಲ್ಲದೆ, ಸ್ಥಳೀಯ ಸಂಸ್ಥೆಯ ಚುನಾವಣೆ ಮೇಲೆ ಗಮನ ಹರಿಸಿ. ಪಕ್ಷ ಸಂಘಟನೆ ಬಗ್ಗೆ ನಿಗಾವಹಿಸಿ. ಬರ, ಬೆಳೆ ವಿಮೆ, ಜಾನುವಾರು, ಕುಡಿಯುವ ನೀರು ಪೂರೈಕೆಗೆ ಒತ್ತು ನೀಡಿ ಎಂದು ಸಿಎಂ ಸಲಹೆ ಕೊಟ್ಟರು. ಬೆಂಗಳೂರಿನ ತಮ್ಮ ನಿವಾಸದಲ್ಲೇ ಇದ್ದರೂ ಅವರು ಸಿಎಲ್‌ಪಿ ಸಭೆಯಲ್ಲಿ ಭಾಗಿಯಾಗಲಿಲ್ಲ.

ಇದರ ಜೊತೆಗೆ ಶಾಸಕಾಂಗ ಸಭೆಗೆ ಮಂತ್ರಿ ಸ್ಥಾನ ವಂಚಿತ ಶಾಸಕರಾದ ಹೆಚ್.ಸಿ.ಮಹದೇವಪ್ಪ, ಶಿವಾನಂದ ಪಾಟೀಲ್, ಎಂ.ಕೃಷ್ಣಪ್ಪ, ಅವರ ಪುತ್ರ ಪ್ರಿಯಕೃಷ್ಣ, ಎಂ.ಸಿ.ಸುಧಾಕರ್, ಎಸ್.ಎನ್ ನಾರಾಯಣಸ್ವಾಮಿ, ಕೊತ್ತನೂರು ಮಂಜುನಾಥ್ ಕೂಡ ಸಭೆಯಿಂದ ದೂರ ಉಳಿದಿದ್ದರು.

1 ಸಿಎಂ ಡಿಕೆಶಿ ನೇತೃತ್ವದ ಮೊದಲ ಸಿಎಲ್‌ಪಿ ಸಭೆ
2 ಸಿಎಲ್‌ಪಿ ಸಭೆ ಕುತೂಹಲಕ್ಕೆ ಕಾರಣವಾಗಿದೆ ಸಿದ್ದರಾಮಯ್ಯ ಗೈರು
3 ವರ್ಗಾವಣೆಯಾಗುವ ಅಧಿಕಾರಿಗಳು ನಮ್ಮ ಮಾತುಗಳನ್ನ ಕೇಳೋದೆ ಇಲ್ಲ

### ಶಾಸಕರಿಗೆ ಸಲಹೆ

### ಎಲ್ಲರಿಗೂ ಸಚಿವ ಸ್ಥಾನ ಕೊಡಲು ಆಗಲಿಲ್ಲ, ಕ್ಷಮಿಸಿ

ಶಾಸಕಾಂಗ ಸಭೆಯಲ್ಲಿ ಸಿಎಂ ಡಿಕೆಶಿ, ಸಂಪುಟ ವಿಸ್ತರಣೆಯಲ್ಲಿ ಎಲ್ಲಾ ಆಕಾಂಕ್ಷಿಗಳಿಗೆ ಸಚಿವ ಸ್ಥಾನ ಸಿಗಲಿಲ್ಲ. ಆ ಬೇಸರ ನನಗೂ ಇದೆ. ಅದಕ್ಕಾಗಿ ನನ್ನನ್ನು ಕ್ಷಮಿಸಿ ಎಂದು ಕೋರಿದ್ದಾರೆ ಎಂದು ಹೇಳಲಾಗಿದೆ. ಈ ಹಿಂದೆ ನನಗೂ ಮಂತ್ರಿ ಪದವಿ ಕೊಡದಿದ್ದಾಗ ಯಾಕೆ ಎಂದು ನಾನು ಕೇಳಲಿಲ್ಲ. ಆದರೆ ಎಲ್ಲಾ ಸಂದರ್ಭದಲ್ಲಿ ನಿಷ್ಠೆಯಿಂದ ಕೆಲಸ ಮಾಡಿದ್ದೇನೆ. ಈಗ ಮುಖ್ಯಮಂತ್ರಿ ಮಾಡಿದ್ದಾರೆ. ನಮ್ಮ ಪಕ್ಷದಲ್ಲಿ ಮಂತ್ರಿ ಆಗಲು ಅರ್ಹತೆ ಇರುವ, ಹಿರಿಯರು ಅನೇಕರು ಇದ್ದಾರೆ. ಆದರೆ, ಎಲ್ಲರಿಗೂ ಕೊಡಲು ಆಗಿಲ್ಲ ಎಂದು ಸಿಎಂ ಹೇಳಿದ್ದಾರೆ ಎಂದು ಮೂಲಗಳು ತಿಳಿಸಿವೆ. ಪರಿಷತ್ ಚುನಾವಣೆಯಲ್ಲಿ ಐದನೇ ಅಭ್ಯರ್ಥಿಯನ್ನು ಗೆಲ್ಲಿಸಿದ್ದು, ಅದನ್ನು ಸಹಿಸಲು ಬಿಜೆಪಿ, ಜೆಡಿಎಸ್‌ನವರಿಗೆ ಆಗುತ್ತಿಲ್ಲ. ಹೀಗಾಗಿ ವಿದಾನಸಭೆಯಲ್ಲಿ ನಮ್ಮ ಮೇಲೆ ಮುಗಿ ಬೀಳುತ್ತಿದ್ದಾರೆ ಎಂದು ಸಿಎಂ ಸಭೆಯಲ್ಲಿ ಹೇಳಿರುವುದಾಗಿ ಮೂಲಗಳು ತಿಳಿಸಿವೆ. ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ ಅವರ ಮೇಲೂ ಕೇಸ್ ಇದೆ. ಅವರು ಅಧಿಕಾರದಲ್ಲಿ ಇಲ್ವಾ? ಎಂದು ಸಿಎಂ ಪ್ರಶ್ನಿಸಿರುವುದಾಗಿ ತಿಳಿದುಬಂದಿದೆ.



### ಬೇಸರ ನನಗೂ ಇದೆ

ಪ್ರತಿಪಕ್ಷಗಳಿಗೆ ರಾಜಕಾರಣ ಮಾಡಲು ವಿಷಯ ಬೇಕು ಅಷ್ಟೇ. ಬಿಡದಿ ಟೌನ್‌ಶಿಪ್ ವಿಚಾರದಲ್ಲೂ ಏನೂ ಇಲ್ಲ. ಅವರೇ ಆರಂಭಿಸಿದ ಯೋಜನೆ. ಈಗ ಅವರೇ ಗಲಾಟೆ ಮಾಡುತ್ತಿದ್ದಾರೆ. ನಾವೂ ರಾಜಕೀಯವಾಗಿಯೇ ಎದುರಿಸೋಣ ಎಂದು ಶಾಸಕರಿಗೆ ಸಲಹೆ ನೀಡಿದರು ಎನ್ನಲಾಗಿದೆ.

## ಡಿಕೆಶಿ ಸರ್ಕಾರ ರಚನೆಯಾದ ಬಳಿಕ ಮಾಜಿ ಸಿಎಂ 'ಅಂತರದ' ನಡೆ

### ಶಾಸಕರಿಗೆ ಕಿವಿ ಮಾತು

### ಶಾಸಕರ ಮಾತಿಗೆ ಒಪ್ಪಿಗೆ

ಪಿಡಿಒ, ವೈದ್ಯರು ಸೇರಿದಂತೆ ಕೆಲ ಹುದ್ದೆಗಳ ಕೌನ್ಸೆಲಿಂಗ್ ವರ್ಗಾವಣೆಗೆ ಶಾಸಕರು ಸಿಎಲ್‌ಪಿ ಸಭೆಯಲ್ಲಿ ಅಸಮಾಧಾನ ಹೊರಹಾಕಿದ್ದಾರೆ ಎಂಬ ಮಾಹಿತಿ ಇದೆ. ಕೌನ್ಸೆಲಿಂಗ್ ಮೂಲಕ ವರ್ಗಾವಣೆಯಾಗುವ ಅಧಿಕಾರಿಗಳು ಶಾಸಕರು ಮಾತುಗಳನ್ನ ಕೇಳೋದೆ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಯಾವ ಅಧಿಕಾರಿ ಕ್ಷೇತ್ರಕ್ಕೆ ಬಂದಿದ್ದಾರೆ ಎಂಬುದೇ ಗೊತ್ತಾಗೋದಿಲ್ಲ. ಜನರು ಕೆಲಸ ಮಾಡಿಕೊಡಿ ಎಂದು ಬರುತ್ತಾರೆ. ನಾವು ಜನರ ಕೆಲಸವನ್ನು ಮಾಡಿಕೊಡಬೇಕು. ಆದರೆ ಅಧಿಕಾರಿಗಳು ನಮ್ಮ ಮಾತನ್ನು ಕೇಳೋದೆ ಇಲ್ಲ. ಮೊದಲು ಕೌನ್ಸೆಲಿಂಗ್‌ನ ನಿಲ್ಲಿಸಿ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆ ನಡೆಸಿ ಎಂದು ಶಾಸಕರು ಆಗ್ರಹಿಸಿದ್ದಾರೆ. ಶಾಸಕರ ಮಾತಿಗೆ ಒಪ್ಪಿಗೆ ನೀಡಿದ ಸಿಎಂ ಡಿ.ಕೆ ಶಿವಕುಮಾರ್, ಕೌನ್ಸೆಲಿಂಗ್ ಬದಲಿಗೆ ಸಾಮಾನ್ಯ ವರ್ಗಾವಣೆ ಪದ್ಧತಿ ಆರಂಭಿಸಲಾಗುವುದೆಂದು ಸಿಎಂ ಭರವಸೆ ನೀಡಿದರು. ಇದೇ ವೇಳೆ ಅನುದಾನ ನೀಡುವಂತೆಯೂ ಶಾಸಕರಿಂದ ಒತ್ತಾಯಿಸಿದರು. ಮುಂದೆ ಚುನಾವಣೆ ಎದುರಿಸಬೇಕಿದೆ, ಕ್ಷೇತ್ರದಲ್ಲಿ ಕೆಲಸ ಕಾರ್ಯಗಳು ಆಗಬೇಕಿದೆ. ಹಾಗಾಗಿ ಹೆಚ್ಚಿನ ಅನುದಾನ ನೀಡಬೇಕೆಂದು ಶಾಸಕರು ಸಭೆಯಲ್ಲಿ ಆಗ್ರಹಿಸಿದ ಪ್ರಸಂಗ ನಡೆಯಿತು.

### ಮಾಜಿ ಸಿಎಂ ಸಿದ್ದರಾಮಯ್ಯ, ಅತೃಪ್ತರು ಗೈರು

ಶಾಸಕಾಂಗ ಪಕ್ಷದ ಸಭೆಗೆ ಮಾಜಿ ಸಿಎಂ ಸಿದ್ದರಾಮಯ್ಯ ಗೈರಾಗಿದ್ದರು. ಸಿದ್ದರಾಮಯ್ಯ ಅಸಮಾಧಾನಗೊಂಡಿದ್ದಾರೆ ಎಂಬ ಚರ್ಚೆಯ ಮಧ್ಯೆ ಅವರು ಶಾಸಕಾಂಗ ಸಭೆಗೆ ಗೈರಾಗಿದ್ದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಮೊದಲ ದಿನದ ಕಲಾಪಕ್ಕೆ ಗೈರಾಗಿ, ಮರುದಿನ ಕೆಲಹೊತ್ತು ಹಾಜರಾಗಿದ್ದರು. ಸೋಮವಾರ ಸದನಕ್ಕೆ ಮತ್ತೆ ಗೈರಾಗಿದ್ದರೆ, ಮಂಗಳವಾರ ಬೆಳಗ್ಗೆ ಮತ್ತೆ ಹಾಜರಾಗಿ ವಾಪಸಾಗಿದ್ದರು. ಮಂಗಳವಾರ ಬೆಂಗಳೂರಿನ ತಮ್ಮ ನಿವಾಸದಲ್ಲೇ ಇದ್ದರೂ ಅವರು ಸಿಎಲ್‌ಪಿ ಸಭೆಯಲ್ಲಿ ಭಾಗಿಯಾಗಲಿಲ್ಲ.

## ಮೂಡಾ 50:50 ಸೈಟು ಹಂಚಿಕೆ ಹಗರಣ ಹಂಚಿಕೆಯಾಗಿದ್ದ ತಕ್ಷಣದಿಂದಲೇ ರದ್ದು

• ಉದಯವಾಹಿನಿ, ಬೆಂಗಳೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿಯಮಗಳನ್ನ ಉಲ್ಲಂಘಿಸಿ ಮಾಡಲಾಗಿದ್ದ 50:50 ಬದಲಿ ನಿವೇಶನಗಳ ಹಂಚಿಕೆಯನ್ನು ರಾಜ್ಯ ಸರ್ಕಾರ ರದ್ದು ಮಾಡಿದೆ. ಏಕಸದಸ್ಯ ವಿಚಾರಣಾ ಆಯೋಗದ ಶಿಫಾರಸ್ಸಿನಂತೆ, ಉನ್ನತ ಮಟ್ಟದ ತಾಂತ್ರಿಕ ಸಮಿತಿಯು ನೀಡಿರುವ ವರದಿಯನ್ವಯ ಈ ಆದೇಶ ಮಾಡಲಾಗಿದೆ. ತಕ್ಷಣದಿಂದ ಜಾರಿಗೆ ಬರುವಂತೆ 2023ರ ಮಾರ್ಚ್ 14ರ ನಿರ್ದೇಶನವನ್ನ ಉಲ್ಲಂಘಿಸಿ ಮಾಡಲಾದ ಎಲ್ಲಾ 50:50 ಬದಲಿ ನಿವೇಶನಗಳ ಹಂಚಿಕೆಯನ್ನ ರದ್ದುಪಡಿಸಿ ಆದೇಶ ಮಾಡಿದೆ. ನಿಯಮ ಉಲ್ಲಂಘಿಸಿ ಈಗಾಗಲೇ ಸಬ್-ರಿಜಿಸ್ಟ್ರಾರ್ ಕಚೇರಿಯಲ್ಲಿ ನೋಂದಣಿಯಾಗಿರುವ ಬದಲಿ ನಿವೇಶನಗಳ 'ಕ್ರಯಪತ್ರ'ಗಳನ್ನ ರದ್ದುಪಡಿಸಲು ಸಿವಿಲ್ ನ್ಯಾಯಾಲಯದಲ್ಲಿ ತಕ್ಷಣವೇ ದಾವೆ ಹೂಡುವುದು. ಇದುವರೆಗೆ ಕ್ರಯಪತ್ರವಾಗದ ಪ್ರಕರಣಗಳಲ್ಲಿ, ಸರ್ಕಾರದಿಂದ ಸ್ಪಷ್ಟ ಮಾರ್ಗಸೂಚಿ ರಚನೆಯಾಗಿ ಸೂಕ್ತ ನಿರ್ದೇಶನ ಬರುವವರೆಗೂ ಪ್ರಾಧಿಕಾರದಿಂದ ಯಾವುದೇ ಕ್ರಯಪತ್ರಗಳನ್ನ ನೀಡದಂತೆ ಹೇಳಿದೆ. ಈಗಾಗಲೇ ನೋಂದಣಿಯಾಗಿರುವ ನಿವೇಶನಗಳಿಗೆ ಖಾತಾ ಮಾಡಿಕೊಡುವುದನ್ನೂ ತಡೆಹಿಡಿಯಲು ಮೈಸೂರು ಮಹಾನಗರ ಪಾಲಿಕೆ, ಸಂಬಂಧಪಟ್ಟ ನಗರಸಭೆ ಹಾಗೂ ಗ್ರಾಮ ಪಂಚಾಯಿತಿಗಳಿಗೆ ನಿರ್ದೇಶನ ನೀಡುವಂತೆ ಸೂಚಿಸಿದೆ. ಒಂದು ವೇಳೆ ಖಾತಾ ಆಗಿದ್ದಲ್ಲಿ, ಕರ್ನಾಟಕ ನಗರ ಪಾಲಿಕೆಗಳ ಕಾಯ್ದೆ 1976, ಕರ್ನಾಟಕ ಮುನಿಸಿಪಲ್ ಕಾಯ್ದೆ 1961 ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರಡಿ ನಿಯಮಾನುಸಾರ ರದ್ದುಪಡಿಸಲು ಸ್ಥಳೀಯ ಸಂಸ್ಥೆಗಳಿಗೆ ಸೂಚಿಸುವುದು.

## ಬಿಜೆಪಿಯವರು ನಾನೊಬ್ಬ ದಲಿತ, ಆದಿವಾಸಿ ಎಂದು ಟಾರ್ಗೆಟ್

• ಉದಯವಾಹಿನಿ, ಬೆಂಗಳೂರು

ನಾನೊಬ್ಬ ದಲಿತ, ಆದಿವಾಸಿ ವ್ಯಕ್ತಿ ಎಂದು ಗುರಿಯಾಗಿಸಿ ಬಿಜೆಪಿ ನನ್ನ ರಾಜೀನಾಮೆ ಕೇಳುತ್ತಿದೆ ಎಂದು ಸಚಿವ ಬಿ.ನಾಗೇಂದ್ರ ಆರೋಪ ಮಾಡಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ತಮ್ಮ ರಾಜೀನಾಮೆಗೆ ಬಿಜೆಪಿ ಸದನದಲ್ಲಿ ಪ್ರತಿಭಟನೆ ಮಾಡುತ್ತಿರುವ ವಿಚಾರವಾಗಿ ಪ್ರತಿಕ್ರಿಯಿಸಿ, ವಾಲ್ಮೀಕಿ ನಿಗಮ ಹಗರಣದಲ್ಲಿ ನನ್ನ ಖಾತೆಗೆ ನಯಾ ಪೈಸೆ ಹಣ ಬಂದಿಲ್ಲ. ಇ.ಡಿ ಬಂದು ನನ್ನನ್ನು ಜೈಲಿಗೆ ಹಾಕಿತು. ಇ.ಡಿ ಅವರು ಯಾರ, ಯಾರ ಹೆಸರು ಹೇಳಬೇಕು ಎಂದು ನನ್ನ ಮೇಲೆ ಒತ್ತಡ ಹಾಕಿದ್ದರು. ಈ ಎಲ್ಲಾ ವಿಚಾರಗಳನ್ನು ಸದನದಲ್ಲಿ ಹೇಳಬೇಕು. ಒಬ್ಬ ದಲಿತ, ಆದಿವಾಸಿ ವ್ಯಕ್ತಿಯನ್ನು ಹೇಗಾದರು ಮಾಡಿ ತೆಗೆಯಬೇಕು ಎಂದು ಹುನ್ನಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಮನುವಾದಿಗಳು ಯಾವ ರೀತಿ ತೆಗೆದುಕೊಂಡು ಹೋಗುತ್ತಿದ್ದಾರೆ ಎಂಬ ವಿಚಾರ ಎಲ್ಲರಿಗೂ ಗೊತ್ತು. ಉತ್ತರಾಖಂಡದಲ್ಲಿ ಮಲ್ಲಿಕಾರ್ಜುನ ಖರ್ಗೆ ಭಾಷಣ ಮಾಡಿದ ಸ್ಥಳವನ್ನು ಮನುವಾದಿಗಳು ಹೋಗಿ ಶುದ್ದೀಕರಣ ಮಾಡಿದ್ದಾರೆ. ವರ್ಣಬೇಧ ಮಾಡುತ್ತಿದ್ದಾರೆ.

ನಾನು ಒಬ್ಬ ದಲಿತ, ಆದಿವಾಸಿ ಇದ್ದಾನೆ ಅವರನ್ನು ತೆಗೆಯಬೇಕು ಎಂಬ ಉದ್ದೇಶದಿಂದ ಹೀಗೆ ಮಾಡುತ್ತಿದ್ದಾರೆ.

## ಸಚಿವ ಬಿ.ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ-ಜೆಡಿಎಸ್ ಶಾಸಕರಿಂದ ಕೆಂಗಲ್ ಗೇಟ್ ಬಳಿ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಸಚಿವ ಬಿ. ನಾಗೇಂದ್ರ, ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ-ಜೆಡಿಎಸ್ ಶಾಸಕರು ಕೆಂಗಲ್ ಗೇಟ್ ಬಳಿ ಪ್ರತಿಭಟನೆ ನಡೆಸಿದರು. ರಾಜೀನಾಮೆ ಕೊಡಲೇಬೇಕು, ದಲಿತರಿಗೆ ಅನ್ಯಾಯ ಆಗಿದೆ ಎಂದು ಬಿಜೆಪಿ ಮತ್ತು ಜೆಡಿಎಸ್ ಘೋಷಣೆ ಕೂಗಿದರು. ಜೆಡಿಎಸ್-ಬಿಜೆಪಿ ಶಾಸಕರು ಪ್ಲೇ ಕಾರ್ಡ್ ಹಿಡಿದು ಪ್ರತಿಭಟನೆ ನಡೆಸಿದರು. ಪ್ರತಿಭಟನೆಯಲ್ಲಿ ಆರ್. ಅಶೋಕ್, ಬಿ.ವೈ. ವಿಜಯೇಂದ್ರ, ಸುನೀಲ್ ಕುಮಾರ್, ಅರವಿಂದ್ ಬೆಲ್ಲದ್, ಆರಗ ಜ್ಞಾನೇಂದ್ರ, ಸುರೇಶ್ ಕುಮಾರ್, ಎಸ್. ಆರ್ ವಿಶ್ವನಾಥ್, ಮುನಿರತ್ನ, ಮಂಜುಳಾ ಲಿಂಬಾವಳಿ, ಜೆಡಿಎಸ್ ನಿಂದ ಶಾಸಕ ಬಾಲಕೃಷ್ಣ, ಹೆಚ್.ಟಿ. ಮಂಜು, ಹರೀಶ್ ಗೌಡ ಸೇರಿದಂತೆ ಬಿಜೆಪಿ - ಜೆಡಿಎಸ್ ಶಾಸಕರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು. ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮಾತನಾಡುತ್ತಾ, ಒಬ್ಬ ಮಂತ್ರಿ ಉಳಿಸಲು ಕಾಂಗ್ರೆಸ್ ಮುಂದಾಗಿದೆ. ದಲಿತರ ಹಣವನ್ನು 600 ಅಕೌಂಟ್ ಗಳಿಗೆ ವರ್ಗಾವಣೆ ಮಾಡಿದ್ದಾರೆ. ಇವರ ಕುಟುಂಬ, ಸಂಬಂಧಿಗಳಿಗೆ ನೇರವಾಗಿ ಹಣ ಹೋಗಿದೆ. ಈ ವಿಚಾರ ಮಾಜಿ ಸಿಎಂ ಸಿದ್ದರಾಮಯ್ಯ, ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರಿಗೂ ಗೊತ್ತಿದೆ. ನೇರವಾಗಿ ಬಳ್ಳಾರಿ ಲೋಕಸಭಾ ಚುನಾವಣೆಗೆ ಹಣ ಹೋಗಿದೆ. ಸಿಬಿಐ ನಲ್ಲಿ ಮೂರು ಚಾರ್ಜ್ ಶೀಟ್ ಇದೆ ನಾಗೇಂದ್ರ ಮೇಲೆ. ಇವರೇ ಕಿಂಗ್ ಪಿನ್. ಕಾಂಗ್ರೆಸ್ ಶಾಸಕರೇ ಸದನದಲ್ಲಿ ಪತ್ತೆ ಇಲ್ಲ ಎಂದು ಕಿಡಿಕಾರಿದರು. ಹಣ ಕೊಟ್ಟವರಿಗೆ ಮಂತ್ರಿ ಎಂದು ಕಾಂಗ್ರೆಸ್ ಶಾಸಕರೇ ಹೇಳ್ತಿದ್ದಾರೆ. ನಾವು ಫೈಟ್ ಮಾಡ್ತಿರೋದು ಲೂಟಿ ಮಾಡಿರುವ ನಾಗೇಂದ್ರ ವಿರುದ್ದ. ಪರಮೇಶ್ವರ್ ಅವರು ದಲಿತರಾಗಿ ಅವರಿಗೆ ಬೆಂಬಲ ಕೊಡ್ತಿದ್ದಾರೆ. ಕಾಂಗ್ರೆಸ್‌ಗೆ ಮಾನ ಮರ್ಯಾದೆ ಇದಿದ್ರೆ, ಪ್ರತಿಭಟಿಸಿ ಎಲ್ಲರು ರಾಜೀನಾಮೆ ಕೊಡಬೇಕಿತ್ತು. ಮೂರು ದಿನದಿಂದ ಹೋರಾಟ ಮಾಡ್ತಿದ್ದೇವೆ. ಬರಗಾಲ, ಬಿಡದಿ ಟೌನ್ ಶಿಪ್, ಕೆಪಿಎಸ್‌ಸಿ ಕರ್ಮಕಾಂಡ, ಸೈನ್ ಟೋಲ್ ವಿಚಾರದ ಚರ್ಚೆ ಮಾಡಬೇಕು. ಧಾರವಾಡದಲ್ಲಿ ಪ್ರೊಟೆಸ್ಟ್ ಮಾಡುತ್ತಿದ್ದ ವಿದ್ಯಾರ್ಥಿಗಳನ್ನು ಅರೆಸ್ಟ್ ಮಾಡ್ತಿದ್ದೀರ. ಅವರ ಹೋರಾಟಕ್ಕೆ ಪರ್ಮಿಷನ್ ಕೊಟ್ಟಿಲ್ಲ. ನಾವು ಹೋರಾಟ ಮಾಡ್ತಿರೋದು ಹಣ ಖಜಾನೆಗೆ ಬರಬೇಕಂತ. ಆದ್ರೆ ಕಾಂಗ್ರೆಸ್ ಭ್ರಷ್ಟ ವ್ಯಕ್ತಿಗಾಗಿ ಹೋರಾಟ ಮಾಡ್ತಿದೆ ಎಂದರು. ಬಿಜೆಪಿ ಸರಿನಾ, ಕಾಂಗ್ರೆಸ್ ಸರಿನಾ ಜನ ತೀರ್ಮಾನ ಮಾಡಲಿ. ಮತ್ತೆ ಹಣ ದಲಿತರಿಗೆ ಹೋಗಬೇಕು. ಕಾಂಗ್ರೆಸ್‌ನವರು ಹಣ ನುಂಗಿದ್ದಾರೆ, ಅದಕ್ಕೆ ಸುಮ್ಮನೆ ಕೂತಿದ್ದಾರೆ. ಒಬ್ಬ ವ್ಯಕ್ತಿಗಾಗಿ ಸದನ ಹಾಳು ಮಾಡ್ತಿದ್ದಾರೆ. ಬೇರೆಯವರು ದಲಿತ ನಾಯಕರಿಲ್ವಾ... ಇವರೇ ಮಂತ್ರಿ ಯಾಕೆ ಆಗಬೇಕು.

ಜೆಡಿಎಸ್‌ನ ಎಲ್ಲಾ ನಾಯಕರು ಇದ್ರಲ್ಲಿ ಭಾಗಿಯಾಗಿದ್ದಾರೆ. ಕುಮಾರಸ್ವಾಮಿ ಹೋರಾಟಕ್ಕೆ ಬೆಂಬಲ ಕೊಟ್ಟಿದ್ದಾರೆ ಎಂದು ಹೇಳಿದರು. ಭ್ರಷ್ಟಾಚಾರಕ್ಕೆ ಜಾತಿ ಲೇಪನ ಮಾಡಬೇಡಿ ಎಂದು ವಾಗ್ದಾಳಿ ನಡೆಸಿದರು. ಸದನ ನಡೆಯಬೇಕು ಅಂದ್ರೆ, ಸದನದಲ್ಲಿ ರಾಜ್ಯದ ಸಮಸ್ಯೆ ಬಗ್ಗೆ ಚರ್ಚೆ ಆಗಬೇಕು. ಬಿಡದಿ, ನೈಸ್, ಬರ ಹಾಗೂ ಕೆಪಿಎಸ್‌ಸಿ ಬಗ್ಗೆ ಚರ್ಚೆ ಆಗಬೇಕು. ಆದರೆ ಸಿಎಂ ನೈಸ್ ಆಗಿ ಜನರ ಕಿವಿಗೆ ಹೂವು ಮುಡಿಸುವ ಕೆಲಸ ಮಾಡ್ತಾರೆ. ಮೂರು ವರ್ಷ ಬೆಂಗಳೂರು ಉಸ್ತುವಾರಿ ಆಗಿ ನಗರಕ್ಕೆ ಏನ್ ಕೆಲಸ ಮಾಡಿದ್ರಿ. ಒಂದು ಸ್ಕ್ವೈರ್ ಫೀಟ್ ಜಾಗಕ್ಕೆ ಎಷ್ಟು ಹಣ ಮಾಡಿದ್ರಿ ಎಂದು ವಿಜಯೇಂದ್ರ ಪ್ರಶ್ನಿಸಿದರು. ಅಲ್ಲದೆ ದಯವಿಟ್ಟು ಲೂಟಿ ಮಾಡಿದ ಸಚಿವನನ್ನು ತಮ್ಮ ಸಂಪುಟದಿಂದ ಕೈಬಿಡಬೇಕು. ಇಲ್ಲವಾದರೆ ನಮ್ಮ ಹೋರಾಟ ಹೀಗೆ ಮುಂದುವರೆಯುತ್ತದೆ ಎಂದು ಎಚ್ಚರಿಕೆ ನೀಡಿದರು.

> ಭ್ರಷ್ಟ ಸಚಿವರನ್ನು ಕೈಬಿಡಬೇಕು. ಪ್ರಮಾಣವಚನ ತೆಗೆದುಕೊಂಡು 24 ಗಂಟೆಯಲ್ಲಿ ಭ್ರಷ್ಟಾಚಾರ ಮಾಡಲು ಬಿಡಲ್ಲ ಅಂತ ಡಿ.ಕೆ ಶಿವಕುಮಾರ್ ಹೇಳಿದ್ರು. ಆದರೆ ಇವತ್ತು ಕೊಳ್ಳೆ ಹೊಡೆದ ನಾಗೇಂದ್ರ ಅವರನ್ನು ಕ್ಯಾಬಿನೆಟ್‌ಗೆ ಯಾಕೆ ತಗೊಂಡ್ರಿ... ನಾಗೇಂದ್ರ ಹೇಳ್ತಾರೆ, ದಲಿತರು ಎಂಬ ಕಾರಣಕ್ಕೆ ಬಿಜೆಪಿ, ಜೆಡಿಎಸ್ ವಿರೋಧ ಮಾಡ್ತಾರೆ ಅಂತಾ. ಆದ್ರೆ ದಲಿತ ಸಮುದಾಯದ ಹೆಸರು ಹೇಳಲು ನಾಗೇಂದ್ರ ಅವರಿಗೆ ಯಾವುದೇ ಯೋಗ್ಯತೆ ಇಲ್ಲ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ



### ಸರ್ಕಾರದ ವಿರುದ್ಧ ಘೋಷಣೆ

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ ಅಕ್ರಮದಲ್ಲಿ ಭಾಗಿಯಾದ ಆರೋಪ ಎದುರಿಸುತ್ತಿರುವ ಸಚಿವ ಬಿ. ನಾಗೇಂದ್ರ ಅವರನ್ನು ಸಂಪುಟದಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿ ಹು-ಧಾ ಬಿಜೆಪಿ ಜಿಲ್ಲಾ ಘಟಕದವರು ಪ್ರತಿಭಟನೆ ನಡೆಸಿದರು. ಜಿಲ್ಲಾಧಿಕಾರಿ ಕಚೇರಿ ಎದುರು ಸಮಾವೇಶಗೊಂಡ ಪ್ರತಿಭಟನಾಕಾರರು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ ಅಕ್ರಮದಲ್ಲಿ ಭಾಗಿಯಾದ ಆರೋಪದಲ್ಲಿ ಈ ಹಿಂದೆ ರಾಜೀನಾಮೆ ನೀಡಿದ್ದ ನಾಗೇಂದ್ರ ಅವರನ್ನು ಮತ್ತೆ ಸಂಪುಟಕ್ಕೆ ಸೇರಿಸಿಕೊಂಡಿರುವುದು ಖಂಡನೀಯ ಎಂದು ಪ್ರತಿಭಟನಾಕಾರರು ದೂರಿದರು. ಮುಖಂಡರಾದ ಜಯತೀರ್ಥ ಕಟ್ಟಿ, ಬಸವರಾಜ ಕುಂದಗೋಳಮಠ, ಪಾಲಿಕೆ ಸದಸ್ಯ ವಿಜಯಾನಂದ ಶೆಟ್ಟಿ, ಮಾಜಿ ಮೇಯರ್ ಮಂಜುಳಾ ಅಕ್ಕೂರ, ಪ್ರಮೋದ, ನಾಗರಾಜ ನಾಯ್ಕ ಪ್ರತಿಭಟನೆಯಲ್ಲಿದ್ದರು.

**ಈ ದಿನದ ದರ** ಪೆಟ್ರೋಲ್: 111.37₹/L | ಡೀಸೆಲ್ : 99.25₹/L | ಬಂಗಾರ: ₹ 15,497/Gram 24ct ₹ 14,205 /Gram 22ct | ಬೆಳ್ಳಿ: ₹235.00/

## 'ಸೇಫ್ ಫುಟ್‌ಪಾತ್ ಅಭಿಯಾನ' ಕೆಲವೇ ವಾರಗಳಿಗೆ ಸೀಮಿತವಾಯ್ತೆ ?

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಜುಲೈ 1ರಂದು ಸೇಫ್ ಫುಟ್‌ಪಾತ್ ಅಭಿಯಾನ ಆರಂಭಿಸಿತ್ತು. ಶಿವಾಜಿನಗರ ಸೇರಿದಂತೆ ಬೆಂಗಳೂರಿನ ಪ್ರಮುಖ ರಸ್ತೆಗಳಲ್ಲಿನ ಒತ್ತುವರಿಗಳನ್ನು ತೆರವುಗೊಳಿಸಿ ಪಾದಚಾರಿಗಳಿಗೆ ಮುಕ್ತ ಸ್ಥಳ ಕಲ್ಪಿಸುವುದು ಇದರ ಉದ್ದೇಶವಾಗಿತ್ತು.ಆದರೆ ಈ ನಿಯಮ ಕೆಲವೇ ದಿನಗಳ ಮಟ್ಟಿಗೆ ಸೀಮಿತವೇ ಎಂಬ ಸಂಶಯ ಉಂಟಾಗುತ್ತಿದೆ. ಈಗ ಕಂಡುಬರುವ ದೃಶ್ಯಗಳಲ್ಲಿ ವ್ಯಾಪಾರಿಗಳು ಮತ್ತೆ ಫುಟ್‌ಪಾತ್‌ಗಳನ್ನು ಬಟ್ಟೆ ಹಾಗೂ ಇತರ ವಸ್ತುಗಳ ಮಾರಾಟಕ್ಕೆ ಆಕ್ರಮಿಸಿಕೊಂಡಿರುವುದು ಕಂಡುಬಂದಿದೆ. ಇದರಿಂದ ಪಾದಚಾರಿಗಳು ಮತ್ತೆ ರಸ್ತೆಯಲ್ಲೇ ನಡೆದುಕೊಂಡು ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ.


ಉದಯವಾಹಿನಿ ಚಿತ್ರ

ಅಭಿಯಾನದ ಪರಿಣಾಮ ಎಷ್ಟು ದಿನ ಉಳಿಯಲಿದೆ ಎಂದು ನಿವಾಸಿಗಳು ಪ್ರಶ್ನಿಸಿದ್ದಾರೆ. ಪ್ರತಿಪಕ್ಷಗಳು ಇದನ್ನು ರಾಜಕೀಯ ನಾಟಕ ಎಂದು ಸರ್ಕಾರವನ್ನು ಟೀಕಿಸಿವೆ.

ಮತ್ತೊಂದೆಡೆ, ಕೆಲವರು ನ್ಯಾಯಸಮ್ಮತ ತೆರವು ಕ್ರಮಕ್ಕಾಗಿ 2014ರ ಬೀದಿ ವ್ಯಾಪಾರಿಗಳ ಕಾಯ್ದೆಯನ್ನು ಅನುಸರಿಸುವಂತೆ ಹಾಗೂ ದೀರ್ಘಕಾಲಿಕ ಪರಿಹಾರಕ್ಕಾಗಿ ನಿಗದಿತ ವ್ಯಾಪಾರ ವಲಯಗಳನ್ನು ರೂಪಿಸುವಂತೆ ಒತ್ತಾಯಿಸಿದ್ದಾರೆ.

## ಪವಿತ್ರಾಗೌಡ ಮೆಂಟಲಿ ಡಿಸ್ಟರ್ಬ್ ಆಗಿದ್ದಾರೆ, ಆಕೆ ನನ್ನ ಮಗಳಿದ್ದಂತೆ: ಅವರ ಸ್ಥಿತಿ ಹೇಳಬಾರದು; ನಾಗಲಕ್ಷ್ಮೀ ಚೌಧರಿ

• ಉದಯವಾಹಿನಿ, ಬೆಂಗಳೂರು

ಜೈಲಿನಲ್ಲಿ ಪವಿತ್ರಾಗೌಡ ಮೆಂಟಲಿ ಡಿಸ್ಟರ್ಬ್ ಆಗಿದ್ದಾರೆ. ಅವರ ಸ್ಥಿತಿ ನೋವಿನಿಂದ ಕೂಡಿದೆ. ತಾಯಿಯಾಗಿ ನಮಗೆ ಪವಿತ್ರಾಗೌಡ ಅಥವಾ ಇತರ ಯಾವುದೇ ಹೆಣ್ಣುಮಗಳು ಇರಲಿ ಎಲ್ಲರೂ ಒಂದೇ, ಆಕೆಯೂ ನನಗೆ ಮಗಳ ಸಮಾನ' ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಹೇಳಿದ್ದಾರೆ.ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹಕ್ಕೆ ಭೇಟಿ ನೀಡಿ ಮಹಿಳಾ ಕೈದಿಗಳ ಯೋಗಕ್ಷೇಮ ಹಾಗೂ ಸಮಸ್ಯೆಗಳನ್ನು ಪರಿಶೀಲಿಸಿದ ಬಳಿಕ ಮಾಧ್ಯಮರೊಂದಿಗೆ ಮಾತನಾಡಿದ ಅವರು, ಪವಿತ್ರಾಗೌಡ ಮತ್ತು ಎಲ್ಲರ ಜೊತೆಗೆ ಮಾತನಾಡಿದ್ದೇನೆ. ಮಹಿಳಾ ಕೈದಿಗಳನ್ನು ಇಟ್ಟಿರುವ ಬ್ಯಾರಕ್‌ಗಳನ್ನು ಪರಿಶೀಲಿಸಿದ್ದೇನೆ. ಕೈದಿಗಳಿಗೆ


ಉದಯವಾಹಿನಿ ಚಿತ್ರ

ನೀಡುವ ಊಟ, ಸೋಪು, ಪೇಸ್ಟ್ ಸೇರಿದಂತೆ ಇತರೆ ಸೌಲಭ್ಯಗಳನ್ನೂ ಪರಿಶೀಲಿಸಿದ್ದೇನೆ. ಇದೇ ವೇಳೆ ಸೊಳ್ಳೆಗಳ ಕಾಟ ವಿಪರೀತವಿದೆ ಎಂಬುದಾಗಿ ಹಲವು ಕೈದಿಗಳು ನೋವು ತೋಡಿಕೊಂಡರು ಎಂದು ಹೇಳಿದರು. ಪವಿತ್ರಾ ಗೌಡ ಸೇರಿದಂತೆ ಹಲವು ಕೈದಿಗಳನ್ನು ಭೇಟಿ ಮಾಡಿ ಮಾಹಿತಿ ಪಡೆದುಕೊಂಡೆ. ಅವರ ಸ್ಥಿತಿ ಹೇಳಬಾರದು. ಪವಿತ್ರಾ ನನಗೆ ಮಗಳ ಸಮಾನ. ಕಾನೂನು ಪ್ರಕಾರ ಏನು ಆಗಬೇಕೊ ಅದು ಆಗುತ್ತದೆ. ಮಹಿಳೆಯರು ಭಾವನಾತ್ಮಕ ಜೀವಿಗಳು. ಇತರೆ ಮಹಿಳಾ ಕೈದಿಗಳ ಸಮಸ್ಯೆಯನ್ನೂ ಆಲಿಸಿದ್ದೇನೆ ಎಂದು ಪ್ರಶ್ನೆಗೆ ಉತ್ತರಿಸಿದರು.

> **200 ಮಂದಿ ಮಹಿಳಾ ಖೈದಿಗಳು ಜೈಲಿನಲ್ಲಿದ್ದಾರೆ. ಇಂದು ಆರು ಮಂದಿ ರಿಲೀಸ್ ಆಗಿದ್ದಾರೆ. ಮಹಿಳಾ ಕೈದಿಗಳ ಸ್ಥಿತಿಗತಿಗಳ ಬಗ್ಗೆ ಪರಿಶೀಲನೆ ನಡೆಸಲಾಗಿದೆ. ಮಹಿಳಾ ಕೈದಿಗಳಿಗೆ ನೀಡುವ ಊಟವನ್ನು ಸ್ವತಃ ಸೇವಿಸಿ ಪರಿಶೀಲನೆ ಮಾಡಿದ್ದೇನೆ. ತರಕಾರಿ ದಿನಸಿ ಸ್ಟೋರ್ ರೂಮ್ ಸ್ವಚ್ಛತೆ ಬಗ್ಗೆ ಪರಿಶೀಲನೆ ನಡೆಸಲಾಗಿದೆ ಎಂದು ಹೇಳಿದರು.-ನಾಗಲಕ್ಷ್ಮೀ ಚೌಧರಿ**

## ಕಾಂಗ್ರೆಸ್‌ನ ನರನಾಡಿದಲ್ಲೂ ಹರಿಯುತ್ತಿರುವ ತುಷ್ಟೀಕರಣ, ಓಲೈಕೆ

• ಉದಯವಾಹಿನಿ, ಬೆಂಗಳೂರು

ಸೋನಿಯಾ ಗಾಂಧಿ ಅವರ ಅಂಗಳದಲ್ಲಿ ಜೀ ಹುಜೂರ್ ಎಂದು ತಲೆಯಾಡಿಸುವ ಗುಲಾಮಿ ಮಾನಸಿಕತೆಯ ನಾಯಕರಿಗೆ, ಈ ಮಾತೃಭೂಮಿಯ ಕಲ್ಪನೆ ಮತ್ತು ಸ್ವಾತಂತ್ರ್ಯ ಹೋರಾಟದ ಪವಿತ್ರತೆ ಹೇಗೆ ತಾನೇ ಅರ್ಥವಾದೀತು ಅಲ್ಲವೇ ಹರಿಪ್ರಸಾದ್ ಅವರೇ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್ ಅಶೋಕ್ ಪ್ರಶ್ನಿಸಿದ್ದಾರೆ. ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅಶೋಕ್, ಜೈಲಿಗೆ ಹಾಕಿದ್ರೂ, ನೇಣಿಗೆ ಹಾಕಿದ್ರೂ ವಂದೇ ಮಾತರಂ ಪೂರ್ಣ ಹಾಡಲ್ಲ ಎನ್ನುತ್ತೀರಲ್ಲ, ನಿಮ್ಮ ಭಂಡತನಕ್ಕೆ ಏನು ಹೇಳೋಣ ವಂದೇ ಮಾತರಂ ಎನ್ನುವುದು ಬರೀ ಹಾಡಲ್ಲ. ಅದು ಬ್ರಿಟಿಷರ ಎದೆಯಲ್ಲಿ ನಡುಕ ಹುಟ್ಟಿಸಿ, ಕೋಟ್ಯಂತರ ಭಾರತೀಯರಲ್ಲಿ ಸ್ವಾತಂತ್ರ್ಯದ ಕಿಚ್ಚು ಹೊತ್ತಿಸಿದ ಪವಿತ್ರ ಮಂತ್ರ. ಲಕ್ಷಾಂತರ ಕ್ರಾಂತಿಕಾರಿಗಳು ನೇಣಿನ ಕುಣಿಕೆಯನ್ನು ನಗುತ್ತಾ ಮುದ್ದಾಡಲು ಸ್ಫೂರ್ತಿಯಾದ ಭಾರತ ಮಾತೆಯ ಜಯಘೋಷ ಎಂದಿದ್ದಾರೆ.

ಸ್ವಾತಂತ್ರ್ಯ ಸಂಗ್ರಾಮದ ಆತ್ಮವಾಗಿದ್ದ ಈ ಗೀತೆಯನ್ನು ಮತ್ತು ನಮ್ಮ ಅಮರ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗವನ್ನು ಇಷ್ಟೊಂದು ಹಗುರವಾಗಿ ನಿಂದಿಸುವುದು ಭಾರತ ಮಾತೆಗೆ ಎಸಗಿದ ಘೋರ ಅಪಚಾರ! ಎಂದು ಕಿಡಿಕಾರಿದ್ದಾರೆ.

ನಿಮಗೆ ದೇಶದ ಸ್ವಾತಂತ್ರ್ಯ ಚಳುವಳಿಯ ಇತಿಹಾಸಕ್ಕಿಂತ ಹೈಕಮಾಂಡ್ ತಾಳಕ್ಕೆ ಕುಣಿಯುವುದೇ ಹೆಚ್ಚಾಯಿತೇ? ಕಾಂಗ್ರೆಸ್‌ನ ನರನಾಡಿದಲ್ಲೂ ಹರಿಯುತ್ತಿರುವ ಈ ತುಷ್ಟೀಕರಣ ಮತ್ತು ಓಲೈಕೆ ಮನಸ್ಥಿತಿಯನ್ನು ಕನ್ನಡಿಗರು ಹಾಗೂ ಈ ದೇಶದ ಜನ ಎಂದಿಗೂ ಕ್ಷಮಿಸುವುದಿಲ್ಲ ಎಂದಿದ್ದಾರೆ.

## ಆರ್ಟ್ ಆಫ್ ಲಿವಿಂಗ್ ಸಂಸ್ಥೆಯಿಂದ ಸರ್ಕಾರಿ ಜಮೀನು ಒತ್ತುವರಿ ತೆರವಿಗೆ ಆಗ್ರಹಿಸಿ ಡಿಸಿಎಂಗೆ ಮನವಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆ.ಆರ್.ಪುರ,

ಆರ್ಟ್ ಆಫ್ ಲಿವಿಂಗ್‌ಸಂಸ್ಥೆಯು ಕೆರೆ, ಗೋಮಾಳ, ಸರ್ಕಾರಿ ಜಮೀನು ಹಾಗೂ ರಾಜಕಾಲುವೆಗಳನ್ನು ಒತ್ತುವರಿ ಮಾಡಿಕೊಂಡಿದೆ. ಕೂಡಲೇ ಸರ್ಕಾರ ಆ ಜಮೀನುಗಳನ್ನು ವಶಪಡಿಸಿಕೊಳ್ಳಬೇಕು. ಅಲ್ಲದೆ, ದಲಿತ ಮಹಿಳೆ ರಂಗಮ್ಮನವರಿಗೆ ಸೇರಿದ 2 ಎಕರೆ ಜಾಗವನ್ನು ಮರಳಿ ಅವರ ಸ್ವಾಧೀನಕ್ಕೆ ನೀಡಬೇಕು ಎಂದು ಆಗ್ರಹಿಸಿ ರಾಷ್ಟ್ರೀಯ ಅಂಬೇಡ್ಕರ್ ಸೇನೆ ಹಾಗೂ ಸಮತಾ ಸೈನಿಕ ದಳದ ವತಿಯಿಂದ ಸೋಮವಾರ ಬೃಹತ್ ಪಾದಯಾತ್ರೆ ಹಾಗೂ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಪ್ರತಿಭಟನೆಯ ನಂತರ, ರಾಷ್ಟ್ರೀಯ ಅಂಬೇಡ್ಕರ್ ಸೇನೆಯ ರಾಜ್ಯಾಧ್ಯಕ್ಷರಾದ ಅರ್ಜುನ್ ಗೋಪಾಲಯ್ಯ ಹಾಗೂ ಸಮತಾ ಸೈನಿಕ ದಳದ ಯುವ ಘಟಕದ ಅಧ್ಯಕ್ಷರಾದ ಚಳುವಳಿ ನಾಗೇಶ್ ನೇತೃತ್ವದ ನಿಯೋಗವು ವಿಧಾನಸೌಧದಲ್ಲಿ ಕರ್ನಾಟಕದ ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ. ಜಿ. ಪರಮೇಶ್ವರ್ ಅವರನ್ನು ಭೇಟಿ ಮಾಡಿ, ಈ ಕುರಿತು ಸಂಪೂರ್ಣ

**ಸ್ವೀಕರಿಸಿ ಡಿಸಿಎಂ ಪರಮೇಶ್ವರ್ ಅವರ ಭರವಸೆ:** ನಿಯೋಗದ ಮನವಿಯನ್ನು ಮಾತನಾಡಿದ ಡಿಸಿಎಂ ಡಾ. ಜಿ. ಪರಮೇಶ್ವರ್ ಅವರು, ಆರ್ಟ್ ಆಫ್ ಲಿವಿಂಗ್ ಸಂಸ್ಥೆಯವರು ಮಾನ್ಯ ಉಚ್ಚನ್ಯಾಯಾಲಯದಿಂದ ಮಧ್ಯಂತರ ತಡೆಯಾಜ್ಞೆ ತಂದಿದ್ದಾರೆ. ಈ ರೀತಿಯ ಪ್ರಕರಣಗಳನ್ನು ಬಗೆಹರಿಸಲು ಹಾಗೂ ಸರ್ಕಾರಿ ಜಮೀನುಗಳನ್ನು ರಕ್ಷಿಸಲು ವಿಶೇಷ 3 ಮಸೂದೆಯನ್ನು ತಯಾರಿಸಲಾಗುತ್ತಿದೆ. ಮುಂಬರುವ ಸದನದಲ್ಲಿ ಅದನ್ನು ಜಾರಿಗೆ ತರಲಾಗುವುದು ಎಂದು ಭರವಸೆ ನೀಡಿದರು. ಪ್ರಮುಖರು ಉಪಸ್ಥಿತರಿದ್ದರು. ಜಿಕೆ ಗೋಪಾಲ್ ನೇತೃತ್ವದ ಈ ನಿಯೋಗದಲ್ಲಿ ಅಂಬೇಡ್ಕರ್ ಸೇನೆ ಹಾಗೂ ವಿವಿಧ ದಲಿತ ಪರ ಸಂಘಟನೆಗಳ ಮುಖಂಡರು ಇದ್ದರು.

## ಬೆಳಗ್ಗೆ 10 ಗಂಟೆ ಆದ್ರೂ ಕಚೇರಿ ಖಾಲಿ; ಹಿಂಗೇ ಆದ್ರೆ ಕೆಲಸ ಮಾಡೋಕೆ ಹೇಗೆ ಸಾಧ್ಯ?

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಮೂಲದ ಉದ್ಯಮಿಯೊಬ್ಬರು, ನಗರದ ಸಂಚಾರ ದಟ್ಟಣೆಯ ಸಮಸ್ಯೆಗಳು ಉತ್ತಮ ಕೆಲಸವನ್ನು ಮಾಡುವ ಸಾಮರ್ಥ್ಯವನ್ನೇ 'ನಾಶಪಡಿಸುತ್ತಿವೆ' ಎಂದು ದೂರಿದ್ದಾರೆ. 'ಅಪ್ಲೈಡ್ ಎಐ ಸ್ಟುಡಿಯೋ' ಮತ್ತು 'ಅಪ್ಲೈಡ್ ಎಐ ಕ್ಲಬ್' ಕಮ್ಯುನಿಟಿ ಸ್ಥಾಪಕರಾದ ಬಾಲಾ ಪನ್ನೀರ್‌ಸೆಲ್ವಂ ಅವರು ಲಿಂಕ್ಡ್‌ಇನ್‌ನಲ್ಲಿ ಮಾಡಿರುವ ಪೋಸ್ಟ್‌ನಲ್ಲಿ ಬೆಳಿಗ್ಗೆ 10.15 ಗಂಟೆಯಾದರೂ ತಮ್ಮ ಕಚೇರಿಯಲ್ಲಿ ಒಬ್ಬರ ಸುಳಿವು ಇಲ್ಲದಿರುವ ಚಿತ್ರವನ್ನು ಹಂಚಿಕೊಂಡಿದ್ದಾರೆ. ದೀರ್ಘಕಾಲದ ಸಂಚಾರ ದಟ್ಟಣೆಯಿಂದಾಗಿ ಉದ್ಯೋಗಿಗಳಿಗೆ ಸಮಯಕ್ಕೆ ಸರಿಯಾಗಿ ಕಚೇರಿಗೆ ತಲುಪಲು ಸಾಧ್ಯವಾಗುತ್ತಿಲ್ಲ ಎಂಬುದನ್ನು ಎತ್ತಿ ತೋರಿಸಿದ್ದಾರೆ. ಕಚೇರಿಗೆ ಹಾಜರಾಗಲು ಉದ್ಯೋಗಿಗಳು ಪಡಬೇಕಾದ ಅಪಾರ ಶ್ರಮದ ಕಾರಣದಿಂದಾಗಿ, ಅವರು ಕೆಲಸದಲ್ಲಿ ತಮ್ಮ ಅತ್ಯುತ್ತಮ ಸಾಮರ್ಥ್ಯವನ್ನು ಪ್ರದರ್ಶಿಸಲು ಆಗಾಗ್ಗೆ ಸಾಧ್ಯವಾಗುತ್ತಿಲ್ಲ ಎಂದು ಪನ್ನೀರ್‌ಸೆಲ್ವಂ ಹೇಳಿದ್ದಾರೆ. ನಾವು ಕಚೇರಿಗೆ ಹಾಜರಾಗದಿದ್ದರೆ ಉತ್ತಮ ಕೆಲಸವನ್ನು ಹೇಗೆ ನಿರೀಕ್ಷಿಸಲು ಸಾಧ್ಯ, ಇಲ್ಲಿ ಸಮಸ್ಯೆಯಿರುವುದು ಜನರಲ್ಲಿ ಕಚೇರಿಗೆ ಬಂದು ತಲುಪಲು ಬೇಕಾಗುವ ಶ್ರಮವೇ ಮುಖ್ಯ ಸಮಸ್ಯೆಯಾಗಿದೆ ಎಂದು ಪನ್ನೀರ್‌ಸೆಲ್ವಂ ಹೇಳಿದರು.

## ಬಿ.ಸಿ.ನಾಗೇಶ್ ನನ್ನ ಹಳೆಯ ಸ್ನೇಹಿತ, ಪ್ರಾಥಮಿಕ ಶಿಕ್ಷಣಕ್ಕೆ ಅವರ ಕೊಡುಗೆ ಶ್ಲಾಘನೀಯ: ಸಿಎಂ ಡಿಕೆ.ಶಿವಕುಮಾರ್ ಸಂತಾಪ

• ಉದಯವಾಹಿನಿ, ಬೆಂಗಳೂರು

ಮಾಜಿ ಶಾಸಕ ಹಾಗೂ ಸಚಿವ ಬಿ.ಸಿ. ನಾಗೇಶ್ ಅವರ ನಿಧನಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ನಾಗೇಶ್ ಅವರ ಅಂತಿಮ ದರ್ಶನ ಪಡೆದು ಗೌರವ ಸಲ್ಲಿಸಿದ ಅವರು, ನಾಗೇಶ್ ಅವರು ತಮ್ಮೊಂದಿಗೆ ಶಾಸಕರಾಗಿ ಹಾಗೂ ಸಚಿವರಾಗಿ ಸೇವೆ ಸಲ್ಲಿಸಿದ್ದರು ಎಂದು ಸ್ಮರಿಸಿದರು.ನಾಗೇಶ್ ನನ್ನ ಹಳೆಯ ಸ್ನೇಹಿತರಾಗಿದ್ದು, ಶಾಸಕರಾಗಿ ಹಾಗೂ ಸಚಿವರಾಗಿ ತಮ್ಮೊಂದಿಗೆ ಸೇವೆ ಸಲ್ಲಿಸಿದ್ದರು. ಪ್ರಾಥಮಿಕ ಶಿಕ್ಷಣ ಕ್ಷೇತ್ರಕ್ಕೆ ಅವರು ನೀಡಿದ ಕೊಡುಗೆ ಶ್ಲಾಘನೀಯ ಎಂದು ಹೇಳಿದರು.

ಅವರ ಅಗಲಿಕೆ ಕುಟುಂಬ ಹಾಗೂ ಪಕ್ಷಕ್ಕೆ ತುಂಬಲಾರದ ನಷ್ಟವಾಗಿದ್ದು, ರಾಜ್ಯ ಸರ್ಕಾರದ ವತಿಯಿಂದ ಅವರಿಗೆ ಸೂಕ್ತ ಗೌರವ ಸಲ್ಲಿಸಲಾಗುವುದು ಎಂದು ತಿಳಿಸಿದರು.

## ಚೆನ್ನೈಯಲ್ಲಿ ಅಮಿತ್ ಶಾ ನೇತೃತ್ವದಲ್ಲಿ ದಕ್ಷಿಣ ರಾಜ್ಯಗಳ ಮುಖ್ಯಮಂತ್ರಿಗಳ ಸಭೆ ಸಿಎಂಭಾಗಿ

### ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದ ರಾಜ್ಯಗಳು ಒಗ್ಗಟ್ಟಿನಿಂದ ನಿಲ್ಲುವುದರಿಂದ ಮಾತ್ರ ಅದು ಸಾಧ್ಯ

• ಉದಯವಾಹಿನಿ, ಬೆಂಗಳೂರು

1 ರಾಜ್ಯಗಳು ಒಗ್ಗಟ್ಟಿನಿಂದ ನಿಲ್ಲಬೇಕು
2 ಹಿಂದಿನ ಐತಿಹಾಸಿಕ ಬೆಳವಣಿಗೆಗಳ
3 ಡಬ್ಲ್ಯುಸಿ ಸಭೆಯಲ್ಲಿ ಸಿಎಂ ಭಾಗಿ

ತಮಿಳುನಾಡಿನ ಚೆನ್ನೈ ಸಮೀಪದ ಮಹಾಬಲಿಪುರಂನಲ್ಲಿ ನಾಳೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ನಡೆಯಲಿರುವ ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭಾಗವಹಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಮಾತನಾಡಿದ ಅವರು, ದಕ್ಷಿಣ ಭಾರತದ ರಾಜ್ಯಗಳು ಒಗ್ಗಟ್ಟಿನಿಂದ ನಿಲ್ಲಬೇಕು ಎಂದು ಹೇಳಿದರು.

ಪ್ರಧಾನಿ ಅವರು ದೇಶವನ್ನು ಆರ್ಥಿಕ ಶಕ್ತಿಕೇಂದ್ರವನ್ನಾಗಿ ರೂಪಿಸಲು ಬಯಸುವುದಾದರೆ, ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದ ರಾಜ್ಯಗಳು ಒಗ್ಗಟ್ಟಿನಿಂದ ನಿಲ್ಲುವುದರಿಂದ ಮಾತ್ರ ಅದು ಸಾಧ್ಯ. ನಮ್ಮಲ್ಲಿರುವ ಪ್ರತಿಭೆ ಮತ್ತು ಸಾಮರ್ಥ್ಯ ಅಸಾಧಾರಣವಾಗಿದೆ ಎಂದು ಅವರು ವಿಧಾನಸಭೆಯಲ್ಲಿ ಹೇಳಿದರು.

ಪ್ರಧಾನಿ ಅವರು ಮೈಸೂರಿಗೆ ಭೇಟಿ ನೀಡಿದಾಗ, ರಾಜ್ಯದ ಹಿತಾಸಕ್ತಿಗಾಗಿ ಏನು ಮಾಡಬೇಕು ಎಂಬುದನ್ನು ಅವರಿಗೆ ವಿವರಿಸಿದ್ದೆ. ಹಿಂದಿನ ಐತಿಹಾಸಿಕ ಬೆಳವಣಿಗೆಗಳ ಬಗ್ಗೆ ಅವರ ಗಮನ ಸೆಳೆದು, ನಮ್ಮ ಸ್ಥಳೀಯ ಪ್ರತಿಭಾ ಸಂಪನ್ಮೂಲದ ಸಾಮರ್ಥ್ಯವನ್ನು ವಿವರಿಸಿದ್ದೆ ಎಂದರು.

ಬೆಂಗಳೂರಿನಲ್ಲಿ 26 ಲಕ್ಷ ಐಟಿ ವೃತ್ತಿಪರರು ಹಾಗೂ 2 ಲಕ್ಷ ವಿದೇಶಿ ಪಾಸ್‌ಪೋರ್ಟ್ ಹೊಂದಿರುವವರು ಇದ್ದಾರೆ ಎಂದು ಅವರು ತಿಳಿಸಿದರು.

ಅವರಲ್ಲಿ ಅನೇಕರು ವೈದ್ಯಕೀಯ ಕಾಲೇಜುಗಳನ್ನು ನಡೆಸುತ್ತಿದ್ದಾರೆ. ಪ್ರತಿವರ್ಷ ಇಲ್ಲಿ 13,940 ವೈದ್ಯರು ಹಾಗೂ 1 ಲಕ್ಷ ಪ್ಯಾರಾಮೆಡಿಕಲ್ ಸಿಬ್ಬಂದಿಗೆ ತರಬೇತಿ ನೀಡಲಾಗುತ್ತಿದೆ. ಇಂತಹ ಪ್ರತಿಭಾ ಸಂಪತ್ತು ಭಾರತದ ಬೇರೆ ಯಾವ ಭಾಗದಲ್ಲಿ ಕಾಣಸಿಗುತ್ತದೆ? ಈ ಪ್ರತಿಭೆಯನ್ನು ಹೇಗೆ ಗುರುತಿಸಿ ಬೆಂಬಲಿಸಬೇಕು? ಈ ಬಗ್ಗೆ


ಉದಯವಾಹಿನಿ ಚಿತ್ರ

ನೀವೂ ನಾನೂ ಯೋಚಿಸಬೇಕು. ಜಗತ್ತು ಬೆಂಗಳೂರನ್ನು ಗಮನಿಸುತ್ತಿದೆ. ಬೆಂಗಳೂರು ಮತ್ತು ಕರ್ನಾಟಕದ ಮೂಲಕ ದೇಶ ಅಭಿವೃದ್ಧಿ ಹೊಂದಬೇಕು ಎಂದು ನಾನು ಪ್ರಧಾನಿಗೆ ವೈಯಕ್ತಿಕವಾಗಿ ತಿಳಿಸಿದ್ದೇನೆ. ಇದನ್ನೆಲ್ಲ ಸಾಧ್ಯವಾಗಿಸಲು ನಾವೆಲ್ಲರೂ ಒಟ್ಟಾಗಿ ಕೆಲಸ ಮಾಡೋಣ ಎಂದು ಸದನಕ್ಕೆ ತಿಳಿಸಿದರು.

ವಿಧಾನಸಭೆಯಲ್ಲಿ ಕಾವೇರಿ ವಿಚಾರ ಪ್ರಸ್ತಾಪಿಸಿದ ಶಿವಕುಮಾರ್, ಬೆಂಗಳೂರಿಗೆ ನೀರು ಪೂರೈಸುವುದು ಸವಾಲಿನ ಕೆಲಸವಾಗಿದ್ದು, ತಮ್ಮ ಸರ್ಕಾರ ಈ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇಂದು ದೆಹಲಿಯಲ್ಲಿ ಮಧ್ಯಾಹ್ನ 3 ಗಂಟೆಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಧ್ಯಕ್ಷತೆಯಲ್ಲಿ ನಡೆಯಲಿರುವ ಕಾಂಗ್ರೆಸ್ ಕಾರ್ಯಕಾರಿ ಸಮಿತಿ (ಸಿಡಬ್ಲ್ಯುಸಿ) ಸಭೆಯಲ್ಲಿ ಭಾಗವಹಿಸಲಿದ್ದಾರೆ. ಸಿಡಬ್ಲ್ಯುಸಿ ಸದಸ್ಯ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. 2027ರ ಆರಂಭದಲ್ಲಿ ನಡೆಯಲಿರುವ ಉತ್ತರ ಪ್ರದೇಶ, ಪಂಜಾಬ್, ಉತ್ತರಾಖಂಡ, ಮಣಿಪುರ ಮತ್ತು ಗೋವಾ ಸೇರಿದಂತೆ ಐದು ರಾಜ್ಯಗಳ ವಿಧಾನಸಭಾ ಚುನಾವಣೆಗಳ ಕಾರ್ಯತಂತ್ರ ರೂಪಿಸುವುದು ಸಭೆಯ ಪ್ರಮುಖ ಅಜೆಂಡಾಗಳಲ್ಲಿ ಒಂದಾಗಿದೆ.

> **ಕಾವೇರಿ ವಿಚಾರದಲ್ಲಿ ಪ್ರತಿಪಕ್ಷಗಳು ನೀಡಿದ ಬೆಂಬಲಕ್ಕೆ ಅವರು ಧನ್ಯವಾದ ಸಲ್ಲಿಸಿದರು. ನಾನು ಈ ಹಿಂದೆ ಹೇಳಿದಂತೆ, ಪ್ರಯತ್ನ ವಿಫಲವಾದರೂ ಪ್ರಾರ್ಥನೆ ಎಂದಿಗೂ ವಿಫಲವಾಗುವುದಿಲ್ಲ. ನಾವೆಲ್ಲರೂ ಪ್ರಕೃತಿಯಲ್ಲಿ ಒಟ್ಟಾಗಿ ಪ್ರಾರ್ಥಿಸೋಣ.**
> ಸಿಎಂ ಡಿ.ಕೆ. ಶಿವಕುಮಾರ್

### ಅನೌಪಚಾರಿಕವಾಗಿ ಮಾತುಕತೆ

**ಕಾವೇರಿ ನೀರು ಹಂಚಿಕೆ ವಿವಾದ ಸೇರಿದಂತೆ ಅಂತರರಾಜ್ಯ ಸಮಸ್ಯೆಗಳ ಕುರಿತು ತಮಿಳುನಾಡಿನ ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರೊಂದಿಗೆ ಡಿ ಕೆ ಶಿವಕುಮಾರ್ ಅನೌಪಚಾರಿಕವಾಗಿ ಮಾತುಕತೆ ನಡೆಸಲಿದ್ದಾರೆಯೇ ಎಂಬ ಬಗ್ಗೆ ಕುತೂಹಲ ಮೂಡಿದೆ.**

> **ಈಶಾನ್ಯ ಭಾರತದ ಜನರು ಬೆಂಗಳೂರಿನಲ್ಲಿ ನೆಲೆಸಿದ್ದಾರೆ. ಹೊಸಕೋಟೆಯಲ್ಲಿ ಅಸ್ಸಾಂನ ಜನರು 10,000 ಯುವಕರಿಗೆ ತರಬೇತಿ ನೀಡಿದ್ದಾರೆ. ನಾವು ರಾಜ್ಯದ ಸಂಪತ್ತನ್ನು ಸಂರಕ್ಷಿಸಬೇಕು. ರಾಜಕೀಯವನ್ನು ಬದಿಗಿಟ್ಟು, ಯುವ ಪೀಳಿಗೆಯ ಭವಿಷ್ಯಕ್ಕಾಗಿ ಕೆಲಸ ಮಾಡಬೇಕು ಎಂದು ಅವರು ಹೇಳಿದರು.** ಸಿಎಂ ಡಿ.ಕೆ. ಶಿವಕುಮಾರ್

## ಕಾವೇರಿ ನೀರು ವಿವಾದ: ಸರ್ಕಾರಕ್ಕೆ ಎಲ್ಲವೂ ಗೊತ್ತಿದೆ, ನಾವು ರೈತರ ವಿರುದ್ಧವಲ್ಲ- ಸಚಿವ ಚಲುವರಾಯಸ್ವಾಮಿ

• ಉದಯವಾಹಿನಿ, ಬೆಂಗಳೂರು

ಕಾವೇರಿ ನದಿ ನೀರು ಹಂಚಿಕೆ ವಿಚಾರವಾಗಿ ಮಂಡ್ಯ ಹಾಗೂ ಕಾವೇರಿ ಜಲಾನಯನ ಪ್ರದೇಶದ ರೈತರು ನಡೆಸುತ್ತಿರುವ ಪ್ರತಿಭಟನೆಗಳ ಬಗ್ಗೆ ರಾಜ್ಯ ಸರ್ಕಾರಕ್ಕೆ ಅರಿವಿದೆ. ರೈತರ ಸಮಸ್ಯೆಗಳನ್ನು ಸರ್ಕಾರ ಅರ್ಥಮಾಡಿಕೊಂಡಿದ್ದು, ರೈತರ ವಿರುದ್ಧ ಸರ್ಕಾರವಿಲ್ಲ ಎಂದು ಸಚಿವ ಎನ್. ಚಲುವರಾಯಸ್ವಾಮಿ ಬುಧವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (ಅಫಾಂ) ನೀಡುವ ಆದೇಶಕ್ಕಾಗಿ ಕಾಯಬೇಕು ಎಂದು ರೈತರಿಗೆ ಮನವಿ ಮಾಡಿದರು.

ಮಂಡ್ಯ ಹಾಗೂ ಕಾವೇರಿ ಭಾಗದ ರೈತರ ಆತಂಕಗಳು ಸರ್ಕಾರದ ಗಮನದಲ್ಲಿದ್ದು, ಅವರ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

ಮಂಡ್ಯ ಹಾಗೂ ಕಾವೇರಿ ಜಲಾನಯನ ಪ್ರದೇಶದ ರೈತರು ಪ್ರತಿಭಟನೆ


ಉದಯವಾಹಿನಿ ಚಿತ್ರ

ನಡೆಸುತ್ತಿರುವುದು ನನಗೆ ಗೊತ್ತಿದೆ. ಆದರೆ, ನಾವು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶಕ್ಕಾಗಿ ಕಾಯಬೇಕಾಗಿದೆ. ನಾವು ರೈತರ ವಿರುದ್ಧವಲ್ಲ. ಮಂಡ್ಯ ಸೇರಿದಂತೆ ಇತರ ಭಾಗಗಳ ರೈತರ ಸಮಸ್ಯೆಗಳು ನಮಗೆ ತಿಳಿದಿವೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೂ ಈ ವಿಚಾರದ ಬಗ್ಗೆ ಸಂಪೂರ್ಣ ಅರಿವಿದೆ. ಅವರೂ ಇದೇ ಕಾವೇರಿ ಭಾಗದಿಂದ ಬಂದವರು'' ಎಂದು ಹೇಳಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇಂದು ದೆಹಲಿಗೆ ತೆರಳುತ್ತಿದ್ದು, ಬಳಿಕ ಚೆನ್ನೈನಲ್ಲಿ ತಮಿಳುನಾಡು ಮುಖ್ಯಮಂತ್ರಿ ಅವರನ್ನು ಭೇಟಿಯಾಗುವ ನಿರೀಕ್ಷೆಯಿದೆ. ''ಒಳ್ಳೆಯದಾಗಲಿ ಎಂದು ಆಶಿಸೋಣ'' ಎಂದರು.

> **ಇದೇ ವೇಳೆ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಕುರಿತು ನೀಡಿರುವ ಹೇಳಿಕೆಗೆ ಚಲುವರಾಯಸ್ವಾಮಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಕುಮಾರಸ್ವಾಮಿ ಅವರ ಹೇಳಿಕೆಯನ್ನು ''ನಾಚಿಕೆಗೇಡಿನ ಹಾಗೂ ಆಕ್ಷೇಪಾರ್ಹ ಹೇಳಿಕೆ'' ಎಂದು ಟೀಕಿಸಿದರು.**
> - ಸಚಿವ ಚಲುವರಾಯಸ್ವಾಮಿ

## ಬೆಂಗಳೂರಿಗೆ ನೀರು ಒದಗಿಸುವುದು ಸವಾಲಿನ ಕೆಲಸ

• ಉದಯವಾಹಿನಿ, ಬೆಂಗಳೂರು

ಪ್ರಧಾನಿಗಳು ದೇಶವನ್ನು ಆರ್ಥಿಕ ಶಕ್ತಿಯನ್ನಾಗಿಸಬೇಕು ಅಂದರೆ, ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದ ರಾಜ್ಯಗಳು ಒಗ್ಗಟ್ಟಾಗಿದ್ದರೆ ಮಾತ್ರ ಸಾಧ್ಯ. ನಮ್ಮಲ್ಲಿರುವ ಪ್ರತಿಭಾ ಸಾಮರ್ಥ್ಯ ಅಸಮಾನ್ಯ ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು.

ಉಪಸಭಾಧ್ಯಕ್ಷರ ಆಯ್ಕೆಯ ನಂತರ ವಿಧಾನಸಭೆಯಲ್ಲಿ ಸಿಎಂ ಮಂಗಳವಾರ ಮಾತನಾಡಿದರು. ಪ್ರಧಾನಿಗಳು ಮೈಸೂರಿಗೆ ಬಂದಿದ್ದಾಗ. ಅವರ ಬಳಿ, ರಾಜ್ಯದ ಹಿತಕ್ಕಾಗಿ ಏನೇನು ಕೆಲಸ ಆಗಬೇಕು ಎನ್ನುವುದನ್ನ ಹೇಳಿದ್ದೇನೆ. ಇತಿಹಾಸದಲ್ಲಿ ಏನೇನೆಲ್ಲಾ ಆಗಿದೆ ಎನ್ನುವುದನ್ನು ಅವರ ಗಮನಕ್ಕೆ ತಂದಿದ್ದೇನೆ. ನಮ್ಮಲ್ಲಿರುವ ಟ್ಯಾಲೆಂಟ್ ಪೂಲ್ ಬಗ್ಗೆ, ಅದರ ಶಕ್ತಿಯ ಬಗ್ಗೆ ಅವರ ಗಮನ ಸೆಳೆದಿದ್ದೇನೆ ಎಂದರು. ಅಧಿಕಾರ ಯಾವತ್ತಿಗೂ ಶಾಶ್ವತ ಅಲ್ಲ ಅನ್ನೋ ಸತ್ಯ ನನಗೆ ತಿಳಿದಿದೆ. ನನ್ನ ಪಾಲಿಗೆ ದೊರೆತ ಸ್ಥಾನಕ್ಕೆ ಗೌರವ ಸಲ್ಲಿಸುತ್ತಾ ಬಂದಿದ್ದರಿಂದ ಇವತ್ತು ಈ ಸ್ಥಾನದಲ್ಲಿ ಕುಳಿತಿದ್ದೇನೆ. ನನ್ನ ಹೃದಯ ನಿಷ್ಕಲ್ಮಶವಾಗಿದೆ. ಯಾವುದೇ ದ್ವೇಷಾಸೂಯೆಗಳು ಇಲ್ಲದೆ ಈ ನಾಡಿನ ಜನರ ಸೇವೆ ಮಾಡಬೇಕು ಅಂತ ಸಂಕಲ್ಪ ಮಾಡಿದ್ದೇನೆ ಎಂದರು.

**2028ಕ್ಕೆ ಜನ ಏನು ತೀರ್ಮಾನ ಮಾಡುತ್ತಾರೋ ಅದನ್ನು ನೀವು, ನಾವು ಇಬ್ಬರೂ ಒಪ್ಪಿಕೊಳ್ಳಬೇಕು. ಇಡೀ ದೇಶದಲ್ಲಿ ಸಮಸ್ಯೆಗಳು ಬೇಕಾದಷ್ಟು ಇವೆ. ನಾವು ಟೀಮ್ ಕರ್ನಾಟಕವಾಗಿ ಅದರ ಪರಿಹಾರಕ್ಕಾಗಿ ಒಟ್ಟಾಗಿ ಹೋರಾಟ ಮಾಡೋಣ ಎಂದರು.**


ಉದಯವಾಹಿನಿ ಚಿತ್ರ

ರಾಜಕೀಯದಲ್ಲಿ ಅಧಿಕಾರ ದುರಪಯೋಗ ಆಗಬಾರದು. ರಾಜ್ಯದ ಹಿತಾಸಕ್ತಿಗೆ ಎಲ್ಲರೂ ಬಹಳ ಮುಖ್ಯ. ವಿರೋಧ ಪಕ್ಷಗಳ ಟೀಕೆ, ಟಿಪ್ಪಣಿಗಳು, ನಮ್ಮವರ ಸಲಹೆಗಳು ಎಲ್ಲವೂ ಬೇಕು. ನಾವೆಲ್ಲ ಸೇರಿ ಈ ರಾಜ್ಯದ ಹಿತಾಸಕ್ತಿಯಾಗಿ ಕೆಲಸ ಮಾಡೋಣ. ಇಬ್ಬರ ಉದ್ದೇಶ ಒಂದೇ. ಜನಸೇವೆ ಎಂದರು. ಬಿಡಿದ ವಿಚಾರದಲ್ಲಿ ಚರ್ಚೆ ಮಾಡೋಣ ಅಂತ ಹೇಳಿದ್ದೀರಿ. ಸಂತೋಷ. ತೊಂದರೆ ಕೊಡುವ ಜಾಯಮಾನ ನನ್ನದಲ್ಲ. ಕುಮಾರಸ್ವಾಮಿ ಅವರ ಆವತ್ತಿನ ಬಿಡದಿ ಟೌನ್‌ಷಿಪ್

## ಖಾತೆ ಹಂಚಿಕೆಯಲ್ಲಿ ಬದಲಾವಣೆ; ಕೃಷ್ಣ ಬೈರೇಗೌಡಗೆ ಮತ್ತೊಂದು ಮಹತ್ವದ ಖಾತೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸಚಿವ ಸಂಪುಟದ ಖಾತೆ ಹಂಚಿಕೆಯಲ್ಲಿ ಮತ್ತೊಂದು ಬದಲಾವಣೆಯಾಗಿದ್ದು, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಅವರಿಗೆ ಸಂಸದೀಯ ವ್ಯವಹಾರಗಳ ಇಲಾಖೆಯ ಹೆಚ್ಚುವರಿ ಹೊಣೆ ನೀಡಲಾಗಿದೆ.


ಉದಯವಾಹಿನಿ ಚಿತ್ರ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಶಿಫಾರಸಿನ ಮೇರೆಗೆ ಖಾತೆಗಳ ಮರುಹಂಚಿಕೆ ಮಾಡಲಾಗಿದೆ ಎಂದು ರಾಜ್ಯಪಾಲರ ಕಚೇರಿ ಪ್ರಕಟಣೆ ತಿಳಿಸಿದೆ.

ಕೃಷ್ಣಬೈರೇಗೌಡ ಅವರು ಈಗಾಗಲೇ ಗ್ರೇಟರ್ ಬೆಂಗಳೂರು ಪ್ರಾಧಿಕಾರ, ನಗರದ ಐದು ಮಹಾನಗರ ಪಾಲಿಕೆಗಳು, ಜಲಮಂಡಳಿ ಹಾಗೂ ನಮ್ಮ ಮೆಟ್ರೋ ಸೇರಿದಂತೆ ಬೆಂಗಳೂರಿನ ಮೂಲಸೌಕರ್ಯಕ್ಕೆ ಸಂಬಂಧಿಸಿದ ಪ್ರಮುಖ ವಿಭಾಗಗಳ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ.

ಇದೀಗ ಸಂಸದೀಯ ವ್ಯವಹಾರಗಳ ಖಾತೆಯೂ ಸೇರ್ಪಡೆಯಾಗಿರುವುದರಿಂದ ಅವರ ಹೊಣೆಗಾರಿಕೆ ಮತ್ತಷ್ಟು ವಿಸ್ತರಣೆಗೊಂಡಿದೆ.

ಇದೇ ವೇಳೆ, ಬೆಂಗಳೂರು ಅಭಿವೃದ್ಧಿಗೆ ಸಂಬಂಧಿಸಿದ ಪ್ರಮುಖ ಸಂಸ್ಥೆಗಳಾದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಹಾಗೂ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ (ಬಿಎಂಆರ್‌ಡಿಎ) ಉಸ್ತುವಾರಿಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೇ ತಮ್ಮ ಬಳಿ ಉಳಿಸಿಕೊಂಡಿದ್ದಾರೆ.

## ಹನೂರು ಎನ್‌ಕೌಂಟರ್‌ಗೆ ಪ್ರತಿಕಾರ: ಡೈನಮೈಟ್ ಹಾಗೂ ಜಿಲೆಟಿನ್ ಬಳಸಿ ಶಿಬಿರಗಳ ಧ್ವಂಸ, ಕಾವೇರಿ

• ಉದಯವಾಹಿನಿ, ಬೆಂಗಳೂರು

ಕಾವೇರಿ ವನ್ಯಜೀವಿ ಧಾಮದಲ್ಲಿ ಆಗಸ್ಟ್ 15ರಂದು ನಡೆದ ಶೂಟೌಟ್ ಪ್ರಕರಣ ಈಗ ಎರಡು ರಾಜ್ಯಗಳ ನಡುವಿನ ಸಂಘರ್ಷ ಹಾಗೂ ಸ್ಥಳೀಯ ಆಕ್ರೋಶಕ್ಕೆ ಕಾರಣವಾಗಿದೆ.

ಅರಣ್ಯ ಸಿಬ್ಬಂದಿ ನಡೆಸಿದ ಗುಂಡಿನ ದಾಳಿಯಲ್ಲಿ ಮೂವರು ಶಂಕಿತ ಬೇಟೆಗಾರರು ಸಾವನ್ನಪ್ಪಿದ್ದರು. ಆದರೆ, ಮೃತರನ್ನು ತಮ್ಮ ಅಮಾಯಕರು, ಜಾನುವಾರು ರಕ್ಷಕರು ಎಂದು ವಾದಿಸುತ್ತಿರುವ ಸ್ಥಳೀಯ ಗ್ರಾಮಸ್ಥರು, ಅರಣ್ಯ ಇಲಾಖೆಯ ವಿರುದ್ಧ ಪ್ರತಿಕಾರಕ್ಕೆ ಇಳಿದಿದ್ದಾರೆ. ಕರ್ನಾಟಕದ ಚಾಮರಾಜನಗರ ಜಿಲ್ಲೆಯ ಕಾವೇರಿ ವನ್ಯಜೀವಿಧಾಮ ವ್ಯಾಪ್ತಿಯಲ್ಲಿ ಅಕ್ರಮ ಬೇಟೆ ತಡೆಗಾಗಿ ನಿರ್ಮಿಸಲಾಗಿದ್ದ ಹಲವು ಶಿಬಿರಗಳ ಮೇಲೆ ದುಷ್ಕರ್ಮಿಗಳು ಸ್ಫೋಟಕ ಬಳಸಿ ದಾಳಿ ನಡೆಸಿದ್ದಾರೆಂದು ಅರಣ್ಯ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

ಕೊತ್ತನೂರು ವಲಯದಲ್ಲಿರುವ ಮಿಂಚಿನರೆಹಳ್ಳ ಅಕ್ರಮ ಬೇಟೆ ತಡೆ ಶಿಬಿರವನ್ನು ಡೈನಮೈಟ್ ಹಾಗೂ ಜಿಲೆಟಿನ್ ಕಡ್ಡಿಗಳನ್ನು ಬಳಸಿ ಸ್ಫೋಟಿಸಲಾಗಿದೆ ಎಂದು ಅರಣ್ಯ ಇಲಾಖೆ ಮೂಲಗಳು ತಿಳಿಸಿವೆ. ಸ್ಫೋಟದ ತೀವ್ರತೆಗೆ ಶಿಬಿರದ ಗೋಡೆಗಳು ಹಾನಿಗೊಂಡಿದ್ದು, ಒಳಗೆ ಇರಿಸಲಾಗಿದ್ದ ಹಲವು ವಸ್ತುಗಳು ಬೆಂಕಿಗೆ ಆಹುತಿಯಾಗಿವೆ. ಘಟನೆಯಲ್ಲಿ ಯಾವುದೇ ವ್ಯಕ್ತಿಗೆ ಗಾಯವಾಗಿಲ್ಲ ಎಂದು ತಿಳಿದುಬಂದಿದೆ. ಕೊತ್ತನೂರು ವಲಯದ ಮಿಂಚಿನಹಳ್ಳಿ, ಭೀಮೇಶ್ವರಿ, ಒಳ್ಳೆಮರದ ಹಟ್ಟಿ, ಬೂದಿಕೆರೆ, ಬಂಡಹಳ್ಳಿ ಮತ್ತು ಕಾಲಿದೊಡ್ಡಿ ಸೇರಿದಂತೆ ಹಲವು ಅಕ್ರಮ ಬೇಟೆ ತಡೆ ಶಿಬಿರಗಳನ್ನೂ ಆಗಸ್ಟ್ 18-19ರ ಮಧ್ಯರಾತ್ರಿ ಗುರಿಯಾಗಿಸಲಾಗಿದೆ ಎಂದು ವರದಿಗಳು ತಿಳಿಸಿವೆ. ಆ.15ರಂದು ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಗ್ರಾಮಗಳಾದ ಆಂಥೋನಿ ಸಾಮಿ, ಜಾನ್ ರೋಸ್ ಪೀಟರ್ ಹಾಗೂ ಕುಮಾರ್ ಎಂಬ ಮೂವರು ವ್ಯಕ್ತಿಗಳು ಕಾವೇರಿ ವನ್ಯಜೀವಿಧಾಮದ ವ್ಯಾಪ್ತಿಯಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ನಡೆಸಿದ ಗುಂಡಿನ ಚಕಮಕಿಯಲ್ಲಿ ಮೃತಪಟ್ಟಿದ್ದರು.


ಉದಯವಾಹಿನಿ ಚಿತ್ರ

### ಗುಂಪಿನಿಂದ ಗುಂಡಿನ ದಾಳಿ

**ಅಕ್ರಮ ಬೇಟೆಯ ಕುರಿತು ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಅರಣ್ಯ ಸಿಬ್ಬಂದಿ ಕಾರ್ಯಾಚರಣೆ ನಡೆಸುತ್ತಿದ್ದಾಗ, ಶಂಕಿತ ಬೇಟೆಗಾರರ ಗುಂಪಿನಿಂದ ಗುಂಡಿನ ದಾಳಿ ನಡೆದಿದೆ. ಸಿಬ್ಬಂದಿ ಆತ್ಮರಕ್ಷಣೆಗಾಗಿ ಪ್ರತಿದಾಳಿ ನಡೆಸಿದ ಪರಿಣಾಮ ಮೂವರು ಮೃತಪಟ್ಟಿದ್ದಾರೆ ಎಂಬುದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.**

## ನಕಲಿ ಔಷಧ ದಂಧೆ ಹಿಂದೆ ದುಬೈ ಕಿಂಗ್‌ಪಿನ್ ಸಂಪರ್ಕ: ಆರೋಗ್ಯ ಸಚಿವ ಯು.ಟಿ. ಖಾದರ್

### ದಂಧೆಯ ಹಿಂದೆ ಇರುವ ಶಂಕಿತ ಜಾಲದ ತನಿಖೆಗಾಗಿ ಕೇಂದ್ರ ಸರ್ಕಾರದ ಮಧ್ಯಸ್ಥಿಕೆ ಕೋರಲು ರಾಜ್ಯ ಸರ್ಕಾರ ಮುಂದಾಗಿದೆ

• ಉದಯವಾಹಿನಿ, ಬೆಂಗಳೂರು

1 ಪ್ರಮುಖ ನಿರ್ವಾಹಕ ದುಬೈನಲ್ಲಿ
2 ದಂಧೆಗೆ ಸಂಪರ್ಕ ಇರುವ ಸಾಧ್ಯತೆ
3 ಲೇಬಲ್‌ಗಳು ಮತ್ತು ಸ್ಟಿಕ್ಕರ್‌ಗಳನ್ನು

ಬೆಂಗಳೂರು ದಕ್ಷಿಣ ಜಿಲ್ಲೆ ರಾಮನಗರದಲ್ಲಿ ಬಹುರಾಷ್ಟ್ರೀಯ ಔಷಧ ಕಂಪನಿಗಳ ಲೇಬಲ್‌ಗಳನ್ನು ಬಳಸಿರುವ ನಕಲಿ ಔಷಧಗಳ ದಂಧೆ ಪತ್ತೆಯಾಗಿದ್ದು, 5 ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ನಕಲಿ ಔಷಧಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ಬುಧವಾರ ತಿಳಿಸಿದ್ದಾರೆ.

ಅಂತಾರಾಜ್ಯ ತನಿಖೆಗೆ ಆಗ್ರಹಿಸಿರುವ ಅವರು, ದೇಶದ ಇತರ ಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಕಲಿ ಔಷಧ ತಯಾರಿಕಾ ಘಟಕಗಳೊಂದಿಗೆ ಈ ದಂಧೆಗೆ ಸಂಪರ್ಕ ಇರುವ ಸಾಧ್ಯತೆ ಪ್ರಾಥಮಿಕ ತನಿಖೆಯಲ್ಲಿ ಬೆಳಕಿಗೆ ಬಂದಿದೆ ಎಂದು ಹೇಳಿದ್ದಾರೆ.

ಈ ದಂಧೆಯ ಪ್ರಮುಖ ನಿರ್ವಾಹಕ ದುಬೈನಲ್ಲಿ ಇದ್ದಾನೆ ಎಂದು ತಿಳಿದುಬಂದಿದ್ದು, ದಂಧೆಯ ಹಿಂದೆ ಇರುವ ಶಂಕಿತ ಜಾಲದ ತನಿಖೆಗಾಗಿ ಕೇಂದ್ರ ಸರ್ಕಾರದ ಮಧ್ಯಸ್ಥಿಕೆ ಕೋರಲು ರಾಜ್ಯ ಸರ್ಕಾರ ಮುಂದಾಗಿದೆ. ದೇಶಾದ್ಯಂತ ನಕಲಿ ಔಷಧಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಸಾಧ್ಯತೆಯಿದೆ. ನಿನ್ನೆ ಸಾಯಂಕಾಲ ಬೀಟ್ ಪೊಲೀಸರಿಗೆ ಈ ದಂಧೆಯ ಬಗ್ಗೆ ಮಾಹಿತಿ ಲಭಿಸಿದ


ಉದಯವಾಹಿನಿ ಚಿತ್ರ

> **ಮುಖ್ಯ ಆರೋಪಿ ಪ್ರಶಾಂತ್ ದುಬೈನಲ್ಲಿ ಇರುವ ಸಾಧ್ಯತೆಯಿದೆ. ತೇಜಸ್ ಸ್ಥಳೀಯವಾಗಿ ಕಾರ್ಯಾಚರಣೆ ನಡೆಸುತ್ತಿದ್ದ ವ್ಯಕ್ತಿ ಎಂದು ಗುರುತಿಸಲಾಗಿದೆ. ಬಂಧಿತ ಪ್ರಭುದೇವ್‌ನನ್ನು ವಿಚಾರಣೆ ನಡೆಸಲಾಗುತ್ತಿದ್ದು, ಇಡೀ ಪೂರೈಕೆ ಜಾಲದ ಬಗ್ಗೆ ಮಾಹಿತಿ ಕಲೆಹಾಕಲಾಗುತ್ತಿದೆ ಎಂದು ಹೇಳಿದರು.-ಯು ಟಿ ಖಾದರ್**

### ಅಧಿಕಾರಿಗಳು ತನಿಖೆ

**ನಕಲಿ ಔಷಧಗಳನ್ನು ಸಂಗ್ರಹಿಸಿದ್ದ ಸ್ಥಳವು ಮಾನ್ಯ ಪರವಾನಗಿ ಇಲ್ಲದೆ ಕಾರ್ಯನಿರ್ವಹಿಸುತ್ತಿತ್ತು ಎಂದು ಸಚಿವರು ತಿಳಿಸಿದರು. ನಕಲಿ ಔಷಧಗಳಿಗೆ ಬಳಸಲಾದ ಲೇಬಲ್‌ಗಳು ಮತ್ತು ಸ್ಟಿಕ್ಕರ್‌ಗಳನ್ನು ಸ್ಥಳೀಯವಾಗಿಯೇ ತಯಾರಿಸಲಾಗಿತ್ತೇ ಅಥವಾ ಬೇರೆ ಮೂಲಗಳಿಂದ ತರಲಾಗಿತ್ತೇ ಎಂಬ ಬಗ್ಗೆಯೂ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ.**

ಬಳಿಕ ಪ್ರಕರಣ ಬೆಳಕಿಗೆ ಬಂದಿದೆ. ಮಾಹಿತಿ ದೊರೆತ ತಕ್ಷಣ ಔಷಧ ನಿಯಂತ್ರಣ ಇಲಾಖೆ ಹಾಗೂ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಆಯುಕ್ತಾಲಯದ ಅಧಿಕಾರಿಗಳು ಬಿಡದಿಯಲ್ಲಿರುವ ಫಾಮ್‌ಹೌಸ್‌ವೊಂದರ ಮೇಲೆ ದಾಳಿ ನಡೆಸಿದರು. ಇಲ್ಲಿ ನಕಲಿ ಔಷಧಗಳನ್ನು ಸಂಗ್ರಹಿಸಿ, ಮರುಪ್ಯಾಕಿಂಗ್ ಮಾಡಿ ಔಷಧ ಮಳಿಗೆಗಳು ಹಾಗೂ ಆಸ್ಪತ್ರೆಗಳಿಗೆ ಪೂರೈಸಲಾಗುತ್ತಿತ್ತು ಎಂದು ಆರೋಪಿಸಲಾಗಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಭುದೇವ್ ಎಂಬಾತನನ್ನು ಬಂಧಿಸಲಾಗಿದೆ. ರಾಮನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನೇತೃತ್ವದಲ್ಲಿ ತನಿಖೆ ನಡೆಯುತ್ತಿದೆ. ತೆಲಂಗಾಣ, ಹಿಮಾಚಲ ಪ್ರದೇಶ ಸೇರಿದಂತೆ ದೇಶದ ಇತರ ಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಕಲಿ ಔಷಧ ತಯಾರಿಕಾ ಘಟಕಗಳೊಂದಿಗೆ ಈ ದಂಧೆಗೆ ಸಂಪರ್ಕ ಇರುವ ಸಾಧ್ಯತೆ ಪ್ರಾಥಮಿಕ ತನಿಖೆಯಲ್ಲಿ ಕಂಡುಬಂದಿದೆ ಎಂದು ಹೇಳಿದರು. ಆರೋಪಿಗಳು ಅತ್ಯಂತ ಕಡಿಮೆ ಬೆಲೆಗೆ ಔಷಧಗಳನ್ನು ಖರೀದಿಸಿ, ಬಹುರಾಷ್ಟ್ರೀಯ ಔಷಧ ಕಂಪನಿಗಳ ಹೆಸರು ಮತ್ತು ಲೇಬಲ್‌ಗಳನ್ನು ಅಂಟಿಸಿ ಮರುಪ್ಯಾಕಿಂಗ್ ಮಾಡುತ್ತಿದ್ದರು. ಬಳಿಕ ಅವುಗಳನ್ನು ಆಸ್ಪತ್ರೆಗಳು ಮತ್ತು ಔಷಧ ಮಳಿಗೆಗಳಿಗೆ ಪೂರೈಸುತ್ತಿದ್ದರು ಎಂದು ಆರೋಪಿಸಲಾಗಿದೆ.

ಉದಯ ವಾಹಿನಿ
ಪ್ರಾದೇಶಿಕ
ಗುರುವಾರ
20 ಆಗಸ್ಟ್ 2026
05

# ಭದ್ರಾ ಕಾಡಾ ವ್ಯಾಪ್ತಿಗೆ ಚಿತ್ರದುರ್ಗ ಸೇರ್ಪಡೆಗೆ ಆಗ್ರಹ

## ಭದ್ರಾ ಅಚ್ಚುಕಟ್ಟು 1.05 ಲಕ್ಷ ಹೆಕ್ಟೇರುವಿನಷ್ಟಿದ್ದು ಮುಂಗಾರು ಹಂಗಾಮಿಗೆ ಸುಮಾರು 34.62 ಟಿಎಂಸಿ ಯಷ್ಟು ನೀರು ಬೇಕಾಗುತ್ತದೆ

• **ಉದಯವಾಹಿನಿ, ಚಿತ್ರದುರ್ಗ:**

ಭದ್ರಾ ಜಲಾಶಯದ ಕಾಡಾ ಗೆ ಚಿತ್ರದುರ್ಗ ಜಿಲ್ಲೆಯ ಸೇರ್ಪಡೆ ಮಾಡುವಂತೆ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ರಾಜ್ಯ ಸರ್ಕಾರವ ಆಗ್ರಹಿಸಿದೆ.ಈ ಸಂಬಂಧ ಹೇಳಿಕೆ ನೀಡಿರುವ ಸಮಿತಿ ಕಾರ್ಯಾಧ್ಯಕ್ಷ ಬಿ.ಎ.ಲಿಂಗಾರೆಡ್ಡಿ, ಮಧ್ಯ ಕರ್ನಾಟಕದ ಬಯಲು

**1 : ಎರಡು ಟಿಎಂಸಿ ನೀರು ಹಂಚಿಕೆ**
**2 : 367 ಕೆರೆಗಳಿಗೆ ಅರ್ಧದಷ್ಟು ನೀರು**
**3 : ಸುಮಾರು 34.62 ಟಿಎಂಸಿ ನೀರು**

ಸೀಮೆ ಪ್ರದೇಶಗಳನ್ನು ನೀರಾವರಿಗೆ ಒಳಪಡಿಸುವ ಸಂಬಂಧ ಭದ್ರಾ ಮೇಲ್ದಂಡೆ ಯೋಜನೆ ರೂಪಿಸಲಾಗಿದೆ. ಚಿತ್ರದುರ್ಗ, ತುಮಕೂರು, ಚಿಕ್ಕಮಗಳೂರು ಹಾಗೂ ದಾವಣಗೆರೆ ಜಿಲ್ಲೆಯ 2,25,515 ಹೆಕ್ಟೇರು ಭೂ ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ(ಡ್ರಿಪ್) ಸೌಲಭ್ಯ ಕಲ್ಪಿಸಲಾಗುತ್ತಿದೆ. ಅಲ್ಲದೇ 367 ಕೆರೆಗಳಿಗೆ ಅರ್ಧದಷ್ಟು ನೀರನ್ನು ತುಂಬಿಸಲಾಗುತ್ತಿದೆ.

ಭದ್ರಾ ಮೇಲ್ದಂಡೆ ಯೋಜನೆಯಡಿ 29.90 ಟಿಎಂಸಿ ನೀರು ಹಂಚಿಕೆ ಮಾಡಲಾಗಿದ್ದು ಡ್ರಿಪ್ ಗೆ 21.90 ಟಿಎಂಸಿ, ಕೆರೆ ತುಂಬಿಸಲು 6 ಟಿಎಂಸಿ ಹಾಗೂ ವಿವಿ ಸಾಗರ ಜಲಾಶಯಕ್ಕೆ ಎರಡು ಟಿಎಂಸಿ ನೀರು ಹಂಚಿಕೆ ಮಾಡಲಾಗಿದೆ. ಭದ್ರಾ ಅಚ್ಚುಕಟ್ಟು ಪ್ರದೇಶಕ್ಕೆ ಚಿತ್ರದುರ್ಗ ಒಳಪಟ್ಟಿದ್ದರೂ ಕಾಡಾ ಸಮಿತಿಯಿಂದ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ರೈತ ಹೋರಾಟಗಾರರ ಹೊರಗಿಡಲಾಗಿದೆ. ಭದ್ರಾ ಅಚ್ಚುಕಟ್ಟು 1.05 ಲಕ್ಷ ಹೆಕ್ಟೇರುವಿನಷ್ಟಿದ್ದು ಮುಂಗಾರು ಹಂಗಾಮಿಗೆ ಸುಮಾರು 34.62 ಟಿಎಂಸಿ ನೀರು ಬೇಕಾಗುತ್ತದೆ. ಕಾಲುವೆಗೆ ನೀರು ಹಾಯಿಸುವಂತೆ ದಾವಣಗೆರೆ ಪ್ರದೇಶದ ರೈತರು ಕಾಡಾ ಮೇಲೆ ಒತ್ತಡ ತಂದಿದ್ದರಿಂದ ಆಗಸ್ಟ್ 18 ರಂದು ಸಚಿವ ಮಧು ಬಂಗಾರಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆದ ನೀರಾವರಿ ಸಲಹಾ ಸಮಿತಿಸಭೆಯಲ್ಲಿ ದಾವಣಗೆರೆ ಹಾಗೂ ಶಿವಮೊಗ್ಗ ಜಿಲ್ಲೆಯ ಎಲ್ಲಾ ಸಚಿವರು,ಶಾಸಕರು, ರೈತಮುಖಂಡರು ಪಾಲ್ಗೊಂಡಿದ್ದರು. ಸಭೆಯಲ್ಲಿ ಮುಂಗಾರು ಹಂಗಾಮಿಗೆ ಭದ್ರಾ ಜಲಾಶಯದಿಂದ ದಾವಣಗೆರೆ ಹಾಗೂ ಶಿವಮೊಗ್ಗ ಜಿಲ್ಲೆಗಳಿಗೆ 124 ದಿನ ನೀರು ಹಾಯಿಸಲು 32.62 ಟಿಎಂಸಿ ಹಾಗೂ ಭದ್ರಾ ಮೇಲ್ದಂಡೆಗೆ 12.40 ಟಿಎಂಸಿಯಷ್ಟು ನೀರು ಬಿಡುಗಡೆ ಮಾಡುವ ವಿಷಯ ಚರ್ಚೆಯಾಗಿದೆ. ನೀರು ಬಿಡಿ ಎಂದು ಒಂದಿಷ್ಟು ಮಂದಿ, ಬೇಡವೇ ಬೇಡವೆಂದು ಹಲವರು ಪಟ್ಟು ಹಿಡಿದಿದ್ದರಿಂದ ಒಮ್ಮತದ ತೀರ್ಮಾನಕ್ಕೆ ಬರಲು ಸಾಧ್ಯವಾಗದೆ ಅಂತಿಮವಾಗಿ ನಿರ್ಣಯದ ಚೆಂಡನ್ನು ಮುಖ್ಯಮಂತ್ರಿ ಅಂಗಳಕ್ಕೆ ಎಸೆಯಲಾಗಿದೆ.


ಉದಯವಾಹಿನಿ ಚಿತ್ರ

ಹಿಂದೆ ಜಲಸಂಪನ್ಮೂಲ ಸಚಿವರಾಗಿದ್ದ ಹಾಗೂ ಹಾಲಿ ಮುಖ್ಯಮಂತ್ರಿಯಾಗಿರುವ ಡಿ.ಕೆ.ಶಿವಕುಮಾರ್ ಗಮನಕ್ಕೆ ಈ ವಿಷಯ ತಂದು ಕಾಡಾ ವ್ಯಾಪ್ತಿಗೆ ಚಿತ್ರದುರ್ಗ ಜಿಲ್ಲೆ ಸೇರ್ಪಡೆ ಮಾಡುವಂತೆ ಮನವಿ ಮಾಡಲಾಗಿತ್ತು. ಭದ್ರಾ ಮೇಲ್ದಂಡೆಯಡಿ ಈಗಾಗಲೇ ವಿವಿ ಸಾಗರಕ್ಕೆ ನೀರು ಹರಿದು ಬಂದಿದೆ. ಚಿಕ್ಕಮಗಳೂರು ಜಿಲ್ಲೆಯ ತರಿಕೆರೆ ಬಳಿ ಡ್ರಿಪ್ ನ ಫೈಲಟ್ ಪ್ರಾಜೆಕ್ಟ್ ಜಾರಿಗೊಳಿಸಿ ರೈತರಿಗೆ ನೀರು ನೀಡಲಾಗಿದೆ. ವಾಸ್ತವಾಂಶ ಹೀಗಿದ್ದರೂ ಕಾಡಾದಿಂದ ಚಿತ್ರದುರ್ಗ ಜಿಲ್ಲೆಯ ಹೊರಗಿಡುವುದು ಸೂಕ್ತವಲ್ಲ.ರಾಜ್ಯ ಸರ್ಕಾರ ಕೂಡಲೇ ಭದ್ರಾ ಕಾಡಾ ವ್ಯಾಪ್ತಿಗೆ ಚಿತ್ರದುರ್ಗ ಜಿಲ್ಲೆ ಸೇರ್ಪಡೆ ಮಾಡಬೇಕು. ಚಿತ್ರದುರ್ಗ ಶಾಖಾ ಕಾಲುವೆ ಕಾಮಗಾರಿ ಮುಗಿದಿರುವುದರಿಂದ ವಾರದೊಳಗೆ ಭದ್ರಾ ನೀರು ಹಾಯಿಸಿ ಹೊಳಲ್ಕೆರೆ ತಾಲ್ಲೂಕಿನ ಎಲ್ಲಾ ಕೆರೆಗಳು ಹಾಗೂ ಗೋನೂರು ಕೆರೆವರೆಗೆ ನೀರು ಪೂರೈಕೆ ಮಾಡಬೇಕೆಂದು ನೀರಾವರಿ ಹೋರಾಟ ಸಮಿತಿ ಕಾರ್ಯಾಧ್ಯಕ್ಷ ಬಿ.ಎ.ಲಿಂಗಾರೆಡ್ಡಿ, ಪ್ರಧಾನ ಕಾರ್ಯದರ್ಶಿ ಕೆ.ಆರ್.ದಯಾನಂದ, ಪ್ರಧಾನ ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ, ರೈತ ಸಂಘದ ಜಿಲ್ಲಾಧ್ಯಕ್ಷ ಹಂಪಯ್ಯನಮಾಳಿಗೆ ಧನಂಜಯ, ಸಿಪಿಐನ ಜಿ.ಸುರೇಶ್ ಬಾಬು ಹೇಳಿಕೆಯಲ್ಲಿ ಆಗ್ರಹಿಸಿದ್ದಾರೆ.

### ನಮ್ಮ ಪ್ರದೇಶದ ನೀರಿನ ಹಕ್ಕು

ಚಿತ್ರದುರ್ಗ ಜಿಲ್ಲೆಯಿಂದ ಸಚಿವ ರಘುಮೂರ್ತಿ ಸೇರಿದಂತೆ ಐದು ಮಂದಿ ಶಾಸಕರು, ಇಬ್ಬರು ವಿಧಾನ ಪರಿಷತ್ ಸದಸ್ಯರಿದ್ದಾರೆ. ಇವರೆಲ್ಲರೂ ಕಾಡಾ ಸಮಿತಿ ವ್ಯಾಪ್ತಿಗೆ ಒಳಪಡಬೇಕಾಗುತ್ತದೆ. ನೀರಾವರಿ ಸಲಹಾ ಸಮಿತಿ ಸಭೆ ಕರೆದಾಗ ನಮ್ಮ ಪ್ರದೇಶದ ನೀರಿನ ಹಕ್ಕನ್ನು ಪ್ರತಿಪಾದಿಸಲು ಸಾಧ್ಯವಾಗುತ್ತದೆ.

ಭದ್ರಾ ಜಲಾಶಯದಲ್ಲಿ ಚಿತ್ರದುರ್ಗ ಜಿಲ್ಲೆಯ ಪಾಲಿದ್ದರೂ ಕಾಡಾ ಹಾಗೂ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಪಾಲ್ಗೊಂಡು ತಮ್ಮ ಪ್ರದೇಶದ ರೈತರ ಹಿತಕಾಯಲು ಅಲ್ಲಿ ಯಾರೂ ಇಲ್ಲದಂತಾಗಿದೆ. ಇದು ಕೆಲವು ಸಂದರ್ಭದಲ್ಲಿ ನೀರು ಪಡೆಯಲು ಹಿನ್ನಡೆಯಾಗುವ ಸಾಧ್ಯತೆ ಇರುತ್ತದೆ. ಜಿಲ್ಲೆಯ ಜನ ಪ್ರತಿನಿಧಿಗಳು ಈ ಬಗ್ಗೆ ಆಲೋಚನೆ ಮಾಡದಿರುವುದನ್ನು ಖಂಡಿಸುತ್ತದೆ.
– ಹೋರಾಟ ಸಮಿತಿ

# ಕೃಷಿ ಭಾಗ್ಯ ಯೋಜನೆಯಲ್ಲಿ ಅವ್ಯವಹಾರ: ತನಿಖೆಗೆ ಆಗ್ರಹ

• **ಉದಯವಾಹಿನಿ ಬೀದರ್:**

ತಾಲ್ಲೂಕಿನ ಎಸ್‌ಸಿ ಹಾಗೂ ಎಸ್‌ಟಿ ರೈತರಿಗೆ 'ಕೃಷಿ ಭಾಗ್ಯ' ಯೋಜನೆಯಡಿ ಕೃಷಿ ಹೊಂಡಗಳನ್ನು ಮಂಜೂರು ಮಾಡುವಲ್ಲಿ ಭಾರೀ ಅವ್ಯವಹಾರ ಹಾಗೂ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿ, ವೀರ ಕನ್ನಡಿಗ ಸೇನೆ (ಬೀದರ್ ಜಿಲ್ಲಾ ಘಟಕ) ವತಿಯಿಂದ ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಹಾಗೂ ಉಪನಿರ್ದೇಶಕರಿಗೆ ಅಧಿಕೃತ ದೂರು ಮನವಿ ಸಲ್ಲಿಸಲಾಯಿತು.

ಅರ್ಹ ರೈತರಿಗೆ ಸರ್ಕಾರದ ಯೋಜನೆಯ ಸೌಲಭ್ಯ ದೊರೆಯಬೇಕಾಗಿದ್ದರೂ, ಯೋಜನೆಯ ಅನುಷ್ಠಾನದಲ್ಲಿ ಅಕ್ರಮಗಳು ನಡೆದಿವೆ ಎಂಬ ದೂರುಗಳು ಕೇಳಿಬಂದಿವೆ. ರೈತರ ಹೆಸರಿನಲ್ಲಿ ನಡೆದಿರುವ ಅಕ್ರಮ ಹಾಗೂ ಅವ್ಯವಹಾರಗಳ ಕುರಿತು ಉನ್ನತ ಮಟ್ಟದ ಸಮಗ್ರ ತನಿಖೆ ನಡೆಸಿ, ಸತ್ಯಾಸತ್ಯತೆ ಬಹಿರಂಗಪಡಿಸಬೇಕು ಎಂದು ಸಂಘಟನೆ ಒತ್ತಾಯಿಸಿದೆ. **ಪ್ರಮುಖ ಬೇಡಿಕೆಗಳು:** ರೈತರ ಹೆಸರಿನಲ್ಲಿ ನಡೆದಿರುವ ಅಕ್ರಮ ಹಾಗೂ ಅವ್ಯವಹಾರದ ಕುರಿತು ತಕ್ಷಣ ಉನ್ನತ ಮಟ್ಟದ ಸಮಗ್ರ ತನಿಖೆ ನಡೆಸಬೇಕು. ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಯ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು.ಅರ್ಹ ಎಸ್‌ಸಿ/ಎಸ್‌ಟಿ ರೈತರಿಗೆ 'ಕೃಷಿ ಭಾಗ್ಯ' ಯೋಜನೆಯ ಸೌಲಭ್ಯವನ್ನು ನ್ಯಾಯಯುತವಾಗಿ ಒದಗಿಸಬೇಕು.ಯೋಜನೆಯ ಫಲಾನುಭವಿಗಳ ಆಯ್ಕೆ ಹಾಗೂ ಕೃಷಿ ಹೊಂಡಗಳ ಮಂಜೂರಾತಿ ಪ್ರಕ್ರಿಯೆಯನ್ನು ಪಾರದರ್ಶಕಗೊಳಿಸಬೇಕು.


ಉದಯವಾಹಿನಿ ಚಿತ್ರ

ಕೃಷಿ ಭಾಗ್ಯ ಯೋಜನೆಯಲ್ಲಿನ ಅಕ್ರಮಗಳ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ವೀರ ಕನ್ನಡಿಗ ಸೇನೆಯ ವತಿಯಿಂದ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಸಂಘಟನೆಯ ಮುಖಂಡರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಸಂಘಟನೆಯ ಗೌರವಾಧ್ಯಕ್ಷ ಬಡಿಗೇರ್ ಈಶ್ವರ್, ಜಿಲ್ಲಾ ಅಧ್ಯಕ್ಷ ಅಮರ್ ಪೂಜಾರಿ, ವಿದ್ಯಾರ್ಥಿ ಘಟಕದ ಜಿಲ್ಲಾಧ್ಯಕ್ಷ ಗೋವಿಂದ ಬಡಿಗೇರ್, ಜಿಲ್ಲಾ ಉಪಾಧ್ಯಕ್ಷ ರಾಜಕುಮಾರ್ ಆಟೋ, ಸಂತೋಷ ಮಾಳ್ಗಿಗೆ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದು, ನಿಯೋಗದ ನೇತೃತ್ವವಹಿಸಿದ್ದರು.

# ಉರ್ದು ಶಿಕ್ಷಕರನ್ನು ನೇಮಿಸದಿರುವುದು ದೊಡ್ಡ ಅನ್ಯಾಯ

• **ಉದಯವಾಹಿನಿ ಚಿಂಚೋಳಿ:**

ರಾಜ್ಯ ಸರ್ಕಾರವು 15ಸಾವಿರ ಶಿಕ್ಷಕರ ನೇಮಕಾತಿ ಅಧಿಸೂಚನೆ ಘೋಷಿಸಿರುವ ಸಕಾರವು ಅದರಲ್ಲಿ ಉರ್ದು,ಮರಾಠಿ,ಮತ್ತು ತೆಲಗು ಮಾಧ್ಯಮ ಶಾಲೆಗಳ ಶಿಕ್ಷಕರ ಹುದ್ದೆಗಳನ್ನು ಸೇರಿಸದಿರುವುದು ಲಕ್ಷಾಂತರ ವಿಧ್ಯಾರ್ಥಿಗಳಿಗೆ ಮಾಡಿದ ದೊಡ್ಡ ಅನ್ಯಾಯವಾಗಿದೆ ಎಂದು ಸಮಾಜದ ಹಿರಿಯ ಮುಖಂಡರು ಅಬ್ದುಲ್ ಬಾಷೀದ್ ಹಾಗೂ ಕೆ.ಎಂ.ಬಾರಿ ಹೇಳಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ರಾಜ್ಯದಲ್ಲಿ ಸಾವಿರಾರು ಉರ್ದು ಮಾಧ್ಯಮ ಶಾಲೆಗಳಿವೆ ಅನೇಕ ವರ್ಷಗಳಿಂದ ಶಿಕ್ಷಕರಿಲ್ಲದೆ ಶಾಲೆಗಳಲ್ಲಿ ಮಕ್ಕಳು ದಾಖಲಾತಿ ಪಡೆದುಕೋಳ್ಳಲು ಹಿಂದೆಟ್ಟು ಹಾಕುತ್ತಿದ್ದಾರೆ,ಉರ್ದು ಶಾಲೆಗಳಲ್ಲಿ ಶಿಕ್ಷಕರಿಲ್ಲದೆ ಉರ್ದು ಶಿಕ್ಷಣಕ್ಕೆ ಹಿನ್ನಡೆಯಾಗುತ್ತಿದೆ,ಇದರಿಂದ ವಿಧ್ಯಾರ್ಥಿಗಳಿಗೆ ಶಿಕ್ಷಣಕ್ಕೆ ತೀವ್ರ ತೋಂದರೆಯಾಗುತ್ತಿದೆ,ಬೆಳಗಾವಿ,ಬೀದರ,ಕಲಬುರ್ಗಿ,ಯಾದಗಿರಿ,ರಾಯಚೂರ ಅಂಥಹ ಗಡಿಭಾಗಗಳಲ್ಲಿ ಶಾಲೆಗಳಲ್ಲಿ ಉರ್ದು ಮರಾಠಿ,ತೆಲಗು ಶಿಕ್ಷಕರಿಲ್ಲದೆ ಮಕ್ಕಳ ವಿಧ್ಯಾಭ್ಯಾಸಕ್ಕೆ ಬಹಳಷ್ಟು ತೋಂದರೆಯಾಗುತ್ತಿದೆ.

ಆದರಿಂದ ಸರ್ಕಾರವು ತಕ್ಷಣ15000ಶಿಕ್ಷಕರ ನೇಮಕಾತಿಯಲ್ಲಿ ತಿದ್ದುಪಡಿ ತಂದು ಉರ್ದು,ಮರಾಠಿ,ತೆಲಗು,ಶಾಲಾಮಾಧ್ಯಮಗಳಿಗೆ ಪ್ರತ್ಯೇಕ ಖೋಟಾ ನಿಗಧಿಪಡಿಸಿ ಆಯಾ ಮಾಧ್ಯಮ ಶಾಲೆಗಳ ಖಾಲಿಹುದ್ದೆ ಪಟ್ಟಿಯಂತೆ ಭರ್ತಿಗೋಳಿಸಬೇಕು ಎಂದರು.

# ರಾಜೀನಾಮೆಗೆ ಒತ್ತಾಯ 3ನೇ ದಿನಕ್ಕೆ ಕಾಲಿಟ್ಟ ಬಿಜೆಪಿ ಅನಿರ್ಧಿಷ್ಟಾವಧಿ ಧರಣಿ

• **ಉದಯವಾಹಿನಿ ಹೊಸಪೇಟೆ.**

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣವನ್ನು ದುರುಪಯೋಗಪಡಿಸಿಕೊಂಡ ಆರೋಪಕ್ಕೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ತಹಶೀಲ್ದಾರರ ಕಛೇರಿ ಎದುರು ಬಿಜೆಪಿ ಕಾರ್ಯಕರ್ತರು ನಡೆಸುತ್ತಿರುವ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಮೂರನೇ ದಿನಕ್ಕೆ ಕಾಲಿಟ್ಟಿದೆ. ಬಿಜೆಪಿ ಜಿಲ್ಲಾ ಯುವ ಮೋರ್ಚಾ, ಒಬಿಸಿ ಮೋರ್ಚಾ ಹಾಗೂ ಎಸ್ಸಿ ಮೋರ್ಚಾ ವತಿಯಿಂದ ಮಂಗಳವಾರ ಜರುಗಿದ ಪ್ರತಿಭಟನೆಯಲ್ಲಿ ಬಿಜೆಪಿ ಕಾರ್ಯಕರ್ತರು ಹಾಗೂ ಮುಖಂಡರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಎಸ್.ಟಿ. ನಿಗಮದ ಹಣದ ದುರುಪಯೋಗದ ಆರೋಪಕ್ಕೆ ಸಂಬಂಧಿಸಿದಂತೆ ಸೂಕ್ತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಅಲ್ಲದೆ, ನೈತಿಕ ಹೊಣೆ ಹೊತ್ತು ಬಿ. ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧ್ಯಕ್ಷರಾದ ಸಂಜೀವ್ ರೆಡ್ಡಿ, ಭ್ರಷ್ಟಾಚಾರದ ಬಗ್ಗೆ ಮಾತಾಡಿದ ಕಾಂಗ್ರೆಸ್ ಹಿರಿಯ ನಾಯಕ ಕೆಎನ್.ರಾಜಣ್ಣ ಅವರ ಸಚಿವ ಸ್ಥಾನ ಕಿತ್ತುಕೊಂಡಿರಿ, ಅದೇ ಸಮಾಜದ ಬಡವರ ಕೋಟಿ ಕೋಟಿ ಹಣ ಲೂಟಿ ಮಾಡಿದ ನಾಗೇಂದ್ರ ಅವರಿಗೆ ಮತ್ತೊಂದು ಬಾರಿ ಸಚಿವ ಸ್ಥಾನ ನೀಡಿದ್ದೀರಲ್ಲ ನಾಚಿಕೆ ಆಗಲ್ವಾ. ಕೂಡಲೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಇಲ್ಲದಿದ್ದರೆ ಈ ಹೋರಾಟವನ್ನು ಹಳ್ಳಿ ಹಳ್ಳಿಗೂ ತಗೊಂಡು ಹೋಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.



ಉದಯವಾಹಿನಿ ಚಿತ್ರ

ನಿಗಮದ ಹಣದ ದುರುಪಯೋಗದ ಆರೋಪ ಗಂಭೀರವಾಗಿದ್ದು, ಪ್ರಕರಣದ ಸಂಪೂರ್ಣ ಸತ್ಯವನ್ನು ಜನತೆಯ ಮುಂದಿಡಬೇಕು ಎಂದು ಆಗ್ರಹಿಸಿದರು. ಆರೋಪದ ಹಿನ್ನೆಲೆಯಲ್ಲಿ ಸಚಿವರು ತಮ್ಮ ಸ್ಥಾನದಲ್ಲಿ ಮುಂದುವರಿಯುವುದು ಸರಿಯಲ್ಲ. ಸರ್ಕಾರವು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಪಾರದರ್ಶಕ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.
-ಜಿಲ್ಲಾಧ್ಯಕ್ಷ ಕಿಚಿಡಿ ಕೊಟ್ರೇಶ್

# ಮಠದಲ್ಲಿ ಅಪ್ರಾಪ್ತ ಬಾಲಕಿ ಪತ್ತೆ; ನಕಲಿ ಸ್ವಾಮೀಜಿ ವಿರುದ್ಧ ಗಂಭೀರ ಆರೋಪ

• **ಉದಯವಾಹಿನಿ ಯಾದಗಿರಿ:**

ತಾಲ್ಲೂಕಿನ ಆಶನಾಳ ಗ್ರಾಮದ ಆಶನಾಳ ಗೇಟ್ ಸಮೀಪದ ಅರಣ್ಯ ಪ್ರದೇಶದಲ್ಲಿರುವ 'ಶ್ರೀ ಭಾಗ್ಯವಂತಿ ಮಠ'ದಲ್ಲಿ 16 ವರ್ಷದ ಅಪ್ರಾಪ್ತ ಬಾಲಕಿಯೊಬ್ಬಳು ಪತ್ತೆಯಾಗಿದ್ದು, ಆಕೆಯನ್ನು ಹಲವು ವರ್ಷಗಳಿಂದ ಅಲ್ಲಿ ಇರಿಸಿಕೊಂಡು ಲೈಂಗಿಕ ದೌರ್ಜನ್ಯ ಎಸಗಲಾಗಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.

ಮಕ್ಕಳ ಸಹಾಯವಾಣಿ 1098ಕ್ಕೆ ಬಂದ ದೂರಿನ ಆಧಾರದ ಮೇಲೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಪೊಲೀಸರು ಜಂಟಿಯಾಗಿ ದಿಢೀರ್ ಕಾರ್ಯಾಚರಣೆ ನಡೆಸಿ ಬಾಲಕಿಯನ್ನು ರಕ್ಷಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳು ತನಿಖೆ ಮುಂದುವರಿಸಿದ್ದು, ಬಾಲಕಿಯ ವೈದ್ಯಕೀಯ ಪರೀಕ್ಷೆ ಹಾಗೂ ಹೇಳಿಕೆ ಬಳಿಕ ಕಾನೂನು ಕ್ರಮದ ಮುಂದಿನ ಹಂತ ಸ್ಪಷ್ಟವಾಗಲಿದೆ. ಮಠದಲ್ಲಿ ವಾಸವಾಗಿದ್ದ ಅಣ್ಣಪ್ಪ ಪೂಜಾರಿ ಎಂಬಾತ ದತ್ತರಗಿ ಭಾಗಮ್ಮ ದೇವರ ಹೆಸರಿನಲ್ಲಿ ಸಣ್ಣ ಗುಡಿ ನಿರ್ಮಿಸಿಕೊಂಡು, ತಾನು ದೇವರ ಆರಾಧನೆ ಮಾಡುತ್ತೇನೆ, ತನ್ನ ಮೈಮೇಲೆ ಭಾಗ್ಯವಂತಿ ದೇವತೆ ಬರುತ್ತಾಳೆ ಹಾಗೂ ಜನರ ಸಮಸ್ಯೆಗಳಿಗೆ ಪರಿಹಾರ ನೀಡುತ್ತೇನೆ ಎಂದು ಭಕ್ತರನ್ನು ನಂಬಿಸುತ್ತಿದ್ದ ಎನ್ನಲಾಗಿದೆ.

ಇದಲ್ಲದೆ, ಮಟ್ಕಾ ಸಂಖ್ಯೆಗಳನ್ನೂ ಹೇಳುತ್ತೇನೆ ಎಂದು ಜನರನ್ನು ನಂಬಿಸಿ ಹಣ ಪಡೆಯುತ್ತಿದ್ದ ಎಂಬ ಆರೋಪವೂ ಸ್ಥಳೀಯವಾಗಿ ಕೇಳಿಬಂದಿದೆ. ಧಾರ್ಮಿಕ ನಂಬಿಕೆಗಳನ್ನು ದುರುಪಯೋಗಪಡಿಸಿಕೊಂಡು ಸಾರ್ವಜನಿಕರನ್ನು ದಾರಿ ತಪ್ಪಿಸಲಾಗುತ್ತಿತ್ತೆ ಎಂಬ ಬಗ್ಗೆಯೂ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.ಸುರಪುರ ತಾಲೂಕಿನ ಹೆಗ್ಗಣದೊಡ್ಡಿ-ಗೋಡ್ರಿಹಾಳ ಗ್ರಾಮದ 16 ವರ್ಷದ ಬಾಲಕಿಯನ್ನು ಕಳೆದ ಸುಮಾರು ಮೂರು ವರ್ಷಗಳಿಂದ ಮಠದ ಆವರಣದಲ್ಲಿ ಇರಿಸಿಕೊಂಡಿದ್ದಾನೆ ಎಂಬ ಮಾಹಿತಿ ಅಧಿಕಾರಿಗಳಿಗೆ ದೊರೆತಿದೆ.


ಉದಯವಾಹಿನಿ ಚಿತ್ರ

ಮಠದ ಸಮೀಪ ಅರಣ್ಯ ಪ್ರದೇಶದಲ್ಲೇ ಸಣ್ಣ ಮನೆಯೊಂದನ್ನು ಮಾಡಿಕೊಂಡು ಆರೋಪಿ ವಾಸವಾಗಿದ್ದ ಎನ್ನಲಾಗಿದ್ದು, ರಾತ್ರಿ ವೇಳೆ ಯಾರೂ ಇಲ್ಲದ ಸಂದರ್ಭದಲ್ಲಿ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗುತ್ತಿದ್ದಾನೆ ಎಂಬ ಗಂಭೀರ ಆರೋಪ ದೂರಿನಲ್ಲಿ ಉಲ್ಲೇಖವಾಗಿದೆ.

# ಕಾಮಗಾರಿಗಳನ್ನು ತ್ವರಿತ ಗತಿಯಲ್ಲಿ ಪೂರ್ಣಗೊಳಿಸಿ : ಸಂಸದ ಕೋಟಾ ಶ್ರೀನಿವಾಸ ಪೂಜಾರಿ

• **ಉದಯವಾಹಿನಿ ಉಡುಪಿ-**


ಜಿಲ್ಲೆಯಲ್ಲಿ ಸಾರ್ವಜನಿಕರ ಸುರಕ್ಷತೆ, ಸುಗಮ ಸಂಚಾರ ಹಾಗೂ ರಸ್ತೆ ಅಪಘಾತಗಳನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ರಾಷ್ಟ್ರಿಯ ಹೆದ್ದಾರಿಯ ಬಾಕಿ ಇರುವ ಸರ್ವೀಸ್ ರಸ್ತೆ ಮತ್ತು ಇತರ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿ, ಸಾರ್ವಜನಿಕರ ಉಪಯೋಗಕ್ಕೆ ಅನುವು ಮಾಡಿಕೊಡಬೇಕು ಎಂದು ಉಡುಪಿ- ಚಿಕ್ಕಮಗಳೂರು ಲೋಕಸಭಾ ಸಂಸದ ಕೋಟ ಶ್ರೀನಿವಾಸ ಪೂಜಾರಿ ರಾಷ್ಟ್ರೀಯ ಹೆದ್ದಾರಿಯ ಅಭಿಯಂತರರುಗಳಿಗೆ ಸೂಚನೆ ನೀಡಿದರು.

ಅವರು ಮಣಿಪಾಲ ರಜತಾದ್ರಿಯ ಸಂಸದರ ಕಚೇರಿಯಲ್ಲಿ ರಾಷ್ಟ್ರೀಯ ಹೆದ್ದಾರಿ 66 ಕ್ಕೆ ಸಂಬಂಧಿಸಿದಂತೆ ಸರ್ವೀಸ್ ರಸ್ತೆ, ಮೇಲ್ಸೇತುವೆ ಸೇರಿದಂತೆ ವಿವಿಧ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ 66 ಕ್ಕೆ ಸಂಬಂಧಿಸಿದಂತೆ ಪ್ರಮುಖವಾಗಿ ಕೋಟೇಶ್ವರ ಜಂಕ್ಷನ್‌ನಿಂದ ಬೀಜಾಡಿ ಕ್ರಾಸ್ ವರೆಗಿನ ಸುಮಾರು 830 ಮೀಟರ್, ಅನ್ನಪೂರ್ಣ ಹೋಟೆಲ್‌ನಿಂದ ಬೀಜಾಡಿ ಕುಂಭಾಶಿ ತೆಕ್ಕಟ್ಟೆ ಭಾಗದಲ್ಲಿ ಎರಡು ಬದಿ ಸುಮಾರು 3,500 ಮೀಟರ್, ತೆಕ್ಕಟ್ಟೆ ಭಾಗದಲ್ಲಿ ಸುಮಾರು 1,020 ಮೀಟರ್, ಬ್ರಹ್ಮಾವರ ಭಾಗದಲ್ಲಿ ಸುಮಾರು 400 ಮೀಟರ್, ಸಂತೆಕಟ್ಟೆ ಭಾಗದಲ್ಲಿ ಸುಮಾರು 1,000 ಮೀಟರ್, ಉದ್ಯಾವರ ಜಂಕ್ಷನ್ ಭಾಗದಲ್ಲಿ ಸುಮಾರು 325 ಮೀಟರ್ ಸೇರಿದಂತೆ ವಿವಿಧ ಭಾಗಗಳಲ್ಲಿ ಬಾಕಿ ಉಳಿದಿರುವ ಸರ್ವೀಸ್ ರಸ್ತೆ ನಿರ್ಮಾಣ ಕಾಮಗಾರಿಗಳನ್ನು ಆದ್ಯತೆಯ ಮೇಲೆ ಪೂರ್ಣಗೊಳಿಸಿ, ಸಾರ್ವಜನಿಕ ವಾಹನಗಳು ಪ್ರಯಾಣಿಸಲು ಮುಕ್ತ ಅವಕಾಶ ಮಾಡಿಕೊಡಬೇಕು ಎಂದರು.

ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಮೇಲ್ಸೇತುವೆ, ಅಂಡರ್‌ಪಾಸ್ ಹಾಗೂ ಇತರ ಮೂಲಸೌಕರ್ಯ ಕಾಮಗಾರಿಗಳ ಪ್ರಗತಿಯನ್ನೂ ಪರಿಶೀಲಿಸಿ ಮಾತನಾಡಿದ ಸಂಸದರು, ರಾ.ಹೆ ಯ ಕೆಲವು ಕಡೆಗಳಲ್ಲಿ ಇನ್ನೂ ಸರ್ವೀಸ್ ರಸ್ತೆ ನಿರ್ಮಾಣ ಕಾಮಗಾರಿ ಪ್ರಾರಂಭಿಸಿಲ್ಲ. ಚರಂಡಿಗಳ ಅಸಮರ್ಪಕತೆಯೂ ಕಂಡುಬರುತ್ತಿದೆ.

ಸರ್ವೀಸ್ ರಸ್ತೆ ನಿರ್ಮಾಣ ಮಾಡುವಾಗ ಕಾಮಗಾರಿಗಳ ಗುಣಮಟ್ಟ ಹಾಗೂ ಸಂಚಾರ ಸುರಕ್ಷತಾ ಕ್ರಮಗಳನ್ನು ಕಾಯ್ದುಕೊಳ್ಳುವುದರೊಂದಿಗೆ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕೆಂದು ಸೂಚಿಸಿದರು.
-ಸಂಸದ ಕೋಟಾ ಶ್ರೀನಿವಾಸ ಪೂಜಾರಿ

**ರಾಷ್ಟ್ರೀಯ ಹೆದ್ದಾರಿಯ ಅಭಿಯಂತರ**


ಉದಯವಾಹಿನಿ ಚಿತ್ರ

# ರೈತರ ಪ್ರತಿಭಟನೆಗೆ ಮಣಿದ ತುಂಗಭದ್ರಾ ಮಂಡಳಿ 10 ದಿನ ನೀರು ಬಿಡಲು ಒಪ್ಪಿಗೆ!

## ತುಂಗಭದ್ರಾ ನದಿ ಭತ್ತಿ ಹೋಗಿರುವುದರಿಂದ ರೈತರ ಬೆಳೆಗಳಿಗೆ ನೀರು ದೊರೆಯದೆ ನದಿ ಪಾತ್ರದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ

• **ಉದಯವಾಹಿನಿ, ಹೊಸಪೇಟೆ.:**

ವಿಜಯನಗರ, ಬಳ್ಳಾರಿ, ಕೊಪ್ಪಳ ಹಾಗೂ ರಾಯಚೂರು ಸೇರಿದಂತೆ ಮೂರು ರಾಜ್ಯಗಳ 8 ಜಿಲ್ಲೆಗಳ ಜೀವನಾಡಿ ಆಗಿರುವ ತುಂಗಭದ್ರಾ ಜಲಾಶಯದಿಂದ ನದಿಗೆ ನೀರು ಬಿಡುಗಡೆ ಮಾಡುವಂತೆ ಒತ್ತಾಯಿಸಿ ಟಿ.ಬಿ.ಡ್ಯಾಂ ನ ತುಂಗಭದ್ರಾ ಮಂಡಳಿ ಕಛೇರಿ ಎದುರು ರೈತರು ನಡೆಸಿದ ಪ್ರತಿಭಟನೆಗೆ ಮಣಿದ ತುಂಗಭದ್ರಾ ಮಂಡಳಿ ಜಲಾಶಯದಿಂದ ಪ್ರತಿ ದಿನ 2 ಸಾವಿರ ಕ್ಯೂಸೆಕ್ ನಂತೆ 10 ದಿನಗಳ ಕಾಲ ನೀರು ಬಿಡಲು ಒಪ್ಪಿಗೆ ಸೂಚಿಸಿದೆ.

**1 : ತಕ್ಷಣ ನದಿಗೆ ನೀರು ಬಿಡಬೇಕು**
**2 : ಜಲಚರಗಳು ನೀರಿಲ್ಲದೆ ತೊಂದರೆ**
**3 : ಅಧಿಕೃತ ಘೋಷಣೆ ಮಾಡಬೇಕು**

ತುಂಗಭದ್ರಾ ನದಿ ಭತ್ತಿ ಹೋಗಿರುವುದರಿಂದ ರೈತರ ಬೆಳೆಗಳಿಗೆ ನೀರು ದೊರೆಯದೆ ನದಿ ಪಾತ್ರದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಅಲ್ಲದೆ ಜನ ಜಾನುವಾರುಗಳಯ ಹಾಗೂ ಜಲಚರಗಳು ನೀರಿಲ್ಲದೆ ತೊಂದರೆ ಅನುಭವಿಸುತ್ತಿವೆ. ಈ ಹಿನ್ನಲೆಯಲ್ಲಿ ತುಂಗಭದ್ರಾ ಜಲಾಶಯದಿಂದ ತಕ್ಷಣ ನದಿಗೆ ನೀರು ಬಿಡಬೇಕು ಎಂದು ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ನೇತೃತ್ವದಲ್ಲಿ ಬಳ್ಳಾರಿ, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳ ನೂರಾರು ರೈತರು ತುಂಗಭದ್ರಾ ಮಂಡಳಿ ಕಛೇರಿ ಎದುರು ಬೃಹತ್ ಪ್ರತಿಭಟನೆ ನಡೆಸಿದ್ದರು. ಪ್ರತಿಭಟನೆಯ ನೇತೃತ್ವವಹಿಸಿದ್ದ ಸಿಂಧನೂರಿನ ಶಾಸಕ ಹಂಪನಗೌಡ ಬಾದರ್ಲಿ ಪ್ರತಿಭಟನೆಯ ನಡುವೆಯೇ ತುಂಗಭದ್ರಾ ಮಂಡಳಿಯ ಕಾರ್ಯದರ್ಶಿ ಮತ್ತು ಇತರ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದರು. ರೈತರ ಬೇಡಿಕೆಯನ್ನು ಮಂಡಳಿ ಒಪ್ಪಿಕೊಂಡಿದ್ದು. ಪ್ರತಿ ದಿನ 2 ಸಾವಿರ ಕ್ಯೂಸೆಕ್ ನಂತೆ 10 ದಿನಗಳ ಕಾಲ ನದಿಗೆ ನೀರು ಬಿಡಲು ಅಧಿಕಾರಿಗಳು ಒಪ್ಪಿಕೊಂಡಿದ್ದಾರೆ ಎಂದು ರೈತರಿಗೆ ತಿಳಿಸಿದರು. ಹೀಗಾಗಿ ಅನಿರ್ದಿಷ್ಟ ಅವಧಿಗೆ ಪ್ರತಿಭಟನೆ ನಡೆಸಲು ನಿರ್ಧರಿಸಿದ್ದ ರೈತರು ತಮ್ಮ ನಿರ್ಧಾರ ಕೈಬಿಟ್ಟು ಪ್ರತಿಭಟನೆ ಸ್ಥಗಿತಗೊಳಿಸಿದರು.


ಉದಯವಾಹಿನಿ ಚಿತ್ರ

ಬಚಾವತ್ ಆಯೋಗದ ವರದಿ ಪ್ರಕಾರವೇ ತುಂಗಭದ್ರಾ ಜಲಾಶಯದ ನೀರಿನ ಹಂಚಿಕೆ ಮಾಡಲಾಗುತ್ತಿದೆ. ತುಂಗಭದ್ರಾ ನದಿ ಭತ್ತದಂತೆ ನೋಡಿಕೊಳ್ಳಲು ವರದಿಯಲ್ಲಿ ಆದೇಶಿಸಲಾಗಿದೆ. ಆದರೆ ಆ ಆದೇಶವನ್ನು ಜಾರಿ ಮಾಡುವಲ್ಲಿ ತುಂಗಭದ್ರಾ ಮಂಡಳಿ ಅಧಿಕಾರಿಗಳು ವಿಫಲರಾಗಿದ್ದಾರೆ.
-ಶಾಸಕ ಹಂಪನಗೌಡ ಬಾದರ್ಲಿ

ಶಾಸಕರು, ಸಚಿವರು ಯಾರೇ ಇರಲಿ, ಸರ್ಕಾರ ಯಾವುದೇ ಆಗಿರಲಿ ನದಿಗೆ ನೀರು ಬಿಡಲೇ ಬೇಕು. ನದಿಗೆ ನೀರು ಬಿಡದಿರುವುದರಿಂದ ಜಲಚರಗಳು ಸಾಯುತ್ತಿವೆ. ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಶಿವರಾಜ್ ತಂಗಡಗಿ ಅವರಿಗೆ ನೀರಿನ ಅರಿವು, ನೆಲ, ಜಲ ಸಂಸ್ಕೃತಿ ಬಗ್ಗೆ ಏನೂ ಗೊತ್ತಿಲ್ಲ. ಅಂತಹವರು ಅಧ್ಯಕ್ಷ ಆಗಿದ್ದಾರೆ. ನಾವು ಹೋರಾಟ ಮಾಡಿಯಾದರೂ ನೀರು ಪಡೆಯುತ್ತೇವೆ.
-ಮಾಜಿ ಶಾಸಕ ಬಸವರಾಜ ದಡೆಸೂಗೂರು

ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ರೈತರು ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ ಕುರಿತು ತಮ್ಮ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಆಗಿರುವ ಸಚಿವ ತಂಗಡಗಿ ಅವರಿಗೆ ತುಂಗಭದ್ರಾ ಜಲಾಶಯ ಸೇರಿದಂತೆ ನೀರಾವರಿ ಬಗ್ಗೆ ಯಾವುದೇ ಮಾಹಿತಿಯಿಲ್ಲ. ಅಂತಹವರಿಂದ ರೈತರಿಗೆ ನ್ಯಾಯ ದೊರಕಿಸಲು ಸಾಧ್ಯವಿಲ್ಲ. ಈ ಹಿನ್ನಲೆಯಲ್ಲಿ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಸ್ಥಾನದಿಂದ ರಾಜೀನಾಮೆ ಪಡೆಯಬೇಕು. ರಾಜೀನಾಮೆ ನೀಡದಿದ್ದರೆ ಅಧ್ಯಕ್ಷ ಸ್ಥಾನದಿಂದ ತೆಗೆದುಹಾಕಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರನ್ನು ಪ್ರತಿಭಟನಾನಿರತ ರೈತರು ಒತ್ತಾಯಿಸಿದ್ದು ಕಂಡು ಬಂದಿತು. ತುಂಗಭದ್ರಾ ಮಂಡಳಿ ತೀರ್ಮಾನದ ಬಗ್ಗೆ ನಮಗೆ ಸಮಾಧಾನ ಇಲ್ಲ. ನದಿಗೆ ನೀರು ಬಿಡುವ ಕುರಿತು ಸರ್ಕಾರ ಅಧಿಕೃತ ಘೋಷಣೆ ಮಾಡಬೇಕು.

ಜಲಾಶಯಕ್ಕೆ ಬರುತ್ತಿರುವ ಒಳ ಹರಿವು ನೋಡಿದರೆ, 100 ಟಿಎಂಸಿ ಗೂ ಅಧಿಕ ನೀರು ಜಲಾಶಯಕ್ಕೆ ಹರಿದು ಬಂದಿದೆ. ಆದರೆ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಸೇರಿಕೊಂಡು ಕಳ್ಳ ಲೆಕ್ಕ ನೀಡುವ ಮೂಲಕ ನೀರನ್ನು ಕಾರ್ಖಾನೆಗಳಿಗೆ ಮಾರಿಕೊಳ್ಳುತ್ತಿದ್ದಾರೆ. ಐಸಿಸಿ ಅಧ್ಯಕ್ಷರ ಸರ್ವಾಧಿಕಾರಿ ಧೋರಣೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ.

### ರೈತರಿಂದ ಗದ್ದಲ, ಗಲಾಟೆ

ಪ್ರತಿಭಟನೆ ನಡೆಯುತ್ತಿದ್ದ ಒಂದು ಹಂತದಲ್ಲಿ ಶಾಸಕ ಬಾದರ್ಲಿ ಮತ್ತು ಮಾಜಿ ಶಾಸಕ ಬಸವರಾಜ ದಡೇಸುಗೂರು ನಡುವೆ ಸಚಿವ ಶಿವರಾಜ ತಂಗಡಗಿ ಅವರನ್ನು ಗುರಿಯಾಗಿಸಿಕೊಂಡು ಮಾತಿನ ಚಕಮಕಿ ನಡೆಯಿತು. ಇತರ ರೈತರಿಂದಲೂ ಗದ್ದಲ, ಗಲಾಟೆ ನಡೆಯಿತು. ಈ ಸಂದರ್ಭದಲ್ಲಿ ಮಧ್ಯಪ್ರವೇಶಿಸಿದ ಪೊಲೀಸರು ಪರಿಸ್ಥಿತಿ ತಿಳಿಗೊಳಿಸಿದರು.

# ಮಿನಿ ನ್ಯೂಸ್

## ಇಕೆವೈಸಿ ಮಾಡಲು ಭರತ್ ಮುಂಡೋಡಿ ಸೂಚನೆ

• **ಉದಯವಾಹಿನಿ ಮಂಗಳೂರು**

ಅನ್ನಭಾಗ್ಯಕ್ಕೆ ಸಂಬಂಧಿಸಿದಂತೆ ಪ್ರತೀ ತಾಲ್ಲೂಕಿನ ನ್ಯಾಯ ಬೆಲೆ ಅಂಗಡಿಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ತಿಂಗಳಿಗೆ 2 ಬಾರಿ ಭೇಟಿ ನೀಡಬೇಕು. ಬಿಪಿಎಲ್ ಮತ್ತು ಅಂತ್ಯೋದಯ ಪಡಿತರ ಚೀಟಿದಾರರು ಕಡ್ಡಾಯವಾಗಿ ಇಕೆವೈಸಿಯನ್ನು ಮಾಡುವಂತೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಭರತ್ ಮುಂಡೋಡಿ ಸೂಚಿಸಿದ್ದಾರೆ. ಅವರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶಕ್ತಿ ಯೋಜನೆಗೆ ಸಂಬಂಧಿಸಿದಂತೆ ಮಂಗಳೂರು ವಿಭಾಗಕ್ಕೆ 62, ಪುತ್ತೂರು ವಿಭಾಗಕ್ಕೆ 40 ಬಸ್ಸುಗಳು ಬಂದಿರುವುದಾಗಿ ಅಧಿಕಾರಿಗಳು ತಿಳಿಸಿದ್ದು, ಕೊರೊನಾ ಸಂದರ್ಭದಲ್ಲಿ ಸ್ಥಗಿತಗೊಳಿಸಲಾದ ಮಾರ್ಗಗಳನ್ನು ಆದ್ಯತೆ ಮೇರೆಗೆ ಪುನಃ ಕಾರ್ಯಾಚರಿಸುವಂತೆ ಸೂಚಿಸಲಾಯಿತು. ಗೃಹಲಕ್ಷ್ಮಿ ಯೋಜನೆಗೆ ಸಂಬಂಧಿಸಿದಂತೆ ಮರಣ ನಂತರ ಸಹಾಯಧನ ಜಮೆಯಾಗಿರುವ ಫಲಾನುಭವಿಗಳ ಕುರಿತು ಶೇ.100 ರಷ್ಟು ಪರಿಶೀಲನೆ ನಡೆಸಲಾಗಿರುತ್ತದೆ. ಗೃಹಜ್ಯೋತಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಗೃಹಜ್ಯೋತಿ ಸಮೀಕ್ಷೆಯನ್ನು ಶೇ.87ರಷ್ಟು ಪೂರ್ಣಗೊಳಿಸಲಾಗಿರುತ್ತದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

## 28ರಂದು ಬೆಂಗಳೂರಿನಲ್ಲಿ ಎಸ್ಸಿ/ಎಸ್ಟಿ ನೌಕರರ ರಾಜ್ಯಮಟ್ಟದ ಐಕ್ಯತಾ ಸಮಾವೇಶ



ಉದಯವಾಹಿನಿ ಚಿತ್ರ

• **ಉದಯವಾಹಿನಿ ಯಾದಗಿರಿ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸರ್ಕಾರಿ ನೌಕರರ ಹಕ್ಕುಗಳ ರಕ್ಷಣೆ, ಮೀಸಲಾತಿ ಸೇರಿದಂತೆ ವಿವಿಧ ನ್ಯಾಯಸಮ್ಮತ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ಸರ್ಕಾರಿ ಎಸ್ಸಿ/ಎಸ್ಟಿ ನೌಕರರ ಸಮನ್ವಯ ಸಮಿತಿ ವತಿಯಿಂದ ಆಗಸ್ಟ್ 28ರಂದು ಬೆಂಗಳೂರಿನ ಅರಮನೆ ಮೈದಾನದ ಶೃಂಗಾರ ಪ್ಯಾಲೇಸ್‌ನಲ್ಲಿ ರಾಜ್ಯಮಟ್ಟದ 6ನೇ ಐಕ್ಯತಾ ಸಮಾವೇಶ ಆಯೋಜಿಸಲಾಗಿದೆ ಎಂದು ಸಮಿತಿಯ ರಾಜ್ಯಾಧ್ಯಕ್ಷ ಡಿ. ಶಿವಶಂಕರ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿರುವ ಎಸ್ಸಿ/ಎಸ್ಟಿ ಸಮುದಾಯದ ನೌಕರರಿಗೆ ಹಲವು ರೀತಿಯ ತಾರತಮ್ಯ ಎದುರಾಗುತ್ತಿದೆ. ನೌಕರರ ನ್ಯಾಯಸಮ್ಮತ ಬೇಡಿಕೆಗಳ ಈಡೇರಿಕೆ ಹಾಗೂ ಹಕ್ಕುಗಳ ರಕ್ಷಣೆಗಾಗಿ ಎಲ್ಲರೂ ಪಕ್ಷಾತೀತವಾಗಿ, ಸಂಘಟಿತವಾಗಿ ಒಂದೇ ವೇದಿಕೆಯಲ್ಲಿ ಒಗ್ಗೂಡುವ ಅಗತ್ಯವಿದೆ ಎಂದು ಹೇಳಿದರು. ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಮಂಜೂರಾಗಿರುವ ಸುಮಾರು 7.75 ಲಕ್ಷ ಹುದ್ದೆಗಳ ಪೈಕಿ ಕೇವಲ 4 ಲಕ್ಷದಷ್ಟು ನೌಕರರು ಮಾತ್ರ ಕಾರ್ಯನಿರ್ವಹಿಸುತ್ತಿದ್ದು, 2.84 ಲಕ್ಷಕ್ಕೂ ಅಧಿಕ ಹುದ್ದೆಗಳು ಖಾಲಿ ಉಳಿದಿವೆ. ಇದಲ್ಲದೆ ಸುಮಾರು 24 ಸಾವಿರ ಬ್ಯಾಕ್‌ಲಾಗ್ ಹುದ್ದೆಗಳು ಇನ್ನೂ ಭರ್ತಿಯಾಗದೆ ಇರುವುದರಿಂದ ಎಸ್ಸಿ/ಎಸ್ಟಿ ಸಮುದಾಯದವರಿಗೆ ಮೀಸಲಾತಿಯ ಸಂಪೂರ್ಣ ಪ್ರಯೋಜನ ದೊರೆಯುತ್ತಿಲ್ಲ ಎಂದು ಆರೋಪಿಸಿದರು. ಆ.28ರಂದು ನಡೆಯಲಿರುವ ರಾಜ್ಯಮಟ್ಟದ ಸಮಾವೇಶವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉದ್ಘಾಟಿಸಲಿದ್ದು, ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ ಅಧ್ಯಕ್ಷತೆ ವಹಿಸಲಿದ್ದಾರೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ದಿಕ್ಸೂಚಿ ನುಡಿಗಳನ್ನಾಡಲಿದ್ದಾರೆ.

## 6 ನಿಮಿಷದಲ್ಲಿ 100 ಪ್ರಶ್ನೆಗಳನ್ನು ಬಿಡಿಸಿದ 'ಗುರುಕುಲದ' ಬಾಲಕಿ

• **ಉದಯವಾಹಿನಿ ದಾವಣಗೆರೆ:**



ಉದಯವಾಹಿನಿ ಚಿತ್ರ

ಗುರುಕುಲ ಶಾಲೆಯ ನರ್ಸರಿ ವಿಭಾಗದ ಪುಟ್ಟ ಬಾಲಕಿ ಅರ್ಹಾ ಸುರೇಶ್ 6 ನಿಮಿಷ 29 ಸೆಕೆಂಡ್‌ಗಳಲ್ಲಿ ಅಬ್ಯಾಕಸ್‌ನ 100 ಪ್ರಶ್ನೆಗಳನ್ನು ತಪ್ಪಿಲ್ಲದೇ ಬಿಡಿಸಿ ಇಂಡಿಯಾ ಬುಕ್ ಆಫ್ ರೆಕಾರ್ಡ್‌ನಲ್ಲಿ ದಾಖಲೆ ಬರೆದಿದ್ದಾಳೆ.

ಅರ್ಹಾ ಬೆಣ್ಣೆನಗರಿ ದಾವಣಗೆರೆಗೆ ಕೀರ್ತಿ ತಂದಿದ್ದಾಳೆ. ಪೋಷಕರ ಪ್ರೋತ್ಸಾಹ ಹಾಗೂ ಅಬ್ಯಾಕಸ್ ತರಬೇತುದಾರರ ಸತತ ಶ್ರಮ, ಕಲಿಸಿದ ಶಿಕ್ಷಕಿಯರೇ ಈ ಸಾಧನೆ ಮಾಡಲು ಪ್ರಮುಖ ಕಾರಣರಾಗಿದ್ದಾರೆ. ಸದ್ಯ ಅರ್ಹಾ ಪೋಷಕರಲ್ಲಿ ಸಂತಸ ಮನೆ ಮಾಡಿದೆ.

ದಾವಣಗೆರೆ ನಗರದ ಪಿಜೆ ಬಡಾವಣೆಯ ನಿವಾಸಿ ಸುರೇಶ್ ಪುತ್ತೂರು, ಪೂಜಿತಾ ಎಸ್‌ಎ ದಂಪತಿಯ ಐದು ವರ್ಷದ ಪುತ್ರಿ ಅರ್ಹಾ ಗುರುಕುಲ ವಸತಿ ಶಾಲೆಯಲ್ಲಿ ಯುಕೆಜಿ ವಿಭಾಗದಲ್ಲಿ ಕಲಿಯುತ್ತಿದ್ದಾಳೆ. ಜುಲೈ ತಿಂಗಳಲ್ಲಿ ಈ ಸ್ಪರ್ಧೆ ನಡೆದಿತ್ತು. ಅರ್ಹಾಳಿಗೆ ಬಾಲ್ಯದಲ್ಲಿಯೇ ಇದರ ಬಗ್ಗೆ ವಿಶೇಷವಾದ ಒಲವಿತ್ತು.

ಅಲ್ಲದೇ ಏಕಾಗ್ರತೆ, ತೀವ್ರ ಪರಿಶ್ರಮ ಮತ್ತು ಗಣಿತ ಲೆಕ್ಕಾಚಾರದ ವೇಗ ಎಲ್ಲರ ಗಮನ ಸೆಳೆದಿದೆ. ವಿದ್ಯಾರ್ಥಿನಿಯ ಈ ಐತಿಹಾಸಿಕ ಸಾಧನೆ ಬಗ್ಗೆ ಶಾಲೆಯ ಕಾರ್ಯದರ್ಶಿ ಅಬ್ದುಲ್ ಹರ್ಷ ವ್ಯಕ್ತಪಡಿಸಿದ್ದಾರೆ.

## ಮೀನು ಹಿಡಿಯಲು ಹೋಗಿ ನಾಪತ್ತೆಯಾದವರ ಪೈಕಿ ಓರ್ವನ ಮೃತದೇಹ ಪತ್ತೆ

• **ಉದಯವಾಹಿನಿ ವಿಜಯನಗರ:**

ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ತಂಬ್ರಹಳ್ಳಿ ಗ್ರಾಮದ ಬಳಿಯ ತುಂಗಭದ್ರಾ ನದಿಯ ಹಿನ್ನೀರಿನಲ್ಲಿ ಮೀನು ಹಿಡಿಯಲು ಹೋಗಿ ನಾಪತ್ತೆಯಾಗಿದ್ದ ಮೂವರು ಯುವಕರಲ್ಲಿ ಓರ್ವನ ಮೃತದೇಹ ಸಿಕ್ಕಿದೆ. ಮಡಿವಾಳರ ಯಮನೂರಪ್ಪ (20) ಎಂಬವರ ಮೃತದೇಹ ಪತ್ತೆಯಾಗಿದೆ. ಇನ್ನುಳಿದ ತಂಬ್ರಹಳ್ಳಿ ಗ್ರಾಮದ ಮಡಿವಾಳರ ರಾಜ (22) ಹಾಗು ಮಡಿವಾಳರ ಅಜ್ಜಪ್ಪ (26) ಎಂಬವರಿಗೆ ಶೋಧ ಮುಂದುವರೆದಿದೆ.

ಇವರು ಮೀನು ಹಿಡಿಯಲು ತುಂಗಭದ್ರಾ ನದಿಯ ಹಿನ್ನೀರಿನ ಪ್ರದೇಶಕ್ಕೆ ತೆರಳಿದ್ದರು. ಬಳಿಕ ಮನೆಗೆ ವಾಪಸ್ ಬಾರದ ಹಿನ್ನೆಲೆಯಲ್ಲಿ ಕುಟುಂಬದವರು ಸಾಕಷ್ಟು ಹುಡುಕಾಟ ನಡೆಸಿದ್ದಾರೆ. ಯಾವುದೇ ಸುಳಿವು ಸಿಗದ ಕಾರಣ ತಂಬ್ರಹಳ್ಳಿ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ನಾಪತ್ತೆಯಾದವರ ಪೈಕಿ ಓರ್ವರ ಸಂಬಂಧಿ ಮಡಿವಾಳರ ನಾಗರಾಜ ಅವರು ತಂಬ್ರಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದರು.

## ದಿನ ಭವಿಷ್ಯ

| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
|---|---|---|
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನಿಮ್ಮ ಹೃದಯಕ್ಕೆ ಪ್ರಿಯವಾಗುವ ಯಾರನ್ನಾದರೂ ಸಂಧಿಸುವ ಅವಕಾಶಗಳು ಇಂದು ಬಲವಾಗಿವೆ. ಇಂದು ನಿಮ್ಮ ಮನಸ್ಸು ಕಚೇರಿಯ ಕೆಲಸದಲ್ಲಿ ಇರುವುದಿಲ್ಲ. ಇಂದು ನಿಮ್ಮ ಮನಸ್ಸಿನಲ್ಲಿ ಯಾವುದೇ ಸಂದಿಗ್ಧತೆ ಉಳಿದಿರುತ್ತದೆ. ಇದು ನಿಮಗೆ ಗಮನಹರಿಸಲು ಬಿಡುವುದಿಲ್ಲ.

**ವೃಷಭ** ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ಮನೆಯ ಅಗತ್ಯವಾದ ವಸ್ತುಗಾಲ ಮೇಲೆ ಹಣವನ್ನು ಖರ್ಚು ಮಾಡುವುದು ಖಂಡಿತವಾಗಿಯೂ ನಿಮಗೆ ಆರ್ಥಿಕ ತೊಂದರೆಗಳನ್ನು ನೀಡುತ್ತದೆ ಆದರೆ ಇದರಿಂದ ನೀವು ಭವಿಷ್ಯದ ಅನೇಕ ತೊಂದರೆಗಳಿಂದ ತಪ್ಪಿಸಿಕೊಳ್ಳಬಹದು.

**ಮಿಥುನ** ಹಣಕಾಸಿನಲ್ಲಿ ಸುಧಾರಣೆ ನೀವು ಪ್ರಮುಖ ಖರೀದಿಗಳನ್ನು ಮಾಡುವುದನ್ನು ಅನುಕೂಲಕರವಾಗಿಸುತ್ತದೆ. ಒಟ್ಟಾರೆ ಒಂದು ಲಾಭದಾಯಕ ದಿನವಾದರೂ ನೀವು ನಿರಾಸೆ ಭರವಸೆಯಿಡಬಹುದಾದ ಯಾರಾದರೂ ನಿಮ್ಮನ್ನು ನಿರಾಸೆಗೊಳಿಸುತ್ತಾರೆ. ಪ್ರೀತಿ ದೇವರ ಪೂಜೆಗೆ ಪರ್ಯಾಯವಾಗಿದೆ.

**ಕರ್ಕಾಟಕ** ಒತ್ತಡದ ಕೆಲಸದ ವೇಳಾಪಟ್ಟಿ ನಿಮ್ಮ ಸಹನೆಯನ್ನು ಕೆಣಕಬಹುದು. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ನೀವು ಎಲ್ಲರ ಬೇಡಿಕೆಗಳನ್ನೂ ಪೂರೈಸಲು ಪ್ರಯತ್ನಿಸಿದಲ್ಲಿ ವಿವಿಧ ದಿಕ್ಕುಗಳಲ್ಲಿ ಹರಿದು ಹೋಗುತ್ತೀರಿ. ಇತರರ ಹಸ್ತಕ್ಷೇಪ ವ್ಯಾಜ್ಯವುಂಟುಮಾಡುತ್ತದೆ.

**ಸಿಂಹ** ನಿಮ್ಮ ಸಕಾರಾತ್ಮಕ ದೃಷ್ಟಿಕೋನ ಮತ್ತು ಆತ್ಮವಿಶ್ವಾಸದಿಂದ ನಿಮ್ಮ ಸುತ್ತಲಿರುವ ಜನರನ್ನು ಪ್ರಭಾವಿಸಬಹುದಾದ ಸಾಧ್ಯತೆಗಳಿವೆ. ದೀರ್ಘಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು, ಇದು ಜೀವನದ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ.

**ಕನ್ಯಾ** ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು.

**ತುಲಾ** ಕೆಲವು ಮಾನಸಿಕ ಒತ್ತಡಗಳ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ನೀವು ಲಾಭ ಪಡೆಯುತ್ತೀರಿ ಕುಟುಂಬದ ಸದಸ್ಯರು ಸಕಾರಾತ್ಮಕ ರೀತಿಯಲ್ಲಿ ನಿಮಗೆ ಪ್ರತಿಕ್ರಿಯಿಸುತ್ತಾರೆ.

**ವೃಶ್ಚಿಕ** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಹಣವನ್ನು ಯೋಚಿಸದೆ ಮತ್ತು ಪರಿಗಣಿಸದೆ ಖರ್ಚುಮಾಡುವುದು, ನಿಮಗೆ ಎಷ್ಟು ನಷ್ಟ ಮಾಡಬಹದು ಎಂಬುದು ಇಂದು ನಿಮಗೆ ಅರ್ಥವಾಗಬಹುದು. ನಿಮ್ಮಲ್ಲಿ ಕೆಲವು ಆಭರಣ ಅಥವಾ ಗೃಹಬಳಕೆಯ ಸಾಧನಗಳನ್ನು ಖರೀದಿಸುವ ಸಾಧ್ಯತೆಗಳಿವೆ.

**ಧನಸ್ಸು** ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ? ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು .

**ಮಕರ** ಸಾಧ್ಯವಾದರೆ ದೀರ್ಘ ಪ್ರಯಾಣವನ್ನು ತಪ್ಪಿಸಿ. ಏಕೆಂದರೆ ನೀವು ಪ್ರಯಾಣಿಸು ತುಂಬಾ ದುರ್ಬಲರಾಗಿದ್ದೀರಿ ಹಾಗೂ ಇದು ಮತ್ತಷ್ಟು ನಿಮ್ಮನ್ನು ದುರ್ಬಲಗೊಳಿಸುತ್ತದೆ. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ ಎಂಬುದನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಿ .

**ಕುಂಭ** ಆರೋಗ್ಯ ಚೆನ್ನಾಗಿರುತ್ತದೆ. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ನಿಮ್ಮ ಜೊತೆಗಿರುವ ನಿಮ್ಮೊಂದಿಗೆ ಬಹಳ ಸಂತೋಷ ದಿಂದಿರುವುದಿಲ್ಲ ನೀವು ಅವರನ್ನು ಸಂತೋಷಗೊಳಿಸಲು ಏನೇ ಮಾಡಿದರೂ ಕೂಡ. ನೀವು ಮೊದಲ ನೋಟದಲ್ಲೇ ಪ್ರೀತಿಯಲ್ಲಿ ಬೀಳಬಹುದು.

**ಮೀನ** ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ ಧ್ಯಾನ ಯೋಗ ಲಾಭ ತರುತ್ತವೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಕುಟುಂಬದ ಪರಿಸ್ಥಿತಿ ನೀವು ಯೋಚಿಸುವ ಹಾಗೆ ಇರುವುದಿಲ್ಲ. ಇಂದು ಮನೆಯಲ್ಲಿ ಯಾವುದೇ ವಿಷಯದ ಬಗ್ಗೆ ಅಪಶ್ರುತಿ ಉಂಟಾಗುವ ಸಾಧ್ಯತೆ ಇದೆ.

# ಬಾಗಲಕೋಟೆ ಬಳಿ ಭೀಕರ ಅಪಘಾತ: ಬೈಕ್‌ಗೆ ಡಿಕ್ಕಿ ಹೊಡೆದು ಖಾಸಗಿ ಬಸ್ ಪಲ್ಟಿ

• **ಉದಯವಾಹಿನಿ ಬಾಗಲಕೋಟೆ:**

ಬಾಗಲಕೋಟೆ ಜಿಲ್ಲೆಯ ಬೀಳಗಿ ಕ್ರಾಸ್ ಬಳಿ ಬುಧವಾರ ಭೀಕರ ಅಪಘಾತ ಸಂಭವಿಸಿದ್ದು, ಮಹಾರಾಷ್ಟ್ರ ಮೂಲದ ಖಾಸಗಿ ಬಸ್ ಪಲ್ಟಿಯಾಗಿ ಇಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಇಂದು ಬೆಳಗ್ಗೆ ಮಹಾರಾಷ್ಟ್ರದ ನೋಂದಣಿ ಹೊಂದಿರುವ ಖಾಸಗಿ ಸ್ಲೀಪರ್ ಬಸ್‌ವೊಂದು ಹುಬ್ಬಳ್ಳಿ–ಸೋಲಾಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ಈ ಭೀಕರ ಅಪಘಾತ ಸಂಭವಿಸಿದ್ದು, ಎದುರಿನಿಂದ ಬರುತ್ತಿದ್ದ ಬೈಕ್‌ಗೆ ಡಿಕ್ಕಿ ಹೊಡೆದ ಬಳಿಕ ಬಸ್ ಚಾಲಕನ ನಿಯಂತ್ರಣ ಕಳೆದುಕೊಂಡು ಪಲ್ಟಿಯಾಗಿದೆ. ಅಪಘಾತದ ವೇಳೆ ಬಸ್‌ನಲ್ಲಿ ಸುಮಾರು 15ರಿಂದ 20 ಮಂದಿ ಪ್ರಯಾಣಿಕರು ಇದ್ದರು ಎಂದು ತಿಳಿದುಬಂದಿದೆ. ಅಪಘಾತದಲ್ಲಿ ಬೈಕ್ ಸವಾರ ಬಸ್‌ನಲ್ಲಿದ್ದ ಓರ್ವ ಪ್ರಯಾಣಿಕ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ. ಘಟನಾ ಸ್ಥಳಕ್ಕೆ ಬೀಳಗಿ ಪೊಲೀಸರು ಭೇಟಿ ನೀಡಿದ್ದು, ಪರಿಶೀಲನೆ ನಡೆಸಿದ್ದಾರೆ.

# ಉದ್ಯೋಗ ನೋಂದಣಿ; ಯುವನಿಧಿ ಯೋಜನೆ ಮಾಹಿತಿ ಕಾರ್ಯಕ್ರಮ

• **ಉದಯವಾಹಿನಿ ಕಲಬುರಗಿ.:**

ನಗರದ ಜೇವರ್ಗಿ ಕಾಲೋನಿಯ ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಕಾಲೇಜಿನ ಬಿಎ, ಬಿಕಾಂ, ಬಿಎಸ್ಸಿ ಹಾಗೂ ಬಿಬಿಎ ವಿದ್ಯಾರ್ಥಿನಿಯರಿಗೆ ಸಂಚಾರಿ ಉದ್ಯೋಗ ನೋಂದಣಿ, ಉದ್ಯೋಗಾವಕಾಶಗಳು ಮತ್ತು ಯುವನಿಧಿ ಯೋಜನೆಯ ಮಾಹಿತಿಯನ್ನು ನೀಡಲು ಕಾಲೇಜಿನ ಉದ್ಯೋಗ ಕೋಶ ದ ಸಹಯೋಗದೊಂದಿಗೆ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲ ಡಾ. ಮೋರಗೆ ಪ್ರಕಾಶ ಅವರು ವಹಿಸಿದ್ದರು. ಕಾರ್ಯಕ್ರಮವನ್ನು ಪವಿತ್ರಾ ನಿರೂಪಿಸಿದರೆ, ವಿದ್ಯಾರ್ಥಿನಿಯರಾದ ಅರುಣಾ ಮತ್ತು ಅನಿತಾ ಸ್ವಾಗತ ಗೀತೆಯನ್ನು ಹಾಡಿದರು. ಕಾಲೇಜಿನ ಉದ್ಯೋಗ ಕೋಶದ ಸಂಚಾಲಕ ಡಾ. ಸಂಗಣ್ಣ ವಿ ನಿಷ್ಠಿ ಎಲ್ಲರನ್ನೂ ಸ್ವಾಗತಿಸಿದರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಾಯಕನಿರ್ದೇಶಕರಾದ ಭಾರತಿ ಆಗಮಿಸಿದ್ದರು. ಸಂಪನ್ಮೂಲ ವ್ಯಕ್ತಿಯಾಗಿ ಸತೀಶ್ ರಾಠೋಡ ಅವರು ಆಗಮಿಸಿ ಉದ್ಯೋಗಅವಕಾಶಗಳು, ಯುವನಿಧಿ ಯೋಜನೆಯ ಮಹತ್ವದ ಬಗ್ಗೆ ವಿಸ್ತಾರವಾಗಿ ಮಾತನಾಡಿದರು. ಉದ್ಯೋಗ ನೊಂದಣಿಯ ಮಹತ್ವವನ್ನು ತಿಳಿಸಿದರು. ಜೊತೆಗೆ ನೆಹರೂ ಯುವ ಕೇಂದ್ರದ ರಾಜು ಅವರು ಮೈ ಭಾರತ್ ಪೋರ್ಟಲ್ ಗೆ ನೋಂದಣಿಯಾಗಿ ಸದುಪಯೋಗಪಡಿಸಿಕೊಳ್ಳುವುದರ ಬಗ್ಗೆ ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಪ್ರಥಮ ದರ್ಜೆ ಸಹಾಯಕ ಶರಣಪ್ಪ ಒಕ್ಕಲಕುಂಟಿ ಉಪಸ್ಥಿತರಿದ್ದರು.

# ಪತ್ನಿ ಕೊಲೆಗೆ ಯತ್ನಿಸಿದ ಪತಿಗೆ ಜೈಲು ಶಿಕ್ಷೆ

• **ಉದಯವಾಹಿನಿ ಕಲಬುರಗಿ**

ಕುಡಿದು ಏಕೆ ದುಡ್ಡು ಹಾಳು ಮಾಡುತಿ, ಸಂಸಾರ ಅಡಚಣೆಗೆ ದುಡ್ಡು ಬೇಕು ಎಂದು ಹೇಳಿದ ಪತ್ನಿಯ ಜೊತೆಗೆ ಜಗಳ ತೆಗೆದು, ಅವಾಚ್ಯವಾಗಿ ಬೈಯ್ದು, ಕುಡುಗೋಲದಿಂದ ಹೊಡೆದು ಆಕೆಯ ಕೊಲೆಗೆ ಯತ್ನಿಸಿದ ಪತಿಗೆ ಇಲ್ಲಿನ 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ 3 ವರ್ಷ ಶಿಕ್ಷೆ ಮತ್ತು 10 ಸಾವಿರ ರೂಪಾಯಿ ದಂಡ ವಿಧಿಸಿದೆ. ಕಮಲಾಪುರ ಪೊಲೀಸ್ ಠಾಣೆ ವ್ಯಾಪ್ತಿಯ ಮರಗುತ್ತಿ ಗ್ರಾಮದ ಮಹಾದೇವಪ್ಪ ತಂದೆ ಮಹಾರುದ್ರಪ್ಪ ಸಂಬಾಜಿ (52) ಶಿಕ್ಷೆಗೆ ಗುರಿಯಾದ ಆರೋಪಿ.

2022ರಲ್ಲಿ ಆರೋಪಿ ತನ್ನ ಹೊಲದಲ್ಲಿ ಬೆಳೆದ ತೊಗರಿಯನ್ನು ಅಡತಿಗೆ ಹಾಕಿ ಪಟ್ಟಿ ತೆಗೆದುಕೊಂಡು ಮದ್ಯಪಾನ ಮಾಡಿ ಮನೆಗೆ ಬಂದಾಗ ಪತ್ನಿ ಕುಡಿದು ಏಕೆ ದುಡ್ಡು ಹಾಳು ಮಾಡುತಿ, ಸಂಸಾರ ಅಡಚಣೆಗೆ ದುಡ್ಡು ಬೇಕು ಎಂದು ಹೇಳಿದಕ್ಕೆ ಆಕೆಯ ಜೊತೆಗೆ ಜಗಳ ತೆಗೆದು, ಅವಾಚ್ಯವಾಗಿ ಬೈಯ್ದು ಕುಡುಗೋಲದಿಂದ ಹೊಡೆದು ಕೊಲೆಗೆ ಯತ್ನಿಸಿದ್ದ. ಈ ಸಂಬಂಧ ಕಮಾಲಾಪೂರ ಪೊಲೀಸ್ ಠಾಣೆಯ ಎಎಸ್ಐ ಭೀಮರಾಯ ಪಾಟೀಲ ಅವರು ಪ್ರಕರಣ ದಾಖಲಿಸಿಕೊಂಡು ತನಿಖೆ ಪೂರ್ಣಗೊಳಿಸಿ ಆರೋಪಿ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶ ಎ.ವಿ. ಶ್ರೀನಾಥ ಅವರು, ಪ್ರಕರಣದ ವಿಚಾರಣೆ ನಡೆಸಿ ಆರೋಪಿ ಮಹಾದೇವಪ್ಪ ಸಂಬಾಜಿಗೆ 3 ವರ್ಷ ಶಿಕ್ಷೆ ಮತ್ತು 10 ಸಾವಿರ ರೂ.ದಂಡ ವಿಧಿಸಿದ್ದಾರೆ.

# ಕೂಡ್ಲಿಗಿಯಲ್ಲಿ ಸಿ ಎನ್ ಜಿ ಪುನರಾರಂಭಕ್ಕೆ ಆಟೋ ಚಾಲಕರ ಪ್ರತಿಭಟನೆ, ವಿಳಂಬವಾದರೆ ಸತ್ಯಾಗ್ರಹ

• **ಉದಯವಾಹಿನಿ ಕೂಡ್ಲಿಗಿ.**

ಪಟ್ಟಣದ ಸಂಡೂರು ರಸ್ತೆಯ ಯಶಸ್ ಶ್ರೇಯಾ ಪೆಟ್ರೋಲ್ ಬಂಕ್ನಲ್ಲಿ ಕಳೆದ ಎರಡು ತಿಂಗಳಿಂದ ಸ್ಥಗಿತಗೊಂಡಿರುವ ಸಿಎನ್ಜಿ ಘಟಕವನ್ನು ತಕ್ಷಣ ಪುನರ್ ಆರಂಭಿಸಿ, ಇಂಧನ ಪೂರೈಕೆ ಮಾಡಬೇಕು ಎಂದು ಒತ್ತಾಯಿಸಿ ಫೆಡರೇಷನ್ ಆಫ್ ಕರ್ನಾಟಕ ಆಟೋ ರಿಕ್ಷಾ ಡ್ರೈವರ್ ಯೂನಿಯನ್ನ ತಾಲ್ಲೂಕು ಘಟಕದ ಪದಾಧಿಕಾರಿಗಳು ಬಂಕ್ ಮುಂದೆ ಪ್ರತಿಭಟನೆ ನಡೆಸಿ ಗ್ರೇಡ್ 2 ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಗೆ ಮನವಿ ಸಲ್ಲಿಸಿ ಪೂರೈಕೆ ವಿಳಂಬವಾದರೆ ಕುಟುಂಬ ಸಮೇತ ಸತ್ಯಾಗ್ರಹ ಕುಳಿತುಕೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಪ್ರತಿಭಟನೆ ನೇತೃತ್ವವಹಿಸಿದ್ದ ತಾಲ್ಲೂಕು ಸಮಿತಿ ಅಧ್ಯಕ್ಷ ಮಂಜು ಮಯೂರ ಮಾತನಾಡಿ, ಸಂಡೂರು ರಸ್ತೆಯಲ್ಲಿರುವ ಸಿಎನ್ಜಿ ಘಟಕವನ್ನೇ ನಂಬಿಕೊಂಡು ಕೂಡ್ಲಿಗಿ ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಅನೇಕ ಯುವಕರು ಸಿಎನ್ಜಿ ಆಟೋ

☛ ಉದಯವಾಹಿನಿ ಚಿತ್ರ



ಹಾಗೂ ಕಾರುಗಳನ್ನು ಖರೀದಿಸಿ ಸ್ವ ಉದ್ಯೋಗದಿಂದ ಜೀವನ ನಡೆಸುತ್ತಿದ್ದಾರೆ. ಆದರೆ ಕಳೆದೆರಡು ತಿಂಗಳಿಂದ ಸಿಎನ್ಜಿ ಪೂರೈಕೆ ಸ್ಥಗಿತಗೊಂಡಿರುವುದರಿಂದ ಚಾಲಕರು ಅನಿವಾರ್ಯವಾಗಿ ಹೆಚ್ಚಿನ ದರದ ಪರ್ಯಾಯ ಇಂಧನ ಬಳಸುವಂತಾಗಿದೆ.

> ಸಂಬಂಧಪಟ್ಟ ಅಧಿಕಾರಿಗಳು ಪೆಟ್ರೋಲ್ ಬಂಕ್ಗೆ ಭೇಟಿ ನೀಡಿ ಸಿಎನ್‌ಜಿ ಘಟಕ ಸ್ಥಗಿತಗೊಂಡಿರುವ ಕಾರಣ ಪರಿಶೀಲಿಸಬೇಕು. ಸಮಸ್ಯೆ ಬಗೆಹರಿಸಿ ಕೂಡಲೇ ಸಿಎನ್ಜಿ ಪೂರೈಕೆ ಆರಂಭಿಸಲು ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಆಟೋ ಚಾಲಕರು ತಮ್ಮ ಕುಟುಂಬ ಸಮೇತ ಬೀದಿಗಿಳಿದು ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಮಂಜು ಮಯೂರ ಎಚ್ಚರಿಸಿದರು.

ಸಿಎನ್‌ಜಿ ಸಿಗದ ಕಾರಣ ದಿನನಿತ್ಯದ ನಿರ್ವಹಣಾ ವೆಚ್ಚ ಹೆಚ್ಚಾಗಿದ್ದು, ಆಟೋ ಚಾಲಕರ ಆದಾಯ ಗಣನೀಯವಾಗಿ ಕುಸಿದಿದೆ. ಕುಟುಂಬ ನಿರ್ವಹಣೆ, ವಾಹನದ ಸಾಲದ ಕಂತು ಹಾಗೂ ಇತರ ಖರ್ಚುಗಳನ್ನು ಭರಿಸುವುದು ಕಷ್ಟಕರವಾಗಿದ್ದು, ಚಾಲಕರು ಮತ್ತು ವಾಹನ ಮಾಲೀಕರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಾರ್ವಜನಿಕರೂ ಸಹ ಇಂಧನದ ಕೊರತೆಯಿಂದ ತೊಂದರೆ ಅನುಭವಿಸುವಂತಾಗಿದೆ.

# ಸಾರಾಯಿ ಮುಕ್ತ ಗ್ರಾಮಕ್ಕೆ ನೆಮ್ಮದಿಯ ನೆಲೆ, ಹಟ್ಟಿ ಗ್ರಾಮಸ್ಥರ ಮಾದರಿ ನಿರ್ಧಾರ!

## ಹಟ್ಟಿ ಗ್ರಾಮದಲ್ಲಿ ಅಕ್ರಮ ಸಾರಾಯಿ ಮಾರಾಟಕ್ಕೆ ಕಡಿವಾಣ ಬಿದ್ದಿದ್ದು, ನೆಮ್ಮದಿಯ ವಾತಾವರಣ ನಿರ್ಮಾಣವಾಗಿದೆ.

• **ಉದಯವಾಹಿನಿ ಕೊಪ್ಪಳ:**

ಅಕ್ರಮ ಸಾರಾಯಿ ಮಾರಾಟದಿಂದ ಗ್ರಾಮಗಳ ನೆಮ್ಮದಿ ಹಾಳಾಗುತ್ತಿದೆ ಎಂಬುದು ಸಾಮಾನ್ಯ ದೂರು. ಊರಿನ ಓಣಿಗಳಲ್ಲಿಯೇ ಅಕ್ರಮವಾಗಿ ಮದ್ಯ ಮಾರಾಟ ನಡೆಯುವುದರಿಂದ ಕುಡಿತದ ಚಟಕ್ಕೆ ಒಳಗಾಗುವವರ ಸಂಖ್ಯೆ ಹೆಚ್ಚಾಗುತ್ತಿದೆ. ಇದರಿಂದ ಕುಟುಂಬಗಳಲ್ಲಿ ಕಲಹ, ಆರ್ಥಿಕ ಸಂಕಷ್ಟ ಹಾಗೂ ಸಾಮಾಜಿಕ ಅಶಾಂತಿ ಉಂಟಾಗುತ್ತಿರುವುದು ಕಂಡುಬರುತ್ತಿದೆ. ಆದರೆ ಇದಕ್ಕೆ ವ್ಯತಿರಿಕ್ತವಾಗಿ ಕೊಪ್ಪಳ ತಾಲ್ಲೂಕಿನ ಹಟ್ಟಿ ಗ್ರಾಮಸ್ಥರು ಒಗ್ಗಟ್ಟಿನಿಂದ ಕೈಗೊಂಡಿರುವ ನಿರ್ಧಾರ ಇದೀಗ ಮಾದರಿಯಾಗಿದೆ. ಸುಮಾರು 300 ಮನೆಗಳನ್ನು ಹೊಂದಿರುವ ಹಟ್ಟಿ ಗ್ರಾಮದಲ್ಲಿ ಈ ಹಿಂದೆ 9 ಕಡೆ ಅಂಗಡಿಗಳಲ್ಲಿ ಅಕ್ರಮ ಸಾರಾಯಿ ಮಾರಾಟ

> 1 : ಗ್ರಾಮಸ್ಥರ ಒಗ್ಗಟ್ಟಿನ ನಿರ್ಧಾರ
> 2 : ಗ್ರಾಮಕ್ಕೆ ಒಂದು ಲಕ್ಷ ಪ್ರಶಸ್ತಿ
> 3 : ಪ್ರೋತ್ಸಾಹಕ್ಕೆ ಬಹುಮಾನ ಹಣ

ಮಾಡಲಾಗುತ್ತಿತ್ತು. ಅಲ್ಲದೆ ಗ್ರಾಮದ ಹೊರವಲಯದಲ್ಲಿರುವ ಕುಷ್ಟಗಿ ಕೊಪ್ಪಳ ಮುಖ್ಯ ರಸ್ತೆಯ ಮೂರು ಡಾಬಾಗಳಲ್ಲಿಯೂ ಅಕ್ರಮವಾಗಿ ಮದ್ಯ ಮಾರಾಟ ನಡೆಯುತ್ತಿತ್ತು. ಬೇಕೆಂದಾಗಲೆಲ್ಲ ಮದ್ಯ ಸುಲಭವಾಗಿ ದೊರೆಯುತ್ತಿದ್ದ ಪರಿಣಾಮ ಗ್ರಾಮದಲ್ಲಿ ಕುಡಿತದ ಚಟಕ್ಕೆ ಒಳಗಾಗುವವರ ಸಂಖ್ಯೆ ಹೆಚ್ಚಾಗಿತ್ತು.

ಯುವಕರು ದುಡಿಮೆಯಿಲ್ಲದೆ ಓಡಾಡುವುದು, ಗಲಾಟೆ

☛ ಉದಯವಾಹಿನಿ ಚಿತ್ರ



> ಹಟ್ಟಿ ಗ್ರಾಮಸ್ಥರ ಸಾರಾಯಿ ಮುಕ್ತ ಗ್ರಾಮದ ನಿರ್ಧಾರಕ್ಕೆ ಕೊಪ್ಪಳ ಗವಿಮಠದ ಶ್ರೀ ಗವಿಸಿದ್ದೇಶ್ವರ ಸ್ವಾಮೀಜಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ''ಗುಡಿ, ಗುಂಡಾರ ಕಟ್ಟುವುದಕ್ಕಿಂತ ಗ್ರಾಮದಲ್ಲಿ ಸಾರಾಯಿ ಮಾರಾಟ ನಿಲ್ಲಿಸುವುದು ಉತ್ತಮ ಕೆಲಸ. ಇದರಿಂದ ಕುಟುಂಬಗಳಲ್ಲಿ ನೆಮ್ಮದಿ ನೆಲೆಸುತ್ತದೆ'' ಎಂಬ ಸಂದೇಶದ ಮೂಲಕ ಕಾರ್ಯವನ್ನು ಶ್ಲಾಘಿಸಿದ್ದಾರೆ. -ಗ್ರಾಮಸ್ಥರು

> ಸುಮಾರು 300 ಮನೆ, 1,500 ಜನಸಂಖ್ಯೆ ಇರುವ ಕೊಪ್ಪಳ ತಾಲ್ಲೂಕಿನ ಹನುಮನಹಳ್ಳಿ ಗ್ರಾಮದಲ್ಲಿ ಕಳೆದ 30 ವರ್ಷಗಳ ಹಿಂದೆಯೇ ಗುಟ್ಕಾ ಸೇರಿದಂತೆ ತಂಬಾಕುಯುಕ್ತ ಪದಾರ್ಥಗಳ ಸೇವನೆ ಮತ್ತು ಮಾರಾಟ ನಿಷೇಧ ಮಾಡಲಾಗಿದೆ. ಗ್ರಾಮದ ಎಲ್ಲರೂ ಸೇರಿ ತೆಗೆದುಕೊಂಡಿರುವ ಈ ತೀರ್ಮಾನವನ್ನು ಇಂದಿಗೂ ಚಾಚೂ ತಪ್ಪದೆ ಪಾಲಿಸಲಾಗುತ್ತಿದೆ. -ಗ್ರಾಮಸ್ಥರು

ಮಾಡುವುದು ಸೇರಿದಂತೆ ಹಲವು ಸಮಸ್ಯೆಗಳು ಗ್ರಾಮದಲ್ಲಿ ತಲೆದೋರಿದ್ದವು ಎಂದು ಸ್ಥಳೀಯರು ಹೇಳಿದ್ದಾರೆ.

ಇದರ ನಡುವೆ, ಗ್ರಾಮದ 16 ವರ್ಷದ ಬಾಲಕನೊರ್ವ ಕುಡಿತದ ಚಟಕ್ಕೆ ಒಳಗಾಗಿ ಆರೋಗ್ಯ ಹದಗೆಟ್ಟು ಮೃತಪಟ್ಟ ಘಟನೆ ಗ್ರಾಮಸ್ಥರನ್ನು ತೀವ್ರವಾಗಿ ಕಾಡಿತ್ತು. ಈ ಘಟನೆ ಬಳಿಕ ಗ್ರಾಮದಲ್ಲಿ ಮದ್ಯ ಮಾರಾಟವನ್ನು ಸಂಪೂರ್ಣವಾಗಿ ನಿಲ್ಲಿಸಬೇಕೆಂಬ ಒತ್ತಾಯ ಮಹಿಳೆಯರಿಂದ ಬಲವಾಗಿ ಕೇಳಿಬಂತು. ಗ್ರಾಮದ ಮಹಿಳೆಯರು ಹಾಗೂ ಹಿರಿಯರ ಮನವಿಯ ಹಿನ್ನೆಲೆಯಲ್ಲಿ ಮಾರುತೇಶ್ವರ ದೇವಸ್ಥಾನದ ಆವರಣದಲ್ಲಿ ಗ್ರಾಮಸ್ಥರು ಸಭೆ ಸೇರಿ, ಗ್ರಾಮದಲ್ಲಿ ಸಾರಾಯಿ ಮಾರಾಟವನ್ನು ಸಂಪೂರ್ಣವಾಗಿ ನಿರ್ಬಂಧಿಸುವ ನಿರ್ಧಾರ ಕೈಗೊಂಡರು. ಗ್ರಾಮಸ್ಥರ ಒಗ್ಗಟ್ಟಿನ ನಿರ್ಧಾರದ ಪರಿಣಾಮ ಇದೀಗ ಹಟ್ಟಿಯಲ್ಲಿ ಅಕ್ರಮ ಸಾರಾಯಿ ಮಾರಾಟಕ್ಕೆ ಕಡಿವಾಣ ಬಿದ್ದಿದ್ದು, ಗ್ರಾಮದಲ್ಲಿ ನೆಮ್ಮದಿಯ ವಾತಾವರಣ ನಿರ್ಮಾಣವಾಗಿದೆ.

''ದುಡಿದು ಸಂಪಾದಿಸಿ, ಕುಟುಂಬದೊಂದಿಗೆ ನೆಮ್ಮದಿಯಿಂದ ಬದುಕುವ ವಾತಾವರಣ ನಿರ್ಮಾಣವಾಗಬೇಕು. ಗ್ರಾಮದಲ್ಲಿ ಸಾರಾಯಿ ಮಾರಾಟ ಮತ್ತೆ ಆರಂಭವಾಗದಂತೆ ಇದೇ ನಿರ್ಧಾರ ಮುಂದುವರಿಯಬೇಕು'' ಎಂದು ಗ್ರಾಮಸ್ಥರು ಆಶಿಸಿದ್ದಾರೆ.

ರಾಜ್ಯ ಮದ್ಯಪಾನ ಸಂಯಮ ಮಂಡಳಿಯು ಪ್ರತಿವರ್ಷ ಮದ್ಯಪಾನ ನಿಯಂತ್ರಣ ಹಾಗೂ ಸಂಯಮಕ್ಕೆ ಉತ್ತೇಜನ ನೀಡುವ ವ್ಯಕ್ತಿಗಳು ಮತ್ತು ಸಂಸ್ಥೆಗಳಿಗೆ ಪ್ರಶಸ್ತಿ ನೀಡುತ್ತದೆ. ಈ ಬಾರಿ ಕೊಪ್ಪಳ ಗವಿಮಠದ ಶ್ರೀ ಗವಿಸಿದ್ದೇಶ್ವರ ಸ್ವಾಮೀಜಿಗಳಿಗೆ ಪ್ರಶಸ್ತಿ ನೀಡಲು ಮಂಡಳಿ ಮುಂದಾಗಿತ್ತು. ಆದರೆ ಸ್ವಾಮೀಜಿಗಳು ತಾವು ಪ್ರಶಸ್ತಿ ಸ್ವೀಕರಿಸುವ ಬದಲು, ತಮ್ಮ ಬದಲಿಗೆ ಮದ್ಯಮುಕ್ತವಾಗಿರುವ ಗ್ರಾಮಕ್ಕೆ ಪ್ರಶಸ್ತಿ ನೀಡುವಂತೆ ಮನವಿ ಮಾಡಿದ್ದರು. ಅವರ ಸಲಹೆಯಂತೆ ಹಟ್ಟಿ ಗ್ರಾಮಕ್ಕೆ ಪ್ರಶಸ್ತಿ ನೀಡಲಾಗಿದೆ.

ರಾಜ್ಯ ಮದ್ಯಪಾನ ಸಂಯಮ ಮಂಡಳಿಯಿಂದ ನೀಡಲಾಗುವ ಒಂದು ಲಕ್ಷ ರೂ. ನಗದು ಬಹುಮಾನವನ್ನು ಗ್ರಾಮಸ್ಥರು ಠೇವಣಿಯಾಗಿ ಇಟ್ಟು, ಅದರಿಂದ ಬರುವ ಬಡ್ಡಿ ಹಣವನ್ನು ಪ್ರತಿವರ್ಷ ಗ್ರಾಮದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಉತ್ತಮ ಸಾಧನೆ ಮಾಡುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನವಾಗಿ ನೀಡಲು ನಿರ್ಧರಿಸಿದ್ದಾರೆ. ಮದ್ಯಮುಕ್ತ ಗ್ರಾಮದ ಮಾದರಿ ನಿರ್ಧಾರಕ್ಕೆ ಶಿಕ್ಷಣ ಪ್ರೋತ್ಸಾಹದ ಹೊಸ ಅರ್ಥವನ್ನು ನೀಡಿರುವುದು ವಿಶೇಷವಾಗಿದೆ.

# ಕಾಲುವೆಗೆ ನೀರು ಹರಿಸದಿದ್ದರೆ ವಿಷ ಕುಡಿಯುವುದೊಂದೇ ಹಾದಿ: ಕಣ್ಣೀರಿಟ್ಟ ರೈತರು

• **ಉದಯವಾಹಿನಿ ಮುದ್ದೇಬಿಹಾಳ:**

''ಹೊಲದಲ್ಲಿ ಬೆಳೆದ ಬೆಳೆಗಳೆಲ್ಲ ನೀರಿಲ್ಲದೆ ಒಣಗಿ ಹೋಗಿವೆ. ಕುಡಿಯಲು ನೀರಿಲ್ಲ, ದನ–ಕರುಗಳ ದಾಹ ತೀರಿಸಲು ಹನಿ ನೀರೂ ಸಿಗುತ್ತಿಲ್ಲ. ಸಾಲ–ಶೂಲ ಮಾಡಿ ಲಕ್ಷ ರೂಪಾಯಿ ವೆಚ್ಚದಲ್ಲಿ ಬೆಳೆದ ಬೆಳೆಯನ್ನು ನೋಡಿ ಕಣ್ಣೀರು ಬರುತ್ತಿದೆ. ಅಧಿಕಾರಿಗಳು ಕಾಲುವೆಗೆ ನೀರು ಬಿಡದಿದ್ದರೆ, ನಮಗೆ ವಿಷ ಕೊಡಿ, ಕುಡಿದು ಸಾಯುತ್ತೇವೆ!'' ?ಹೀಗೆಂದು ಚವನಭಾವಿ ಗ್ರಾಮದ ರೈತ ಸಿದ್ದಪ್ಪ ಮಾದರ ಅಧಿಕಾರಿಗಳ ಮುಂದೆ ತಮ್ಮ ಅಳಲು ತೋಡಿಕೊಂಡರು.


ಪಟ್ಟಣದ ಕೃಷ್ಣಾ ಭಾಗ್ಯ ಜಲ ನಿಗಮದ ಎ.ಎಲ್.ಬಿ.ಸಿ. ಉಪ ವಿಭಾಗ–2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಗೆ ಬುಧವಾರ ಭೇಟಿ ನೀಡಿದ ಚವನಭಾವಿ ಗ್ರಾಮದ ರೈತರು, ಎಂಜಿನಿಯರ್‌ಗಳಾದ ಬಿ.ಎಂ. ಸಾತಿಹಾಳ ಹಾಗೂ ಎಸ್.ಕೆ. ದೊಡ್ಡಮನಿ ಅವರಿಗೆ ಮನವಿ ಪತ್ರ ಸಲ್ಲಿಸಿ ತಕ್ಷಣ ಕಾಲುವೆಗೆ ನೀರು ಹರಿಸುವಂತೆ ಒತ್ತಾಯಿಸಿದರು.

**'ಮಳೆ ಬಂದ ಮೇಲೆ ನೀರು ಬಿಟ್ಟರೆ ಏನು ಪ್ರಯೋಜನ?'**

ಅಲಮಟ್ಟಿ ಜಲಾಶಯದ ಚಿಮ್ಮಲಗಿ ಎ.ಎ.ಎಲ್.ಬಿ.ಸಿ. ಎಡದಂಡೆ ಕಾಲುವೆಯ ಡಿಸ್ಟ್ರಿಬ್ಯೂಟರ್–40ನೇ ಕಾಲುವೆಗೆ ಸಮರ್ಪಕವಾಗಿ ನೀರು ಹರಿಯುತ್ತಿಲ್ಲ. ಕಾಲುವೆಯ ಮುಖದಿಂದ ಟೇಲ್ ಎಂಡ್‌ವರೆಗೆ (ಕೊನೆಯ ಭಾಗ) ನೀರು ತಲುಪದ ಕಾರಣ ಚವನಭಾವಿ ಗ್ರಾಮದ ರೈತರು ನೀರಾವರಿ ಸೌಲಭ್ಯದಿಂದ ವಂಚಿತರಾಗಿದ್ದಾರೆ. ಬೆಳೆ ಉಳಿಸಿಕೊಳ್ಳುವ ಈ ಸಂಕಷ್ಟದ ಸಮಯದಲ್ಲಿ ನೀರು ಹರಿಸದೆ, ಮಳೆಗಾಲದಲ್ಲಿ ನೀರು ಬಿಟ್ಟರೆ ರೈತರಿಗೆ ಏನು ಪ್ರಯೋಜನ? ಎಂದು ರೈತರು

**ರೈತರ ತೀವ್ರ ಆಕ್ರೋಶ**

☛ ಉದಯವಾಹಿನಿ ಚಿತ್ರ




> ಒಂದೆಡೆ ಬರಗಾಲ ಹಾಗೂ ಮಳೆಯ ಅಭಾವದಿಂದಾಗಿ ಜಮೀನಿನಲ್ಲಿ ಬೆಳೆದಿದ್ದ ತೊಗರಿ, ಸಜ್ಜೆ ಸೇರಿದಂತೆ ಹಲವು ಬೆಳೆಗಳು ಒಣಗುತ್ತಿವೆ. ಸಾವಿರಾರು ರೂಪಾಯಿ ಸಾಲ ಮಾಡಿ ಬಿತ್ತನೆ ಮಾಡಿರುವ ರೈತರು, ಬೆಳೆ ಕೈಕೊಟ್ಟರೆ ಸಾಲ ತೀರಿಸುವುದು ಹೇಗೆ ಎಂಬ ಚಿಂತೆಯಲ್ಲಿ ಕಣ್ಣೀರಿನಲ್ಲಿ ದಿನ ಕಳೆಯುತ್ತಿದ್ದಾರೆ. ಕೂಡಲೇ ಎ.ಎಲ್.ಬಿ.ಸಿ. ಕಾಲುವೆ ಮೂಲಕ ನೀರು ಹರಿಸಿ, ಬೆಳೆಗಳನ್ನು ಉಳಿಸಬೇಕು ಹಾಗೂ ನಷ್ಟಕ್ಕೊಳಗಾದ ರೈತರಿಗೆ ಸೂಕ್ತ ಪರಿಹಾರ ನೀಡಬೇಕೆಂದು ಆಗ್ರಹಿಸಿದರು. - ರೈತರು

ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಅಲ್ಲದೆ, ಮಳೆನೀರು ಬಂದಾಗ ಟೇಲ್ ಎಂಡ್‌ಗೆ ತೆರಳಿ ಫೋಟೋ ತೆಗೆದು

**ಕಾಲುವೆಯಲ್ಲಿ ನೀರು ಹರಿಯದಿರಲು ಕಾರಣವೇನು**

> ಪ್ರತಿ ವರ್ಷ ಕಾಲುವೆ ಸ್ವಚ್ಛತೆ, ಹೂಳು ಎತ್ತುವುದು, ಕಳೆ ತೆಗೆಯುವುದು ಹಾಗೂ ನಿರ್ವಹಣೆಯ ಹೆಸರಿನಲ್ಲಿ ಸರ್ಕಾರದ ಲಕ್ಷಾಂತರ ರೂಪಾಯಿ ಅನುದಾನ ಖರ್ಚಾಗುತ್ತಿದೆ. ಆದರೂ ಕಾಲುವೆಯಲ್ಲಿ ನೀರು ಹರಿಯದಿರಲು ಕಾರಣವೇನು ಎಂದು ಪ್ರಶ್ನಿಸಿದ ರೈತರು, ಕಳೆದ 5 ವರ್ಷಗಳಲ್ಲಿ ಡಿಸ್ಟ್ರಿಬ್ಯೂಟರ್–40ನೇ ಕಾಲುವೆಯ ಕಾಮಗಾರಿಗಳ ಅಂದಾಜು, ಟೆಂಡರ್, ವರ್ಕ್ ಆರ್ಡರ್, ಎಂ.ಬಿ. ಹಾಗೂ ಬಿಲ್ ಪಾವತಿ ದಾಖಲೆಗಳನ್ನು ಸಮಗ್ರವಾಗಿ ಪರಿಶೀಲಿಸಬೇಕು ಎಂದು ಆಗ್ರಹಿಸಿದರು.

ನೀರು ತಲುಪಿದೆ ಎಂದು ಸುಳ್ಳು ದಾಖಲೆ ಸೃಷ್ಟಿಸುವುದನ್ನು ಬಿಟ್ಟು, ನೈಜ ನೀರಾವರಿ ಅವಧಿಯಲ್ಲಿ ಡ್ಯಾಂನಿಂದ ನೀರು ಕೊನೆ ಭಾಗಕ್ಕೆ ತಲುಪುತ್ತಿದೆಯೇ ಎಂಬುದನ್ನು ಸ್ಥಳದಲ್ಲೇ ಅಳತೆ ಮಾಡಿ ದಾಖಲಿಸಬೇಕು ಹಾಗೂ ಸ್ಥಳ ಪರಿಶೀಲನಾ ವರದಿ ಮತ್ತು ಪಂಚನಾಮೆ ಸಿದ್ಧಪಡಿಸಿ ಶಾಶ್ವತ ಪರಿಹಾರ ಒದಗಿಸಬೇಕು ಎಂದು ಮನವಿ ಮಾಡಿದರು.

ಈ ಪ್ರತಿಭಟನೆ ಹಾಗೂ ಮನವಿ ಸಲ್ಲಿಕೆಯ ಸಂದರ್ಭದಲ್ಲಿ ಗ್ರಾಮದ ಮುಖಂಡರು ಹಾಗೂ ರೈತರಾದ ಸಿದ್ದಪ್ಪ ಗುರಿಕಾರ, ಸಿದ್ದಪ್ಪ ಮಾದರ, ಮಲ್ಲಪ್ಪ ಮಾಲಿನ, ಹುಲಪ್ಪ ಗುಂಡಕರಜಗಿ, ಯಮನಪ್ಪ ಬಿರಾದಾರ, ಸಂಗಪ್ಪ ಬಿರಾದಾರ, ಮೌನೇಶ ಬಿರಾದಾರ, ಸಿದ್ದಪ್ಪ ಮದರಿ, ದೇವಪ್ಪ ಜಂಗಡಭಾವಿ, ಸಿದ್ದಪ್ಪ ವಾಲಿಕಾರ, ಹಣಮಂತ ಗೋಗಿ ಮತ್ತು ಜಕ್ಕಪ್ಪ ನಾಲತವಾಡ ಸೇರಿದಂತೆ ಚವನಭಾವಿ ಗ್ರಾಮದ ಅನೇಕ ರೈತರು ಭಾಗವಹಿಸಿದ್ದರು.

# ಸರ್ಕಾರಿ ನೆರವಿಗೆ ಕಣ್ಣೀರಿನ ಮೊರೆ ತ್ರಿಚಕ್ರ ವಾಹನವಿಲ್ಲದೆ ಪರದಾಡುವ ಸಿದ್ದಾಪುರದ ರಜಿಯಾಬೇಗಂ

• **ಉದಯವಾಹಿನಿ ಕಾರಟಗಿ,**

ಸರ್ಕಾರದ ಸೌಲಭ್ಯಗಳಿಲ್ಲದೆ ಒಬ್ಬ ವಿಕಲಚೇತನ ಮಹಿಳೆ 9 ವರ್ಷಗಳಿಂದ ಹಳೆಯ ಹ್ಯಾಂಡಲ್ ಸೈಕಲ್ ದೂಡುತ್ತಾ ಜೀವನ ನಡೆಸುತ್ತಿರುವ ಹೃದಯವಿದ್ರಾವಕ ಘಟನೆ ಕಾರಟಗಿ ತಾಲ್ಲೂಕಿನ ಸಿದ್ದಾಪುರ ಗ್ರಾಮದಲ್ಲಿ ಬೆಳಕಿಗೆ ಬಂದಿದೆ.

ಸಿದ್ದಾಪುರ 9ನೇ ವಾರ್ಡಿನ ನಿವಾಸಿ ಶ್ರೀಮತಿ ರಜಿಯಾಬೇಗಂ. ಅವರದ್ದು ಕಣ್ಣೀರಿನ ಕಥೆ. 10 ವರ್ಷಗಳ ಹಿಂದೆ ಶಸ್ತ್ರಚಿಕಿತ್ಸೆ ಬಳಿಕ ಎರಡೂ ಕಾಲುಗಳ ಸ್ವಾಧೀನತೆ ಕಳೆದುಕೊಂಡಿರುವ ರಜಿಯಾಬೇಗಂ ಅವರು ನಡೆದಾಡಲೂ ಆಗದ ಸ್ಥಿತಿಯಲ್ಲಿದ್ದಾರೆ.

**20 ವರ್ಷದಿಂದ ಒಂಟಿ ಹೋರಾಟ:**

ಪತಿ ರಾಜಸಾಬ್ ಅವರು 20 ವರ್ಷಗಳ ಹಿಂದೆಯೇ ಇಬ್ಬರು ಹೆಣ್ಣು ಮಕ್ಕಳನ್ನು ಬಿಟ್ಟು ತೊರೆದು ಹೋಗಿದ್ದಾರೆ. ಕಡುಬಡತನದಲ್ಲೇ ಇಬ್ಬರು ಹೆಣ್ಣು ಮಕ್ಕಳಿಗೆ ಮದುವೆ ಮಾಡಿದ ರಜಿಯಾಬೇಗಂ ಈಗ ಸಂಪೂರ್ಣ ಅನಾಥರಾಗಿದ್ದಾರೆ.

ಕಳೆದ 9 ವರ್ಷಗಳಿಂದ ದಿನಸಿ ತರಲು, ಸಂತೆಗೆ ಹೋಗಲು ಮೂರು ಗಾಲಿಯ ಹ್ಯಾಂಡಲ್ ಸೈಕಲ್ ಒಂದೇ ಆಧಾರ. ಆದರೆ ಆ ಸೈಕಲ್ ಕೂಡ ತುಂಬಾ ಹಳೆಯದಾಗಿ ಕೈಯಿಂದ ತಿರುಗಿಸುವ ಸ್ಥಿತಿಯಲ್ಲಿಲ್ಲ. ಆದರೂ 2 ಕಿ.ಮೀ ದೂರದವರೆಗೆ ಕೈಯಿಂದ



☛ ಉದಯವಾಹಿನಿ ಚಿತ್ರ

**ಬದುಕೋಕೆ ಒಂದು ಸೈಕಲ್ ಕೊಡಿ**

ದೂಡಿಕೊಂಡು ಹೋಗುತ್ತಿದ್ದಾರೆ.

**ನನಗೆ ಸರ್ಕಾರ ಏನೂ ಕೊಟ್ಟಿಲ್ಲ**

ಪತ್ರಕರ್ತರಾದ ವುಂತಗಲ್ ಮಂಜುನಾಥ್ ಮತ್ತು ಸುಂದರರಾಜ್ ಅವರು ಸಿದ್ದಾಪುರ ಬಸ್ ಸ್ಟ್ಯಾಂಡ್ ಬಳಿ ರಜಿಯಾಬೇಗಂ ಅವರನ್ನು ಕಂಡು ಮನೆವರೆಗೆ ತಲುಪಿಸಿದ್ದಾರೆ. ಈ ವೇಳೆ ಮನಬಿಚ್ಚಿದ ರಜಿಯಾಬೇಗಂ, ನನಗೆ ಇರಲು ಸ್ವಂತ ಮನೆ ಇಲ್ಲ, ಬಾಡಿಗೆ ಮನೆಯಲ್ಲಿದ್ದೇನೆ. ತ್ರಿಚಕ್ರ ವಾಹನಕ್ಕಾಗಿ ಹಲವು ಬಾರಿ ಅಧಿಕಾರಿಗಳಿಗೆ ಮನವಿ ಮಾಡಿದ್ದೇನೆ. ಆದರೂ ಯಾವುದೇ ಪ್ರಯೋಜನವಾಗಿಲ್ಲ. ಒಂದು ಮೋಟರೈಸ್ಡ್ ತ್ರಿಚಕ್ರ ವಾಹನ ಕೊಟ್ಟರೆ ನನ್ನ ಬದುಕು ಸುಲಭವಾಗುತ್ತೆ. ಜೊತೆಗೆ ನಿವೇಶನ, ವಸತಿ ಮತ್ತು ಗ್ಯಾಸ್ ಸಿಲಿಂಡರ್ ಸೌಲಭ್ಯವೂ ಬೇಕು ಎಂದು ಕಣ್ಣೀರಿಟ್ಟರು.

ನಾನು ಶಾಲೆ ಕಲಿತಿಲ್ಲ. ಹೊಟ್ಟೆ ತುಂಬಿಸಿಕೊಳ್ಳುವುದೇ ಕಷ್ಟವಾಗಿದೆ ಎಂದು ತಮ್ಮ ಅಸಹಾಯಕತೆಯನ್ನು ತೋಡಿಕೊಂಡರು.ಬಡವಿಯ ಕಣ್ಣೀರಿಗೆ ಸ್ಪಂದಿಸುವವರಾರು? ಎಂಬ ಪ್ರಶ್ನೆ ಇದೀಗ ಇಡೀ ತಾಲ್ಲೂಕಿನಲ್ಲಿ ಕೇಳಿಬರುತ್ತಿದೆ.

**★ಪತ್ರಕರ್ತರ ಒತ್ತಾಯ:★**

> ಈ ಕುರಿತು ಪ್ರತಿಕ್ರಿಸಿದ ಪತ್ರಕರ್ತರು, ★ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ತಕ್ಷಣವೇ ರಜಿಯಾಬೇಗಂ ಅವರಿಗೆ ಮೋಟರೈಸ್ಡ್ ತ್ರಿಚಕ್ರ ವಾಹನ, ವೈದ್ಯಕೀಯ ಪರಿಹಾರ ನಿಧಿಯಿಂದ ಆರ್ಥಿಕ ನೆರವು ಮತ್ತು ವಸತಿ ಸೌಲಭ್ಯ ಕಲ್ಪಿಸಬೇಕು★ ಎಂದು ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

# ಮಂಗಳೂರಿನ ವೆನ್ಲಾಕ್ ಆಸ್ಪತ್ರೆಯಲ್ಲಿ ಕೋವಿಡ್‌ನಂತಹ ಸಾಂಕ್ರಾಮಿಕ ಎದುರಿಸಲು ಪ್ರತ್ಯೇಕ 'ಕ್ರಿಟಿಕಲ್ ಕೇರ್'

## ಸಾಂಕ್ರಾಮಿಕ ರೋಗಗಳು ಎದುರಾದರೆ ಬಳಸಲು ವೆನ್ಲಾಕ್ ಆವರಣದಲ್ಲೇ ಪ್ರತ್ಯೇಕ ಹಾಗೂ ಪರ್ಯಾಯ 'ಐಸೋಲೇಟೆಡ್ ಆಸ್ಪತ್ರೆ'

• **ಉದಯವಾಹಿನಿ ದಕ್ಷಿಣ ಕನ್ನಡ:**

ಕೋವಿಡ್ ಸಾಂಕ್ರಾಮಿಕ ಎದುರಾದ ಸಂದರ್ಭದಲ್ಲಿ ಮಂಗಳೂರಿನ ಇಡೀ ವೆನ್ಲಾಕ್ ಜಿಲ್ಲಾಸ್ಪತ್ರೆಯನ್ನೇ ಸಂಪೂರ್ಣವಾಗಿ ಕೋವಿಡ್ ಆಸ್ಪತ್ರೆಯನ್ನಾಗಿ ಪರಿವರ್ತಿಸಬೇಕಾಗಿ ಬಂದ ಪರಿಣಾಮ, ಸಾಮಾನ್ಯ ರೋಗಿಗಳು ಹಾಗೂ ಇತರ ತುರ್ತು ಚಿಕಿತ್ಸೆಗಳಿಗೆ ತೀವ್ರ ತೊಂದರೆಯಾಗಿತ್ತು. ಅಂತಹ ಪರಿಸ್ಥಿತಿ ಭವಿಷ್ಯದಲ್ಲಿ ಮರುಕಳಿಸದಂತೆ ತಡೆಯಲು, ಸಾಂಕ್ರಾಮಿಕ ರೋಗಗಳು

> 1 : 50 ಹಾಸಿಗೆಗಳ ಸಾಮರ್ಥ್ಯ
> 2 : ಏನೆಲ್ಲಾ ಸೌಲಭ್ಯಗಳಿವೆ?
> 3 : ಶಸ್ತ್ರಚಿಕಿತ್ಸಾ ಘಟಕ ವಿಭಾಗ

ಎದುರಾದರೆ ಬಳಸಲು ವೆನ್ಲಾಕ್ ಆವರಣದಲ್ಲೇ ಪ್ರತ್ಯೇಕ ಹಾಗೂ ಪರ್ಯಾಯ 'ಐಸೋಲೇಟೆಡ್ ಆಸ್ಪತ್ರೆ' ಮಾದರಿಯಲ್ಲಿ 24 ಕೋಟಿ ರೂ. ವೆಚ್ಚದ ನೂತನ 'ಕ್ರಿಟಿಕಲ್ ಕೇರ್ ಬ್ಲಾಕ್' ಸಿದ್ಧಗೊಳ್ಳುತ್ತಿದೆ. ಕೇಂದ್ರ ಸರ್ಕಾರದ 'ಪ್ರಧಾನಮಂತ್ರಿ ಆಯುಷ್ಮಾನ್ ಭಾರತ್ ಹೆಲ್ತ್ ಇನ್‌ಫ್ರಾಸ್ಟ್ರಕ್ಚರ್ ಮಿಷನ್' ಹಾಗೂ ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ (ಕೇಂದ್ರದ ಶೇ.60 ಮತ್ತು ರಾಜ್ಯದ ಶೇ.40 ಅನುದಾನ) ನಿರ್ಮಾಣವಾಗುತ್ತಿರುವ ಈ ಸುಸಜ್ಜಿತ ಕಟ್ಟಡದ ಕಾಮಗಾರಿ ಬಹುತೇಕ ಪೂರ್ಣಗೊಂಡಿದ್ದು, ಮುಂದಿನ ಎರಡರಿಂದ ಮೂರು ತಿಂಗಳಲ್ಲಿ ರೋಗಿಗಳ ಬಳಕೆಗೆ ಲಭ್ಯವಾಗಲಿದೆ.

☛ ಉದಯವಾಹಿನಿ ಚಿತ್ರ



> ಈ ಕ್ರಿಟಿಕಲ್ ಕೇರ್ ಘಟಕದ ನಿರ್ವಹಣೆಗೆ ಅಗತ್ಯವಿರುವ ಮಾನವ ಸಂಪನ್ಮೂಲವನ್ನು ಸರ್ಕಾರ ಈಗಾಗಲೇ ಮಂಜೂರು ಮಾಡಿದೆ. ಓರ್ವ ಫಿಜಿಶಿಯನ್, ಸರ್ಜನ್, ಅರಿವಳಿಕೆ ತಜ್ಞ, 12 ಮಂದಿ ನರ್ಸಿಂಗ್ ಸಿಬ್ಬಂದಿ ಹಾಗೂ 9 ಮಂದಿ ಗ್ರೂಪ್–ಡಿ ಸಿಬ್ಬಂದಿಗಳ ನೇಮಕಾತಿಗೆ ಆಡಳಿತಾತ್ಮಕ ಅನುಮೋದನೆ ದೊರೆತಿದೆ.


> ಭವಿಷ್ಯದಲ್ಲಿ ಅಂತಹ ಸಾಂಕ್ರಾಮಿಕ ರೋಗಗಳು ಅಥವಾ ಹೈ–ಪ್ರೊಫೈಲ್ ಇನ್‌ಫೆಕ್ಷನ್‌ಗಳು ಎದುರಾದರೆ ಬೇರೆ ವಿಭಾಗಗಳಿಗೆ ತೊಂದರೆಯಾಗದಂತೆ ಪ್ರತ್ಯೇಕ ಐಸೋಲೇಟೆಡ್ ಆಸ್ಪತ್ರೆ ಬೇಕು ಎಂಬ ಉದ್ದೇಶದಿಂದಲೇ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಯಡಿ ಈ ಕ್ರಿಟಿಕಲ್ ಕೇರ್ ಬ್ಲಾಕ್ ನಿರ್ಮಿಸಲಾಗಿದೆ.

**ಸಾಂಕ್ರಾಮಿಕ ರೋಗಗಳಿಗೆ 'ಪ್ರತ್ಯೇಕ ಆಸ್ಪತ್ರೆ' ಪರಿಕಲ್ಪನೆ:** ಭವಿಷ್ಯದಲ್ಲಿ ಕೋವಿಡ್, ನಿಫಾ ಅಥವಾ ಯಾವುದೇ ಗಂಭೀರ ಸಾಂಕ್ರಾಮಿಕ ರೋಗಗಳು ಕಾಣಿಸಿಕೊಂಡರೆ, ಮುಖ್ಯ ಆಸ್ಪತ್ರೆಯ ಸಾಮಾನ್ಯ ಕಾರ್ಯಚಟುವಟಿಕೆಗಳಿಗೆ ಅಡ್ಡಿಯಾಗದಂತೆ ಈ ಇಡೀ ಕ್ರಿಟಿಕಲ್ ಕೇರ್ ಬ್ಲಾಕ್ ಅನ್ನು ತಕ್ಷಣವೇ 'ಐಸೋಲೇಟೆಡ್ ಆಸ್ಪತ್ರೆ'ಯನ್ನಾಗಿ ಪರಿವರ್ತಿಸಲಾಗುತ್ತದೆ. ಆ ಮೂಲಕ ಸಾಂಕ್ರಾಮಿಕ ರೋಗಿಗಳಿಗೆ ಪ್ರತ್ಯೇಕವಾಗಿ ಅತ್ಯಾಧುನಿಕ ಐಸಿಯು, ವೆಂಟಿಲೇಟರ್ ಹಾಗೂ ತುರ್ತು ಚಿಕಿತ್ಸೆ ನೀಡುವ ಸಮಗ್ರ ವ್ಯವಸ್ಥೆ ಇಲ್ಲಿದೆ.

**ತುರ್ತು ಟ್ರಾಮಾ ಕೇರ್ ಹಾಗೂ ಒಪಿಡಿ ಪುನರ್ವ್ಯವಸ್ಥೆಗೆ ಬಳಕೆ:** ಸಾಂಕ್ರಾಮಿಕ ರೋಗಗಳಿಲ್ಲದ ಸಾಮಾನ್ಯ ದಿನಗಳಲ್ಲಿ ಈ ಘಟಕವನ್ನು ಗಂಭೀರ ಅಪಘಾತ, ತೀವ್ರ ಸುಟ್ಟಗಾಯ, ಹೃದಯಾಘಾತ ಹಾಗೂ ಉಸಿರಾಟದ ತೊಂದರೆಯಿಂದ ಬರುವ ರೋಗಿಗಳಿಗೆ ತಕ್ಷಣದ ಜೀವ ರಕ್ಷಕ ಚಿಕಿತ್ಸೆ ನೀಡುವ 'ಟ್ರಾಮಾ ಕೇರ್ ಸೆಂಟರ್' ಆಗಿ ಬಳಸಲಾಗುತ್ತದೆ. ಜೊತೆಗೆ, ವೆನ್ಲಾಕ್‌ನ ಹಳೆಯ ಒಪಿಡಿ ಕಟ್ಟಡವನ್ನು ಕೆಡವಿ ಹೊಸ ಕಟ್ಟಡ ನಿರ್ಮಿಸುವ ಕಾಮಗಾರಿ ನಡೆಯಲಿರುವುದರಿಂದ, ಸದ್ಯಕ್ಕೆ ತಾತ್ಕಾಲಿಕವಾಗಿ ಒಪಿಡಿ ಸೇವೆಗಳು ಹಾಗೂ ಮುಖ್ಯ ಔಷಧ ಸಂಗ್ರಹಣಾ ಕೊಠಡಿಯನ್ನು ಈ ನೂತನ ಸಿಸಿಬಿ ಬ್ಲಾಕ್‌ನ ಬೇಸ್‌ಮೆಂಟ್ ಇತರ ವಿಭಾಗಗಳಿಗೆ ಸ್ಥಳಾಂತರಿಸಲು ಯೋಜನೆ ರೂಪಿಸಲಾಗಿದೆ.ದಕ್ಷಿಣ ಕನ್ನಡ, ಉಡುಪಿ ಮಾತ್ರವಲ್ಲದೆ ನೆರೆಯ

ಕಾಸರಗೋಡು ಸೇರಿದಂತೆ ಉತ್ತರ ಕೇರಳ ಭಾಗದ ಲಕ್ಷಾಂತರ ಬಡ ಜನರಿಗೆ ವೆನ್ಲಾಕ್ ಆಸ್ಪತ್ರೆ ಜೀವನಾಡಿಯಾಗಿದೆ. 24 ಕೋಟಿ ರೂ ವೆಚ್ಚದ ಈ ಸುಸಜ್ಜಿತ ಕ್ರಿಟಿಕಲ್ ಕೇರ್ ಘಟಕ ಆರಂಭವಾದರೆ, ಒಂದೇ ಸೂರಿನಡಿ ತುರ್ತು ಶಸ್ತ್ರಚಿಕಿತ್ಸೆ, ಐಸಿಯು, ಡಯಾಲಿಸಿಸ್ ಸಾಂಕ್ರಾಮಿಕ ರೋಗಗಳ ಪ್ರತ್ಯೇಕ ಚಿಕಿತ್ಸೆ ಲಭ್ಯವಾಗಿ ಜಿಲ್ಲೆಯ ಸಾರ್ವಜನಿಕ ಆರೋಗ್ಯ ಕ್ಷೇತ್ರಕ್ಕೆ ಹೊಸ ಬಲ ಸಿಗಲಿದೆ.

> ಸಾಂಕ್ರಾಮಿಕ ರೋಗ ಬಂದ ತಕ್ಷಣವೇ ಇದನ್ನು ಐಸೋಲೇಟೆಡ್ ಆಸ್ಪತ್ರೆಯಾಗಿ ಮಾರ್ಪಡಿಸಿ ಅತ್ಯಾಧುನಿಕ ಚಿಕಿತ್ಸೆ ನೀಡಲು ಸಕಲ ವ್ಯವಸ್ಥೆ ಮಾಡಲಾಗಿದೆ. ಸಾಮಾನ್ಯ ದಿನಗಳಲ್ಲಿ ಇದು ತುರ್ತು ಟ್ರಾಮಾ ಕೇರ್ ಆಗಿ ಕಾರ್ಯನಿರ್ವಹಿಸಲಿದ್ದು, ಇನ್ನು ಎರಡರಿಂದ ಮೂರು ತಿಂಗಳಲ್ಲಿ ಲೋಕಾರ್ಪಣೆಗೊಳ್ಳಲಿದೆ ಎಂದರು. -ಅಧೀಕ್ಷಕ ಡಾ.ಶಿವಪ್ರಸಾದ್



☛ ಉದಯವಾಹಿನಿ ಚಿತ್ರ